ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸತ್ಯಮೇವ ಜಯತೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ–13 | ISSUE - 48 ಸಂಚಿಕೆ– 48 | PAGE- 8 ಪುಟ–8 | ಗುರುವಾರ 27.03.2025 | RS.2/- ಬೆಲೆ 2/–

# ಬಿಜೆಪಿಯಿಂದ 6 ವರ್ಷ ಯತ್ನಾಳ್ ಉಚ್ಚಾಟನೆ

ಮಲ್ಲಮ ನುಡಿ ವಾರ್ತೆ

ನವದೆಹಲಿ:ಮಾ.26: ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಹಾಗೂ ಅವರ ಪುತ್ರ, ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಅವರ ವಿರುದ್ಧ ಬಹಿರಂಗವಾಗಿಯೇ ವಾಗ್ದಾಳಿ ನಡೆಸುತ್ತಿದ್ದ ವಿಜಯಪುರ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ಕೊನೆಗೂ ಹೈಕಮಾಂಡ್ ಕ್ರಮ ಕೈಗೊಂಡಿದೆ.

ಯತ್ನಾಳ್ ಅವರನ್ನು ಆರು ವರ್ಷಗಳ ಕಾಲ ಪಕ್ಷದಿಂದ ಉಚ್ಚಾಟಿಸಿ ಬಿಜೆಪಿ ಕೇಂದ್ರ ಶಿಸ್ತು ಸಮಿತಿ ಬುಧವಾರ ಆದೇಶ ಹೊರಡಿಸಿದೆ. ಈ ಮೂಲಕ ರಾಜ್ಯ ಬಿಜೆಪಿಯಲ್ಲಿನ ಬಣಬಡಿದಾಟಕ್ಕೆ ಕೊನೆಗೂ ಹೈಕಮಾಂಡ್ ಬ್ರೇಕ್ ಹಾಕಿದೆ.

ಪಕ್ಷದ ಕೇಂದ್ರ ಶಿಸ್ತು ಸಮಿತಿಯು 2025 ಫೆಬ್ರವರಿ 10 ರಂದು ನೀಡಿದ್ದ ಶೋಕಾಸ್ ನೋಟಿಸ್‌ಗೆ ನಿಮ್ಮ ಪ್ರತಿಕ್ರಿಯೆಯನ್ನು ಪರಿಗಣಿಸಿದೆ ಮತ್ತು ಹಿಂದಿನ ಶೋಕಾಸ್ ನೋಟಿಸ್‌ಗಳಿಗೆ ಪ್ರತಿಕ್ರಿಯೆಯಾಗಿ ಉತ್ತಮ ನಡವಳಿಕೆಯ ಭರವಸೆಗಳನ್ನು ನೀಡಿದ್ದರೂ ಸಹ, ನೀವು ಪಕ್ಷದ ಶಿಸ್ತನ್ನು ಪದೇ ಪದೇ ಉಲ್ಲಂಘಿಸುತ್ತಿರುವುದನ್ನು ಗಂಭೀರವಾಗಿ ಪರಿಗಣಿಸಿದೆ. ಆದ್ದ–ರಿಂದ, ನಿಮ್ಮನ್ನು ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದ ತಕ್ಷಣದಿಂದ ಜಾರಿಗೆ ಬರುವಂತೆ 6 ವರ್ಷಗಳ ಅವಧಿಗೆ ಉಚ್ಚಾಟಿಸಲು ನಿರ್ಧರಿಸಲಾಗಿದೆ ಎಂದು ಕೇಂದ್ರ ಶಿಸ್ತು ಸಮಿತಿ ಆದೇಶದಲ್ಲಿ ತಿಳಿಸಲಾಗಿದೆ.

ನೀವು ಇಲ್ಲಿಯವರೆಗೆ ಹೊಂದಿದ್ದ ಯಾವುದೇ ಪಕ್ಷದ ಹುದ್ದೆಯಿಂದ ನಿಮ್ಮನ್ನು ತೆಗೆದುಹಾಕಲಾಗಿದೆ ಎಂದು ಬಿಜೆಪಿ ಕೇಂದ್ರ ಶಿಸ್ತು ಸಮಿತಿಯ ಕಾರ್ಯದರ್ಶಿ ಓಂ ಪಾಠಕ್ ಅವರು ಹೊರಡಿಸಿರುವ ಆದೇಶದಲ್ಲಿ ತಿಳಿಸಲಾಗಿದೆ.



**ಯತ್ನಾಳ ಅಸಮಾಧಾನ:**

ಬಿಜೆಪಿ ಪಕ್ಷದಿಂದ 6 ವರ್ಷಗಳ ಉಚ್ಚಾಟನೆ ಮಾಡಿದ ಬೆನ್ನಲ್ಲೇ ಪಕ್ಷದ ನಿರ್ಧಾರದ ಕುರಿತು ಯತ್ನಾಳ್ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಉಚ್ಚಾಟನೆ ಕುರಿತು ಟ್ವೀಟ್ ಮೂಲಕ ಶಾಸಕ ಯತ್ನಾಳ್ ಪ್ರತಿಕ್ರಿಯೆ ನೀಡಿದ್ದು, 'ಸತ್ಯವಂತರಿಗಿದು ಕಾಲವಲ್ಲ.. ದುಷ್ಟಜನರಿಗೆ ಸುಭಿಕ್ಷಕಾಲ ॥ ಉಪಕಾರ ಮಾಡಿದರೆ ಅಪಕರಿಸುವ ಕಾಲ.. ಸಕಲವು ತಿಳಿದವಗೆ ದುರ್ಭಿಕ್ಷ ಕಾಲ. ಧರ್ಮ ಮಾಡುವಗೆ ನಿರ್ಮೂಲವಾಗುವ ಕಾಲ.. ಕರ್ಮಿ ಪಾತಕರಿಗೆ ಬಹು ಸೌಖ್ಯಕಾಲ..

ಸತ್ಯವಂತರಿಗಿದು ಕಾಲವಲ್ಲ ಎಂಬ ಪುರಂದರ ದಾಸರ ಸಾಲುಗಳನ್ನು ಬರೆದು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಅಲ್ಲದೆ, 'ವಂಶಪಾರಂಪರ್ಯ ರಾಜಕೀಯ, ಭ್ರಷ್ಟಾಚಾರ, ಪಕ್ಷದೊಳಗಿನ ಸುಧಾರಣೆಗಳ ವಿರುದ್ಧ ಮಾತನಾಡಿದ್ದಕ್ಕಾಗಿ, ಏಕವ್ಯಕ್ತಿ ದಬ್ಬಾಳಿಕೆಯನ್ನು ತೆಗೆದುಹಾಕಿ ಮತ್ತು ಉತ್ತರ ಕರ್ನಾಟಕವನ್ನು ಅಭಿವೃದ್ಧಿಪಡಿಸಲು ವಿನಂತಿಸಿದ್ದಕ್ಕಾಗಿ ಪಕ್ಷವು ನನ್ನನ್ನು 6 ವರ್ಷಗಳ ಕಾಲ ಪಕ್ಷದಿಂದ ಹೊರಹಾಕಿದೆ. 'ತಪ್ಪನ್ನು .. ತಪ್ಪು ಎಂದು ತೋರಿಸಿದ್ದಕ್ಕೆ ' ನನಗೆ ಸಿಕ್ಕ ಪ್ರತಿಫಲವಿದು' ಎಂದು ಹೇಳಿದ್ದಾರೆ.

**ಹೋರಾಟ ನಿಲ್ಲಿಸುವುದಿಲ್ಲ**

ಇದೇ ವೇಳೆ, ಉಚ್ಚಾಟನೆಯಾದರೂ ಹೋರಾಟ ನಿಲ್ಲಿಸುವುದಿಲ್ಲ ಎಂದು ಘೋಷಣೆ ಮಾಡಿರುವ ಯತ್ನಾಳ್, 'ಕೆಲವು ಸ್ಥಾಪಿತ ಹಿತಾಸಕ್ತಿಗಳು ತಮ್ಮ ಕಾರ್ಯಸೂಚಿಯನ್ನು ಯಶಸ್ವಿಯಾಗಿ ಮುಂದುವರಿಸುವಲ್ಲಿ ತಮ್ಮ ಪಾತ್ರವನ್ನು ವಹಿಸಿವೆ. ನನ್ನನ್ನು ಅಮಾನತುಗೊಳಿಸುವ ನಿರ್ಧಾರವು ಭ್ರಷ್ಟಾಚಾರ, ಕುಟುಂಬ ರಾಜಕೀಯ, ಉತ್ತರ ಕರ್ನಾಟಕದ ಅಭಿವೃದ್ಧಿ ಮತ್ತು ಹಿಂದುತ್ವದ ವಿರುದ್ಧದ ನನ್ನ ಹೋರಾಟವನ್ನು ತಡೆಯುವುದಿಲ್ಲ. ನಾನು ನನ್ನ ಜನರಿಗೆ ಅದೇ ಹುರುಪು ಮತ್ತು ದೃಢತೆಯಿಂದ ಸೇವೆ ಸಲ್ಲಿಸುವುದನ್ನು ಮುಂದುವರಿಸುತ್ತೇನೆ. ಎಲ್ಲಾ ಕಾರ್ಯಕರ್ತರಿಗೆ, ಹಿತೈಷಿಗಳಿಗೆ, ಸ್ನೇಹಿತರಿಗೆ, ಪರಿಚಯಸ್ಥರಿಗೆ, ಸ್ವಾಮೀಜಿಗಳಿಗೆ, ಮಾಧ್ಯಮಗಳಿಗೆ, ಬೆಂಬಲದ ಆಧಾರಸ್ತಂಭವಾಗಿರುವ ನನ್ನ ಕುಟುಂಬಕ್ಕೆ ಮತ್ತು ಸರ್ವಶಕ್ತನಿಗೆ ನಾನು ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದು ಟ್ವೀಟ್ ಮಾಡಿದ್ದಾರೆ.

## 4 ಲಕ್ಷ ಮೌಲ್ಯದ ಪಡಿತರ ಅಕ್ಕಿ ಜಪ್ತಿ

ಮಲ್ಲಮ್ಮನುಡಿ ವಾರ್ತೆ ಬೀದರ.ಮಾ. 26: ನಗರದ ಹಳೆ ನಾವದಗೇರಿಯ ಮಳಿಗೆಯೊಂದರಲ್ಲಿ ಅಕ್ರಮವಾಗಿ ಸಂಗ್ರಹಿಸಿ ಇಡಲಾಗಿದ್ದ 4 ಲಕ್ಷ ರೂ ಮೌಲ್ಯದ ಪಡಿತರ ಅಕ್ಕಿಯನ್ನು ಮಾರ್ಕೆಟ್ ಠಾಣೆ ಪೊಲೀಸರು ಜಪ್ತಿ ಮಾಡಿದ್ದಾರೆ.

ಒಬ್ಬ ಆರೋಪಿಯನ್ನು ವಶಕ್ಕೆ ಪಡೆದು ವಿಚಾರಣೆಗೆ ಒಳಪಡಿಸಿ ಪ್ರಕರಣ ದಾಖಲಿಸಿದ್ದಾರೆ.




'ಅನ್ನಭಾಗ್ಯ' ಯೋಜನೆಯಡಿ ನೀಡಲಾಗುವ ಪಡಿತರ ಅಕ್ಕಿ ಇದಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮಾರ್ಕೆಟ್ ಠಾಣೆ ಪೊಲೀಸ್ ಸಬ್ ಇನ್‌ಸ್ಪೆಕ್ಟರ್ ಸಿದ್ದಣ್ಣ ಗಿರಿಗೌಡರ್ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಸಿಬ್ಬಂದಿ ಸಂತೋಷ, ಸಿದ್ರಾಮ, ವಿಜಯಕುಮಾರ, ಫಾರೂಕ್ ಅಹಮ್ಮದ್, ಆಹಾರ ಇಲಾಖೆಯ ನಿರೀಕ್ಷಕರಾದ ಶೋಭಾ, ರಾಮ ರತನ್ ದೇಗಲೆ ಪಾಲ್ಗೊಂಡಿದ್ದರು.

## ಬ್ರಾಹ್ಮಣ ಸಮಾಜ ಹಿರಿಯರ ಆಶೀರ್ವಾದ ನನ್ನ ಮೇಲಿದೆ ಕುಲಕರ್ಣಿ



ಮಲ್ಲಮ್ಮ ನುಡಿ ವಾರ್ತೆ

ಬೀದರ್. ಈ ಬಾರಿ ಬ್ರಾಹ್ಮಣ ಸಮಾಜದ ಜಿಲ್ಲಾಧ್ಯಕ್ಷರ ಸ್ಥಾನಕ್ಕೆ ಸ್ಪರ್ಧೆ ಮಾಡಲಾಗಿದ್ದು. ಈ ಬಾರಿ ನಮ್ಮ ಸಮಾಜದ ಗುರುಗಳು, ಹಿರಿಯರು, ಸಮಾಜ ಬಾಂಧವರು ನನ್ನ ಬೆಂಬಲಕ್ಕೆ ನಿಂತಿದ್ದಾರೆ ಎಂದು ವೆಂಕಟ ಕುಲಕರ್ಣಿ ರವರು ಪತ್ರಿಕೆಗೆ ಬುಧುವಾರ ಮಾಹಿತಿ ನೀಡಿದ್ದಾರೆ.

(2ನೇ ಪುಟ ನೋಡಿ)

## ಹೊಸ ವಿದ್ಯುತ್ ಸಂಪರ್ಕಕ್ಕೆ ಸ್ಮಾರ್ಟ್ ಮೀಟರ್ ಕಡ್ಡಾಯ: ಕೆ.ಜೆ ಜಾರ್ಜ್

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮಾ.26: ರಾಜ್ಯದಲ್ಲಿ ಹೊಸ ಹಾಗೂ ತಾತ್ಕಾಲಿಕ ವಿದ್ಯುತ್ ಸಂಪರ್ಕಗಳಿಗೆ ಸ್ಮಾರ್ಟ್ ಮೀಟರ್ ವ್ಯವಸ್ಥೆ ಕಡ್ಡಾಯಗೊಳಿಸಲಾಗಿದೆ ಎಂದು ಇಂಧನ ಸಚಿವ ಕೆ.ಜೆ. ಜಾರ್ಜ್ ಬುಧವಾರ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೇಂದ್ರ ಇಂಧನ ಸಚಿವಾಲಯವು ಫೆ. 22ರಂದು ಹೊರಡಿಸಿದ್ದ ಅಧಿಸೂಚನೆ ಅನ್ವಯ ಕರ್ನಾಟಕ ಮತ್ತು ತೆಲಂಗಾಣ ಬಿಟ್ಟು ಬೇರೆ ಎಲ್ಲಾ ರಾಜ್ಯಗಳಲ್ಲಿ ಸ್ಮಾರ್ಟ್ ಮೀಟರ್ ಜಾರಿಗೆ ತರಲಾಗಿದೆ. ಇತ್ತೀಚೆಗೆ ಕೇಂದ್ರ ಇಂಧನ ಸಚಿವರನ್ನು ಭೇಟಿ ಮಾಡಿದಾಗಲೂ ಸ್ಮಾರ್ಟ್ ಮೀಟರ್ ಅಳವಡಿಸಲು ಸೂಚಿಸಿದರು ಎಂದು ತಿಳಿಸಿದರು.

(2ನೇ ಪುಟ ನೋಡಿ)



## ಒಂದನೇ ಪುಟದಿಂದ

### ಆಶಿರ್ವಾದ ನನ್ನ ಮೇಲಿದೆ ಕುಲಕರ್ಣಿ

ವಿಶೇಷವಾಗಿ ಮಾಣಿಕನಗರದ ಪಿಠಾಧಿಪತಿಗಳಾದ ಡಾ.ಜ್ಞಾನರಾಜ ಪ್ರಭುಗಳು, ಸೇರಿದಂತೆ ಸಾಕಷ್ಟು ಜಗದ್ಗುರು ಗಳು ನನಗೆ ಸಹಕರಿಸುತ್ತಿದ್ದಾರೆ. ನಾನು ಸಮಾಜಕ್ಕಾಗಿ ಸಾಕಷ್ಟು ದುಡದಿದ್ದೆನೆ. ಅದನ್ನು ಪರಿಗಣಿಸಿ ಬ್ರಾಹ್ಮಣ ಸಮಾಜ ಜಿಲ್ಲಾ ಅಧ್ಯಕ್ಷರಾಗಿ ನನಗೆ ಆಯ್ಕೆ ಮಾಡಲಿದ್ದಾರೆ ಎಂಬ ವಿಶ್ವಾಸ ನನಗಿದೆ ಎಂದು ವೆಂಕಟೇಶ ಸುಧಾಕರ ಕುಲಕರ್ಣಿ ರವರು ಪತ್ರಿಕೆಗೆ ತಿಳಿಸಿದ್ದಾರೆ.

### ಮೀಟರ್ ಕಡ್ಡಾಯ: ಕೆ.ಜೆ ಜಾರ್ಜ್

ಸ್ಮಾರ್ಟ್ ಮೀಟರ್ ಪೂರೈಕೆಗೆ ಬೆಸ್ಕಾಂನವರು ಟೆಂಡರ್ ಕರೆದಿದ್ದಾರೆ. ಮೂರು ಪಾರ್ಟ್ ಟೆಂಡರ್ ಕರೆದಿದ್ದಾರೆ. ಒಬ್ಬರು ಸ್ಮಾರ್ಟ್ ಮೀಟರ್ ಅಳವಡಿಸುತ್ತಾರೆ. ಸಿಮ್ ಕಾರ್ಡ್ ಹಾಕುವವರು ಬೇರೆ ಇರ್ತಾರೆ. ಟೆಂಡರ್ ಕೊಟ್ಟಿದ್ರಲ್ಲಿ ತಪ್ಪಾಗಿದ್ರೆ ತಡೆಯುತ್ತೇವೆ ಎಂದು ಹೇಳಿದರು.

ರಾಜ್ಯದಲ್ಲಿ ಕಪ್ಪು ಪಟ್ಟಿಗೆ ಸೇರಿದ ಕಂಪನಿಗಳು ಸ್ಮಾರ್ಟ್ ವಿದ್ಯುತ್ ಮೀಟರ್ ಪೂರೈಕೆ ಮಾಡುತ್ತಿವೆ ಎಂಬ ಬಿಜೆಪಿ ಶಾಸಕ ಅಶ್ವತ್ಥ ನಾರಾಯಣ್ ಅವರ ಆರೋಪವನ್ನು ತಳ್ಳಿಹಾಕಿದ ಕೆಜೆ ಜಾರ್ಜ್, ಇದು ಸಂಪೂರ್ಣ ತಪ್ಪು. ಮೀಟರ್ ಪೂರೈಕೆ ಮಾಡುತ್ತಿರುವ ಕಂಪನಿಗಳು ಕಪ್ಪು ಪಟ್ಟಿಯಲ್ಲಿ ಇಲ್ಲ ಎಂದರು.

ಉತ್ತರ ಪ್ರದೇಶ ಸರ್ಕಾರ ಎರಡು ವರ್ಷಗಳ ಕಾಲ ಕಂಪನಿಯನ್ನು ನಿರ್ಬಂಧಿಸಿದೆ ಆದರೆ ಆ ಕಂಪನಿಯನ್ನು ಕಪ್ಪು ಪಟ್ಟಿಗೆ ಸೇರಿಸಲಾಗಿಲ್ಲ. ಯುಪಿ ಸರ್ಕಾರ ನಿರ್ಬಂಧ ಹೇರಿದಾಗ ತನಿಖೆ ಮತ್ತು ದಂಡ ವಿಧಿಸುವುದು ಸರ್ಕಾರದ ಕರ್ತವ್ಯವಾಗಿತ್ತು. ಇತರ 16 ರಾಜ್ಯಗಳು ಸಂಸ್ಥೆಗೆ ಗುತ್ತಿಗೆ ನೀಡಿವೆ ಎಂದು ಸಚಿವರು ಹೇಳಿದರು.

ಸ್ಮಾರ್ಟ್ ಮೀಟರ್ ನಲ್ಲಿ ವಿದ್ಯುತ್ ಬಳಕೆ, ವೋಲ್ಟೇಜ್ ಮಟ್ಟ, ಲೋಡ್ ಮತ್ತಿತರ ತಾಂತ್ರಿಕ ಅಂಶಗಳ ಮಾಹಿತಿ ದಾಖಲಾಗುತ್ತದೆ. ಈ ಮಾಹಿತಿಯನ್ನು ಸರ್ವರ್‌ಗೆ ರವಾನಿಸಲಾಗುತ್ತದೆ.

ಸ್ಮಾರ್ಟ್ ಮೀಟರ್ ಪೂರೈಕೆಯ ಟೆಂಡರ್ ಪ್ರಕ್ರಿಯೆಯಲ್ಲಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಭಾರೀ ಅಕ್ರಮವೆಸಗಿದೆ. ಕೆಟಿಪಿಪಿ ಕಾಯ್ದೆ ಉಲ್ಲಂಘಿಸಿದ್ದು, ರೂ. 15,500 ಕೋಟಿ ಹಗರಣವಾಗಿದೆ ಎಂದು ಆರೋಪಿಸಿದ್ದ ಶಾಸಕ ಅಶ್ವತ್ಥ ನಾರಾಯಣ, ಎಸ್ಕಾಂಗಳು ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ (ಕೆಇಆರ್‌ಸಿ) ನಿಯಮಗಳಿಗೆ ಬದ್ಧವಾಗಿರಬೇಕು ಎಂದು ಒತ್ತಾಯಿಸಿದ್ದರು.

## ಮೇಸನ್ ಕೀಟ್‌ಗಳಿಗಾಗಿ ಕಾರ್ಮಿಕರಿಂದ ಅರ್ಜಿ ಆಹ್ವಾನ

ಬೀದರ : ಮಾ.26: ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯಿಂದ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಮೆಸನ್ ಕಿಟ್‌ಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಬೀದರ ಉಪ ವಿಭಾಗದ ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೇಂದ್ರ ಕಛೇರಿಯಿಂದ ಸ್ವೀಕೃತಿಯಾದ 1000 ಮೇಸನ್ ಕೀಟ್‌ಗಳನ್ನು ಪ್ರತಿ ಕಾರ್ಮಿಕ ನಿರೀಕ್ಷಕರ ಕಛೇರಿಗಳಿಗೆ 200 ಕಿಟ್‌ಗಳಂತೆ ಹಂಚಿಕೆ ಮಾಡಲಾಗಿರುತ್ತದೆ.

ಕಾರಣ ಅರ್ಹರು ದಿನಾಂಕ: 05–04–2025 ರೊಳಗೆ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ತಮ್ಮ ಚಾಲ್ತಿಯಲ್ಲಿರುವ ಹಾಗೂ ಇ–ಕೆ.ವಾಯ್.ಸಿ. ಮಾಡಿರುವ ಕಟ್ಟಡ ಕಾರ್ಮಿಕರ ಗುರುತಿನ ಚೀಟಿ ಹಾಗೂ ಆಧಾರ ಕಾರ್ಡ ಝಿರಾಕ್ಸ್ ಪ್ರತಿಯೊಂದಿಗೆ ಆಯಾ ಕಾರ್ಮಿಕ ನಿರೀಕ್ಷಕರ ಕಛೇರಿಗಳಾದ ಬೀದರ, ಭಾಲ್ಕಿ, ಔರಾದ (ಬಿ), ಹುಮನಾಬಾದ ಮತ್ತು ಬಸವಕಲ್ಯಾಣದಲ್ಲಿ ಅರ್ಜಿ ಸಲ್ಲಿಸಬೇಕು. ಸ್ವೀಕೃತಿಯಾದ ಅರ್ಜಿಗಳನ್ನು ಪಟ್ಟಿ ಮಾಡಿ ಜೇಷ್ಠತೆ ಆಧಾರದ ಮೇಲೆ ಹಂಚಿಕೆ ಮಾಡಲಾಗುವುದೆಂದು ಅವರು ತಿಳಿಸಿದ್ದಾರೆ.

## ತಾಯಿ-ಮಕ್ಕಳ ಸಾವು ತಡೆಗೆ "ಕಿಲ್ಕಾರಿ" ಮೊಬೈಲ್ ಆರೋಗ್ಯ ಸೇವೆ ಆರಂಭ

ಮಲ್ಲಮ್ಮ ನುಡಿ ವಾರ್ತೆ ಬೀದರ : ಮಾ.26: ರಾಜ್ಯ ಸರ್ಕಾರದಿಂದ ತಾಯಿ ಮಕ್ಕಳ ಸಾವು ತಡೆಗೆ ಮಹತ್ವದ ಕ್ರಮಕ್ಕಾಗಿ "ಕಿಲ್ಕಾರಿ" ಸೇವೆ ಆರಂಭ ಮಾಡಿರುತ್ತದೆ. ತಾಯಿ ಮತ್ತು ಮಕ್ಕಳ ಆರೋಗ್ಯ ಸೇವೆ ನೀಡುವ ಉದ್ದೇಶದಿಂದ ಆರೋಗ್ಯ ಇಲಾಖೆಯು ತಾಯಿಯಂದಿರು ಹಾಗೂ ಮಕ್ಕಳು ತೆಗೆದುಕೊಳ್ಳಬೇಕಾದ ಲಸಿಕೆ, ಆರೋಗ್ಯ ಕ್ರಮಗಳ ಬಗ್ಗೆ ಕರೆ ಮಾಡಿ ಮಾಹಿತಿ ನೀಡುವ "ಕಿಲ್ಕಾರಿ ಎಂಬ ಉಚಿತ ಮೊಬೈಲ್" ಆರೋಗ್ಯ ಸೇವೆಯನ್ನು ಜಾರಿಗೆ ತಂದಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಜಿಲ್ಲೆಯಲ್ಲಿರುವ ಎಲ್ಲಾ ಗರ್ಭಿಣಿಯರು ಹಾಗೂ ಮಕ್ಕಳಿಗೆ ಇದರಿಂದ ಅನುಕೂಲವಾಗಲಿದೆ. ನಾನಾ ಕಾರಣಗಳಿಗೆ ತಾಯಿ ಮತ್ತು ನವಜಾತ ಶಿಶುಗಳ ಮರಣ ಸಂಭವಿಸುವ ಸಾಧ್ಯತೆ ಇದ್ದು ಅದನ್ನು ತಪ್ಪಿಸಲು ಕೇಂದ್ರ ಸರ್ಕಾರ "ಕಿಲ್ಕಾರಿ" ಎಂಬ ಉಚಿತ ಮೊಬೈಲ್ ಆರೋಗ್ಯ ಸೇವೆಯನ್ನು ಜಾರಿಗೆ ತಂದಿದೆ. ಗರ್ಭಧಾರಣೆ, ಗರ್ಭಿಣಿ ತಾಯಿ ಮತ್ತು ಮಗುವಿನ ಆರೋಗ್ಯದ ಮಾಹಿತಿಯನ್ನು ನೇರವಾಗಿ ಕುಟುಂಬಗಳ ಮೊಬೈಲ್ ಫೋನ್‌ಗೆ 01244451660 ಕಿಲ್ಕಾರಿ ಮೊಬೈಲ್ ಸಂಖ್ಯೆ ಮೂಲಕ ತಲುಪಿಸಲಾಗುತ್ತದೆ. ಈ ಸಂಖ್ಯೆಯಿಂದ ಕರೆ ಡಾ.ಅನಿತಾ ಅನ್ನುವ ಒಬ್ಬ ಕಾಲ್ಪನಿಕ ವೈದ್ಯರಿಂದ ಬರುತ್ತದೆ. ಆದ್ದರಿಂದ ಗೊತ್ತಿಲ್ಲದ ಸಂಖ್ಯೆ ಎಂದು ನಿರ್ಲಕ್ಷ ಮಾಡದೇ ಕರೆ ಸ್ವೀಕಾರ ಮಾಡಿ ಮಾಹಿತಿ ಪಡೆದುಕೊಳ್ಳಬೇಕು. ಕರೆಯನ್ನು ಸ್ವೀಕರಿಸಲು ಸಾಧ್ಯವಾಗದಿದ್ದಲ್ಲಿ 14423 ಸಂಖ್ಯೆಗೆ ನೋಂದಾಯಿತ ನಿಮ್ಮ ಮೊಬೈಲ್ ಸಂಖ್ಯೆಯಿಂದ ಪುನಃ ಕರೆ ಮಾಡುವ ಮೂಲಕ ತಾಯಿ ಮತ್ತು ಮಕ್ಕಳ ಆರೋಗ್ಯ ಸೇವೆಗಳ ಬಗ್ಗೆ ಮಾಹಿತಿಯನ್ನು ಉಚಿತವಾಗಿ ಪಡೆಯಬಹುದು. ಗರ್ಭಧಾರಣೆ ನಾಲ್ಕನೇ ತಿಂಗಳಿನಿಂದ ಮಗುವಿನ ಜನ್ಮ ದಿನದವರೆಗಿನ (ಒಂದು ವರ್ಷದ ತನಕ) ಅವಧಿಯಲ್ಲಿ ತಾಯಿಯ ಆರೋಗ್ಯದ ಬಗ್ಗೆ ಕರೆಗಳು ಬರುತ್ತವೆ.

## ಮನೆ: ಮಧ್ಯವರ್ತಿಗಳಿಗೆ ಹಣ ಕೊಡದಿರಿ



ಮಲ್ಲಮ್ಮ ನುಡಿ ವಾರ್ತೆ

ಬೀದರ.ಮಾ. 26 : ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ಮನೆ ಮಂಜೂರಾತಿಗಾಗಿ ಯಾರೂ ಮಧ್ಯವರ್ತಿಗಳಿಗೆ ಹಣ ಕೊಡಬಾರದು ಎಂದು ಬೀದರ್ ತಾಲ್ಲೂಕಿನ ಮರಕಲ್ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಡಾ. ಈಶ್ವರಮ್ಮ ಬಿ. ಓಂಕಾರೆ ತಿಳಿಸಿದ್ದಾರೆ.

ಯೋಜನೆಯಡಿ ಮನೆ ಹಂಚಿಕೆಗೆ ವಸತಿ ರಹಿತರ ಸಮೀಕ್ಷೆ ನಡೆದಿದೆ. ನಿಯಮಾನುಸಾರ ಅರ್ಹ ಫಲಾನುಭವಿಗಳ ಆಯ್ಕೆ ನಡೆಯಲಿದೆ ಎಂದು ಹೇಳಿದ್ದಾರೆ.

ಇ–ಖಾತಾಗೆ ರೂ. 1,100 ಶುಲ್ಕ:

ಪಂಚಾಯಿತಿಯಲ್ಲಿ ಇ–ಖಾತಾಗೆ ರೂ. 1,100 ಶುಲ್ಕ ಮಾತ್ರ ಇದೆ. ಹೆಚ್ಚುವರಿಯಾಗಿ ಯಾರಿಗೂ ಹಣ ಕೊಡುವ ಅವಶ್ಯಕತೆ ಇಲ್ಲ. ಆಸ್ತಿ ಮಾಲೀಕರು ಸಂಬಂಧಿಸಿದ ದಾಖಲೆ ಹಾಗೂ ನಿಗದಿತ ಶುಲ್ಕ ಪಾವತಿಸಿ ಪಂಚಾಯಿತಿಯಲ್ಲಿ ತಮ್ಮ ಆಸ್ತಿಯ ಇ–ಖಾತಾ ಮಾಡಿಸಿಕೊಳ್ಳಬಹುದು ಎಂದು ತಿಳಿಸಿದ್ದಾರೆ.

## ಡಾ.ಬಾಬು ಜಗಜೀವನ ರಾಂ ಅವರ ಜನ್ಮ ದಿನಾಚರಣೆ ಕುರಿತು ಪೂರ್ವಭಾವಿ ಸಭೆ ಮಾ.28ಕ್ಕೆ

ಬೀದರ: ಮಾ.26: ದಿನಾಂಕ: 05–04–2025 ರಂದು 'ಹಸಿರು ಕ್ರಾಂತ್ರಿಯ ಹರಿಕಾರ' ಡಾ.ಬಾಬು ಜಗಜೀವನ ರಾಂ ಅವರ 118ನೇ ಜಯಂತಿಯನ್ನು ಆಚರಿಸುವ ಕುರಿತು ಮಾರ್ಚ.28 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳು ಬೀದರ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಕರೆಲಾಗಿದೆ ಎಂದು ಬೀದರ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪ್ರಯುಕ್ತ ಪೂರ್ವಭಾವಿ ಸಭೆಗೆ ಸಭೆಗೆ ಪರಿಶಿಷ್ಟ ಜಾತಿ ಸಮಾಜದ ಮುಖಂಡರು, ವಿವಿಧ ದಲಿತ ಸಂಟನೆಗಳ ಪದಾಧಿಕಾರಿಗಳು, ಸಂಘ–ಸಂಸ್ಥೆಗಳ ಮುಖಂಡರು ಸಭೆಗೆ ಹಾಜರಾಗಿ ತಮ್ಮ ಸಲಹೆ ಸೂಚನೆಗಳನ್ನು ನೀಡಬೇಕೆಂದು ಅವರು ತಿಳಿಸಿದ್ದಾರೆ.

## ಮಾ.28 ರಂದು ವಿವಿಧೆಡೆ ಲೋಕಾಯುಕ್ತ ಅಹವಾಲು ಸಭೆ

ಬೀದರ : ಮಾ.26: ಬಾಬಾಸಾಹೇಬ ಪಾಟೀಲ (9364062674) ಪೊಲೀಸ್ ನಿರೀಕ್ಷಕರು–3, ಕರ್ನಾಟಕ ಲೋಕಾಯುಕ್ತ ಬೀದರ ಅವರು ಮಾರ್ಚ.28 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯರವರೆಗೆ ಪ್ರವಾಸಿ ಮಂದಿರ ಬಸವಕಲ್ಯಾಣದಲ್ಲಿ, ಸಂತೋಷ ರಾಠೋಡ್ ಪೊಲೀಸ್ (9364062672) ನಿರೀಕ್ಷಕರು–1, ಕರ್ನಾಟಕ ಲೋಕಾಯುಕ್ತ ಬೀದರ ಅವರು ಮಾರ್ಚ.28 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯರವರೆಗೆ ಪ್ರವಾಸಿ ಮಂದಿರ ಔರಾದದಲ್ಲಿ ಹಾಗೂ ಮಧ್ಯಾಹ್ನ 3 ರಿಂದ 5 ಗಂಟೆಯವರೆಗೆ ಕರ್ನಾಟಕ ಲೋಕಾಯುಕ್ತ ಪೊಲೀಸ್ ಠಾಣೆ, ಎಮ್.ಐ.ಜಿ. ನಂ. 29, ಕೆ.ಎಚ್.ಬಿ.ಕಾಲೋನಿ ಬೀದರದಲ್ಲಿ ಭ್ರಷ್ಟಾಚಾರ ಮತ್ತು ಕುಂದು ಕೊರತೆಗಳ ಬಗ್ಗೆ ಅಹವಾಲುಗಳನ್ನು ಸ್ವೀಕರಿಸುತ್ತಿದ್ದಾರೆಂದು ಕರ್ನಾಟಕ ಲೋಕಾಯುಕ್ತ ಬೀದರ ಪೊಲೀಸ್ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸಾರ್ವಜನಿಕರಿಗೆ ಸರ್ಕಾರಿ ಕಛೇರಿಗಳಲ್ಲಿ ಕೆಲಸಗಳನ್ನು ವಿಳಂಭ ಮಾಡುತ್ತಿದ್ದರೆ ಕಾರಣ ಇಲ್ಲದೆ ಅರ್ಜಿ ತಿರಸ್ಕರಿಸುತ್ತಿದ್ದರೆ ಅಥವಾ ಕಛೇರಿಗೆ ಅಲೆದಾಡಿಸುತ್ತಿದ್ದರೆ ಅಲ್ಲದೆ, ಸರ್ಕಾರಿ ಕಛೇರಿಗಳಲ್ಲಿ ಕೆಲಸ ಮಾಡಿಕೊಡಲು ಯಾರಾದರೂ ಲಂಚ ಕೇಳಿದರೆ ನಮ್ಮ ಗಮನಕ್ಕೆ ತರಬಹುದಾಗಿದೆ,

## ಮಂಗಳವಾದ್ಯ ಪಾಠಶಾಲೆಗೆ ಎರಡು ಎಕರೆ ಜಮೀನು ಮಂಜೂರು ಮಾಡಲು ಕಮಕನೂರಗೆ ಮನವಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮಾ.26: ನಗರದ ನೆಹರು ನಗರ ಬಡಾವಣೆಯಲ್ಲಿರುವ ಶ್ರೀ ಸವಿತಾ ಮಹರ್ಷಿ ದೇವಸ್ಥಾನದಲ್ಲಿ ಜಿಲ್ಲಾ ಸವಿತಾ ಸಮಾಜದ ಜಿಲ್ಲಾಧ್ಯಕ್ಷ ಆನಂದ ವಾರಿಕ ಅವರ ನೇತೃತ್ವದಲ್ಲಿ ಮಂಡಲ ಪೂಜೆ ಶಾಂತಿ ಕಾರ್ಯಕ್ರಮದಲ್ಲಿ ನವಜೀವನ ಆಸ್ಪತ್ರೆ ವತಿಯಿಂದ ಉಚಿತ ಆರೋಗ್ಯ ತಪಾಸಣೆ ಹಾಗೂ ಅನುಗ್ರಹ ಕಣ್ಣಿನ ಆಸ್ಪತ್ರೆ ವತಿಯಿಂದ ಉಚಿತ ಕಣ್ಣಿನ ತಪಾಸಣೆ ಶಿಬಿರವನ್ನು ಕಾಂಗ್ರೆಸ ಮುಖಂಡ ನೀಲಕಂಠರಾವ ಮೂಲಗೆ ಚಾಲನೆ ನೀಡಿದರು.

ಕಾರ್ಮಿಕ ಇಲಾಖೆಯ ಅಧಿಕಾರಿಗಳಾದ ಶರಣಗೌಡ ಕಾರ್ಮಿಕ ಇಲಾಖೆಯ ಸೌಲಭ್ಯಗಳು ವಿವರಿಸಿ ವಿಧಾನ ಪರಿಷತ್ ಸದಸ್ಯರಾದ ತಿಪ್ಪಣ್ಣಪ್ಪ ಕಮಕನೂರ ಅವರು ಅಸಂಘಟಿತ ವಲಯದ ಅಂಬೇಡ್ಕರ್ ಸಹಾಯಹಸ್ತ ಕಾರ್ಮಿಕ ಕಾರ್ಡ ವಿತರಣೆ ಮಾಡಿದರು.

ಕಾರ್ಯಕ್ರಮದ ದಿವ್ಯಸಾನ್ನಿಧ್ಯ ಸವಿತಾ ಪೀಠದ ಸವಿತಾನಂದನಾಥ ಸ್ವಾಮಿಜಿ ವಹಿಸಿದ್ದರು ಗುಡೇಮಾರನಹಳ್ಳಿಯ ಆದಿ ಶಕ್ತಿ ಮಹೇಶ್ವರಿ ಪೀಠದ ಭವ್ಯ ತಾಯಮ್ಮನವರ ವತಿಯಿಂದ ತಿಪ್ಪಣ್ಣಪ್ಪ ಕಮಕನೂರ ಅವರಿಗೆ ನಗರದಲ್ಲಿ ಮಂಗಳವಾದ್ಯ ಪಾಠಶಾಲೆಗೆ ಎರಡು ಎಕರೆ ಜಮೀನು ಮಂಜೂರು ಮಾಡಲು ಮನವಿ ಸಲ್ಲಿಸಲಾಯಿತು.

ಮನವಿಗೆ ಸ್ಪಂದಿಸಿ ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ಸಂಬಂಧ ಪಟ್ಟ ಅಧಿಕಾರಿಗಳೊಂದಿಗೆ ಚರ್ಚಿಸಿ ಜಮೀನು ಮಂಜೂರು ಮಾಡುತ್ತೇನೆ ಎಂದು ತಿಳಿಸಿದರು.

ಇದೆ ಸಂದರ್ಭದಲ್ಲಿ ಲೋಕೇಶ್ ಮಂಡ್ಯ, ಮಲ್ಲಣ್ಣ ವಡಗೇರಾ, ಸುಭಾಷ್ ಬಾದಾಮಿ, ಮದನ ಗದವಾಲ, ಗಣೇಶ ಚಿನ್ನಾಕರ, ಮಹೇಶ ಉಜ್ಜಲಿಕರ, ಮಹೇಶ ಪಾಣೇಗಾಂವ, ವಿದ್ಯಾಸಾಗರ ಹಾಬಾಳ ಮಹಿಳಾ ಘಟಕದ ಉಪಾಧ್ಯಕ್ಷರಾದ ತುಳಜಮ್ಮ ಮಾನೆ, ಲಲಿತಾಬಾಯಿ ತಾಂಡೂರಕರ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಶರಣರತ್ನ ಪ್ರಶಸ್ತಿಗೆ ಮಾಲಾ ಕಣ್ಣಿ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮಾ.26: ಪರಮ ಪೂಜ್ಯ ಚಿರಂಜೀವಿ ದೊಡ್ಡಪ್ಪ ಅಪ್ಪ ಹವ್ಯಾಸಿ ಕಲಾ ಬಳಗ ಕೊಡಮಾಡುವ ಶ್ರೀ ಶರಣರತ್ನ ಪ್ರಶಸ್ತಿಗೆ ಕಲಬುರ್ಗಿಯ ನಾಲ್ಕು ಚಕ್ರ ಚಾರಿಟೇಬಲ್ ಟ್ರಸ್ಟ್ ನ ಮುಖ್ಯಸ್ಥೆ ಹಾಗೂ ಮಹಿಳಾಪರ ಚಿಂತಕಿ ಮಾಲಾ ಕಣ್ಣಿ ಅವರು ಭಾಜನರಾಗಿದ್ದಾರೆ. ಪ್ರತಿ ವರ್ಷ ಕೊಡ ಮಾಡುವ ಈ ಪ್ರಶಸ್ತಿಗೆ 11 ಜನರನ್ನು ಆಯ್ಕೆ ಮಾಡಲಾಗಿದ್ದು, ಅದರಲ್ಲಿ ಮಾಲಾ ಕಣ್ಣಿಯವರು ಕೂಡ ಒಬ್ಬರಾಗಿದ್ದಾರೆ. ಮಾರ್ಚ್, 30.ರಂದು ಸಾಯಂಕಾಲ 6:30 ನಿಮಿಷಕ್ಕೆ ಶ್ರೀ ಶರಣಬಸವೇಶ್ವರ ದೇವಸ್ಥಾನದ ಸಭಾಂಗಣದಲ್ಲಿ ಈ ಪ್ರಶಸ್ತಿಯನ್ನು ಪ್ರಧಾನ ಮಾಡಲಾಗುವುದು.

## ಪ್ರೌಢ ಶಾಲಾ ಸಹ ಶಿಕ್ಷಕರ ಸಂಘದಿಂದ ಮನವಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.26: ಕರ್ನಾಟಕ ರಾಜ್ಯ ಪ್ರೌಢಶಾಲಾ ಸಹಶಿಕ್ಷಕರ ಸಂಘ ತಾಲೂಕು ಘಟಕ ಭಾಲ್ಕಿ ವತಿಯಿಂದ ಅಪರ ಆಯುಕ್ತರು ಶಾಲಾ ಶಿಕ್ಷಣ ಇಲಾಖೆ ಕಲಬುರ್ಗಿ ರವರಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಸಿ.ಜಿ.ಹಳ್ಳದ ರವರ ಮೂಲಕ 9ನೇ ತರಗತಿ ವಿದ್ಯಾರ್ಥಿಗಳಿಗೆ ಮೇ 1 ರಿಂದ ವಿಶೇಷ ತರಗತಿಗಳನ್ನು ನಡೆಸಬೇಕೆಂಬ ವಿಚಾರ ಕೈಬಿಡುವ ಕುರಿತು ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ತಾಲೂಕು ಪ್ರೌಢ ಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷರಾದ ದತ್ತಾತ್ರಿ ಕಾಟಕರ ಕಾರ್ಯದರ್ಶಿಗಳಾದ ಬಾಲಾಜಿ ಕಾಂಬ್ಳೆ ಅನುದಾನಿತ ಪ್ರೌಢ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ಕಿರಣಕುಮಾರ ಭಾಡಸಾಂಗೆ, ಶಿವಕುಮಾರ ಪುಲಾರೆ, ಸಹದೇವ ಗೌಡಗಾವೆ, ಅರ್ಜುನರಾವ ಸೂರ್ಯವಂಶಿ, ತುಕಾರಾಮ ಪಾಟೀಲ, ಉದಯಕಾಂತ, ಚನ್ನವೀರ ಚಕ್ರಸಾಲಿ, ಜಾಲಿಂದ್ರ ಮೇತ್ರೆ, ಅನಿಲ, ವಿನಾಯಕ ನಿಟ್ಟೂರೇ, ಸಂಜೂಕುಮಾರ ಸಾವರೇ, ನಿರಂಜಪ್ಪ ಪಾತ್ರೆ, ಪುಷ್ಪಾವತಿ, ನಂದರಾಜ ಬಿರಾದಾರ, ಧನರಾಜ ಔರಾದೆ, ತಾಲೂಕಿನ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘದ ಎಲ್ಲ ಪದಾಧಿಕಾರಿಗಳು ಹಾಗು ತಾಲೂಕಿನ ಪ್ರೌಢ ಶಾಲೆಗಳ ಶಿಕ್ಷಕರು ಉಪಸ್ಥಿತಿರಿದ್ದರು.

## ಸಂಬಳ ಪ್ಯಾಕೇಜ್ ಖಾತೆಗಳಾಗಿ ಬದಲಾಯಿಸಲು ಮನವಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.26: ತಾಲೂಕಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರಕಾರಿ ನೌಕರರು, ಅಧಿಕಾರಿಗಳ ಉಳಿತಾಯ ಖಾತೆಗಳನ್ನು ಸಂಬಳ ಪ್ಯಾಕೇಜ್ ಖಾತೆಗಳನ್ನಾಗಿ ಬದಲಾಯಿಸುವಂತೆ ತಾಲೂಕು ಸರಕಾರಿ ನೌಕರರ ಸಂಘದ ಪದಾಧಿಕಾರಿಗಳು ಮನವಿ ಮಾಡಿದ್ದಾರೆ.

ಪಟ್ಟಣದ ಭಾರತೀಯ ಸ್ಟೇಟ್ ಬ್ಯಾಂಕ್, ಕೆನರಾ ಬ್ಯಾಂಕ್ ಸೇರಿ ವಿವಿಧ ರಾಷ್ಟ್ರೀಕೃತ ಬ್ಯಾಂಕ್‌ನ ಶಾಖೆಗಳಿಗೆ ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ ನೇತೃತ್ವದಲ್ಲಿ ಬುಧವಾರ ಭೇಟಿ ನೀಡಿ ವ್ಯವಸ್ಥಾಪಕರಿಗೆ ಮನವಿ ಸಲ್ಲಿಸಿದರು.

ಸರಕಾರಿ ನೌಕರರ, ಅಧಿಕಾರಿಗಳು ವಿವಿಧ ಬ್ಯಾಂಕ್‌ಗಳಲ್ಲಿ ಸಂಬಳ ಪ್ಯಾಕೇಜ್ ಖಾತೆಗಳನ್ನು ತೆರೆಯುವಂತೆ ಆರ್ಥಿಕ ಇಲಾಖೆ ಆದೇಶ ಹೊರಡಿಸಿದೆ.

ಸಂಬಳ ಪ್ಯಾಕೇಜ್‌ನ ಅಡಿಯಲ್ಲಿ ಖಾತೆ ಹೊಂದಿದ್ದರೆ ಅಂತಹ ನೌಕರರಿಗೆ ಬ್ಯಾಂಕ್‌ಗಳಲ್ಲಿ ಕಡಿಮೆ ಬಡ್ಡಿದರದಲ್ಲಿ ವಸತಿ ಸಾಲ, ಡೆಬಿಟ್–ಕ್ರೆಡಿಟ್ ಕಾರ್ಡ್ ಸೇರಿ ವಿವಿಧ ಸರಕಾರದ ಸೌಲಭ್ಯಗಳು ಸಿಗಲಿವೆ. ಈ ಹಿನ್ನೆಲೆಯಲ್ಲಿ ಎಲ್ಲ ಸರಕಾರಿ ನೌಕರರು, ಅಧಿಕಾರಿಗಳು ಈಗಾಗಲೇ ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಉಳಿತಾಯ ಖಾತೆಗಳನ್ನು ಹೊಂದಿದ್ದಾರೆ.

ಹಾಗಾಗಿ ಎಲ್ಲ ಉಳಿತಾಯ ಖಾತೆಗಳನ್ನು ಸಂಬಳ ಪ್ಯಾಕೇಜ್ ಖಾತೆಗಳನ್ನಾಗಿ ಬದಲಾಯಿಸಿ ಸರಕಾರಿ ನೌಕರರಿಗೆ ಸರಕಾರದ ಸೌಲಭ್ಯ ಸಿಗುವಂತೆ ಮಾಡಬೇಕು ಎಂದು ವ್ಯವಸ್ಥಾಪಕರಿಗೆ ಬರೆದ ಪತ್ರದಲ್ಲಿ ಮನವಿ ಮಾಡಲಾಗಿದೆ.

ಈ ಸಂದರ್ಭದಲ್ಲಿ ತಾಲೂಕು ಸರಕಾರಿ ನೌಕರರ ಸಂಘದ ಕಾರ್ಯದರ್ಶಿ ರಾಜಪ್ಪ ಪಾಟೀಲ್, ರಾಜ್ಯ ಪರಿಷತ್ ಸದಸ್ಯ ಬಸವರಾಜ ಬಂಗಾರೆ, ಖಜಾಂಚಿ ಸುನಿಲ ಬಿರಾದಾರ್, ಉಪಾಧ್ಯಕ್ಷ ಪ್ರಭು ಡಿಗ್ಗೆ ಸೇರಿದಂತೆ ಹಲವರು ಇದ್ದರು.

## ಭಾಲ್ಕಿ ಪುರಸಭೆ: 2025-26ನೇ ಸಾಲಿನ ಆಯವ್ಯಯ ಮಂಡನೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.26: ಪಟ್ಟಣದ ಪುರಸಭೆಯ ಸಭಾಂಗಣದಲ್ಲಿ ಮಂಗಳವಾರ ನಡೆದ ವಾರ್ಷಿಕ ಆಯ–ವ್ಯಯ ಮಂಡನಾ ಸಭೆಯಲ್ಲಿ ಪುರಸಭೆ ಅಧ್ಯಕ್ಷೆ ಶಶಿಕಲಾ ಸಿಂದನಕೆರೆ ಯವರು 1.52 ಲಕ್ಷ ರೂ. ವಾರ್ಷಿಕ ನಿರೀಕ್ಷಿತ ಉಳಿತಾಯ ಮೊತ್ತದ ಆಯ–ವ್ಯಯ ಮಂಡಿಸಿದರು.

ಈ ಸಂದರ್ಭದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದ ಪುರಸಭೆ ಮುಖ್ಯಾಧಿಕಾರಿ ಸಂಗಮೇಶ ಕಾರಬಾರಿ, ಪ್ರಸ್ತುತ 2025–26ನೇ ಸಾಲಿನ ಆಯ–ವ್ಯಯ ಅನುದಾನವು ಪಟ್ಟಣದ ರಸ್ತೆ ನಿರ್ಮಾಣ, ಕುಡಿಯುವ ನೀರು ಸರಬರಾಜು, ವಿದ್ಯುತ್ ದೀಪ ನಿರ್ವಹಣೆ, ಚರಂಡಿ ನಿರ್ಮಾಣ ಸೇರಿದಂತೆ ಇತರೆ ಅಭಿವೃದ್ಧಿ ಕಾಮಗಾರಿ ಮತ್ತು ಸಿಬ್ಬಂದಿ ವೇತನಕ್ಕಾಗಿ ಕಾಯ್ದಿರಿಸಲಾಗಿದೆ ಎಂದು ತಿಳಿಸಿದರು. ಆಯ–ವ್ಯಯ ಮಂಡನಾ ಸಭೆಯಲ್ಲಿ ಪುರಸಭೆ ಉಪಾಧ್ಯಕ್ಷ ವಿಜಯಕುಮಾರ ರಾಜಭವನ, ಸೇರಿದಂತೆ ಪುರಸಭೆಯ ಎಲ್ಲಾ ಸದಸ್ಯರುಗಳು, ಮತ್ತು ನಾಮ ನಿರ್ದೇಶಿತ ಸದಸ್ಯರು ಹಾಜರಿದ್ದರು. ಆಯ–ವ್ಯಯ ಮಂಡನೆಗೆ ಎಲ್ಲರೂ ಚಪ್ಪಾಳೆ ತಟ್ಟಿ ಸಮ್ಮತಿ ಸೂಚಿಸಿದರು.

ನಂತರ ಮಾತನಾಡಿದ ಪುರಸಭೆ ಸದಸ್ಯ ಓಂಕಾರ ಮೋರೆ ಪ್ರಸ್ತುತ ಸಾಲಿನ ಆಯ–ವ್ಯಯದ ಖರ್ಚು ಸರಿಯಾಗಿ ಬಳಸಿಕೊಳ್ಳಬೇಕು. ಯಾವುದೇ ಬೇರೆ ವ್ಯವಹಾರಕ್ಕೆ ಈ ಹಣ ವ್ಯಯ ಮಾಡಬಾರದು ಎಂದು ಸಲಹೆ ನೀಡಿದರು. ಇದಕ್ಕೆ ಎಲ್ಲಾ ಸದಸ್ಯರು ಧ್ವನಿಗೂಡಿಸಿದರು.

## 28 ರಂದು ಕಸಾಪ ನೂತನ ಪದಾಧಿಕಾರಿಗಳ ಪದಗ್ರಹಣ



ಮಲ್ಲಮ್ಮ ನುಡಿ ವಾರ್ತೆ

ಔರಾದ್ : ಮಾ.26:ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ನೂತನ ಪದಾಧಿಕಾರಿಗಳ ಪದಗ್ರಹಣ ಹಾಗೂ ಪರಿಷತ್ತಿನ ಕಾರ್ಯ ಚಟುವಟಿಕೆಗಳ ಉದ್ಘಾಟನಾ ಸಮಾರಂಭ ಮಾರ್ಚ್ 28 ರಂದು ಆಯೋಜಿಸಲಾಗಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಬಿ.ಎಂ ಅಮರವಾಡಿ ಹೇಳಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿದ ಅವರು, ಅಂದು ಪಟ್ಟಣದ ಸಾಯಿ ಕಲ್ಯಾಣ ಮಂಟಪದಲ್ಲಿ ಸಾಯಂಕಾಲ 4 ಗಂಟೆಗೆ ನಡೆಯುವ ಸಮಾರಂಭ ಮಾಜಿ ಸಚಿವರು, ಶಾಸಕರಾದ ಪ್ರಭು ಚವ್ಹಾಣ ಉದ್ಘಾಟಿಸಲಿದ್ದಾರೆ.

ಸಾನಿಧ್ಯ ಭಾಲ್ಕಿ ಹಿರೇಮಠ ಸಂಸ್ಥಾನದ ಪೂಜ್ಯ ಗುರುಬಸವ ಪಟ್ಟದ್ದೇವರು, ಅಧ್ಯಕ್ಷತೆ ಕಸಾಪ ಜಿಲ್ಲಾಧ್ಯಕ್ಷ ಸುರೇಶ ಚನ್ನಶೆಟ್ಟಿ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಪಪಂ ಅಧ್ಯಕ್ಷೆ ಸರುಬಾಯಿ ಘುಳೆ, ತಹಸೀಲ್ದಾರ್ ಮಲ್ಲಶೆಟ್ಟಿ ಚಿದ್ರೆ, ಜಾನಪದ ಅಕಾಡೆಮಿ ಸದಸ್ಯ ವಿಜಯಕುಮಾರ ಸೋನಾರೆ, ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಜಿ ರಂಗೇಶ ಪಾಲ್ಗೊಳ್ಳಲಿದ್ದಾರೆ.

ನಿಕಟಪೂರ್ವ ಅಧ್ಯಕ್ಷ ಶಾಲಿವಾನ ಉದಗಿರೆ ಪರಿಷತ್ತಿನ ಧ್ವಜ ಹಸ್ತಾಂತರ ಮಾಡಲಿದ್ದು, ಕಸಾಪ ಅಧ್ಯಕ್ಷ ಅಮರವಾಡಿ ಆಶಯ ನುಡಿ ಹೇಳಲಿದ್ದಾರೆ.

ಅತಿಥಿಗಳಾಗಿ ಡಾ. ವೈಜಿನಾಥ ಬುಟ್ಟೆ, ಸರ್ಕಾರಿ ನೌಕರ ಸಂಘದ ಅಧ್ಯಕ್ಷ ಪಂಡರಿ ಆಡೆ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ ಶಿವಾನಂದ ಮೊಕ್ತೆದಾರ್, ಮೀಡಿಯಾ ಜರ್ನಲಿಸ್ಟ್ ಯುನಿಯನ್ ಅಧ್ಯಕ್ಷ ಸಂತೋಷ ಚ್ಯಾಂಡೇಶ್ವರೆ, ಸಾಂಸ್ಕೃತಿಕ ಸಾಹಿತ್ಯಕ ಚಿಂತಕ ಜಗನ್ನಾಥ ಮೂಲಗೆ, ಕಮಲನಗರ ತಾಲೂಕು ಕಸಾಪ ಅಧ್ಯಕ್ಷ ಪ್ರಶಾಂತ ಮಠಪತಿ ಭಾಗವಹಿಸಲಿದ್ದಾರೆ.

ಅಲ್ಲದೇ ತಾಲೂಕಿನ ಎಲ್ಲ ಕನ್ನಡಪರ ಸಂಘ ಸಂಸ್ಥೆಗಳ ಅಧ್ಯಕ್ಷರು, ಪದಾಧಿಕಾರಿಗಳು, ಹೋರಾಟಗಾರರು, ವಿವಿಧ ಸಂಘ ಸಂಸ್ಥೆಯ ಪದಾಧಿಕಾರಿಗಳು ವಿಶೇಷ ಆಹ್ವಾನಿತರಾಗಿ ಭಾಗವಹಿಸಲಿದ್ದು, ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುಗಾದಿ ಹಾಗೂ ರಂಜಾನ್ ಪ್ರಯುಕ್ತ ಹೆಚ್ಚುವರಿ ಬಸ್‌ಗಳ ಕಾರ್ಯಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.26: ಯುಗಾದಿ ಹಾಗೂ ರಂಜಾನ್ ಹಬ್ಬದ ಪ್ರಯುಕ್ತ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಇದೇ ಮಾರ್ಚ 27 ರಿಂದ 29 ರವರೆಗೆ ನಿಗಮದ ತಾಲ್ಲೂಕು/ಜಿಲ್ಲಾ ಕೇಂದ್ರಗಳಿಂದ ಬೆಂಗಳೂರಿಗೆ ಮತ್ತು ಇತರೆ ಪ್ರಮುಖ ಸ್ಥಳಗಳಿಗೆ, ಇದೇ ಮಾರ್ಚ್ 28 ರಿಂದ 30 ರವರೆಗೆ ಬೆಂಗಳೂರಿನಿಂದ ಕ.ಕ. ರ.ಸಾ.ನಿಗಮದ ವ್ಯಾಪ್ತಿಯ ವಿವಿಧ ಸ್ಥಳಗಳಿಗೆ ದೈನಂದಿನ ಕಾರ್ಯಾಚರಣೆಯಲ್ಲಿರುವ 196 ಸಾರಿಗೆಗಳನ್ನು ಹೊರತುಪಡಿಸಿ, 205 ಹೆಚ್ಚುವರಿ ವಾಹನಗಳ ಕಾರ್ಯಾಚರಣೆ ಮಾಡಲಾಗುತ್ತದೆ ಎಂದು ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕರು ತಿಳಿಸಿದ್ದಾರೆ.

ಹಬ್ಬ ಮುಗಿದ ನಂತರ ಮರಳಿ ಹೋಗುವ ಪ್ರಯಾಣಿಕರಿಗೆ ಮಾರ್ಚ್ 31 ರಿಂದ ಏಪ್ರಿಲ್ 2 ರವರೆಗೆ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವ್ಯಾಪ್ತಿಯ ಎಲ್ಲಾ ಜಿಲ್ಲೆಗಳಿಂದ ಬೆಂಗಳೂರು ಮತ್ತು ಇತರೆ ಸ್ಥಳಗಳಿಗೆ ಸಂಚಾರ ದಟ್ಟಣೆಗನುಗುಣವಾಗಿ ಹೆಚ್ಚುವರಿ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚುವರಿ ಸಾರಿಗೆಗಳಿಗೆ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಸೌಲಭ್ಯವನ್ನು ಕಲ್ಪಿಸಲಾಗಿದೆ. ಸಾರ್ವಜನಿಕ ಪ್ರಯಾಣಿಕರು ಕರ್ನಾಟಕ ಹಾಗೂ ಅಂತರ ರಾಜ್ಯದಲ್ಲಿ ಇರುವ 16 ಗಣಕೀಕೃತ ಬುಕ್ಕಿಂಗ್ ಕೌಂಟರ್‌ಗಳ ಮುಖಾಂತರ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸಿಕೊಳ್ಳಬೇಕು. ಪ್ರಯಾಣಿಕರು ಬಸ್ ನಿಲ್ದಾಣಗಳಿಗೆ ತೆರಳುವ ಮುನ್ನ ಮುಂಗಡ ಕಾಯ್ದಿರಿಸಲಾಗುವ ಟಿಕೇಟುಗಳ ಮೇಲೆ ನಮೂದಿಸಲಾಗಿರುವ ಬಸ್ ನಿಲ್ದಾಣ/ಪಿಕ್ ಅಪ್ ಪಾಯಿಂಟ್‌ನ ಹೆಸರನ್ನು ಗಮನಿಸಬೇಕು. ನಾಲ್ಕು ಅಥವಾ ಹೆಚ್ಚು ಪ್ರಯಾಣಿಕರು ಒಟ್ಟಾಗಿ ಮುಂಗಡ ಟಿಕೇಟ್ ಕಾಯ್ದಿರಿಸಿದ್ದಲ್ಲಿ ಶೇ 5 ರಷ್ಟು ರಿಯಾಯಿತಿ ನೀಡಲಾಗುತ್ತದೆ. ಹೋಗುವ ಮತ್ತು ಬರುವ ಪ್ರಯಾಣದ ಟಿಕೇಟನ್ನು ಒಟ್ಟಿಗೆ ಕಾಯ್ದಿರಿಸಿದಾಗ ಬರುವ ಪ್ರಯಾಣ ದರದಲ್ಲಿ ಶೇ 10 ರಿಯಾಯತಿ ನೀಡಲಾಗುತ್ತದೆ. ಇದಲ್ಲದೇ, ನಿಗಮದ ಕಾರ್ಯಾಚರಣೆ ವ್ಯಾಪ್ತಿಯಲ್ಲಿನ ಎಲ್ಲಾ ತಾಲ್ಲೂಕು/ಜಿಲ್ಲಾ ಬಸ್ ನಿಲ್ದಾಣಗಳಿಂದ ಸಂಚಾರ ಒತ್ತಡಕ್ಕನುಗುಣವಾಗಿ ಹೆಚ್ಚುವರಿ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತದೆ. ಸಾರ್ವಜನಿಕ ಪ್ರಯಾಣಿಕರು ಸದರಿ ಸಾರಿಗೆ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

## ಬೃಹತ್ ಟ್ರ್ಯಾಕ್ಟರ್ ಪ್ರತಿಭಟನೆ : ಬಿಜೆಪಿ ರಾಜ್ಯ ಉಪಾಧ್ಯಕ್ಷರು ಹಾಗೂ ಮಾಜಿ ಸಚಿವರಾದ ನರಸಿಂಹ ನಾಯಕ (ರಾಜುಗೌಡ್ರು)



ಮಲ್ಲಮ್ಮ ನುಡಿ ವಾರ್ತೆ

ಹುಣಸಗಿ: ಕೃಷ್ಣಾ ಅಚ್ಚುಕಟ್ಟು ಪ್ರದೇಶದ ಕಾಲುವೆಗಳಿಗೆ ಏ.10 ರವರೆಗೆ ನಿರಂತರವಾಗಿ ನೀರು ಹರಿಸಬೇಕು ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷರು ಹಾಗೂ ಮಾಜಿ ಸಚಿವರಾದ ನರಸಿಂಹ ನಾಯಕ (ರಾಜುಗೌಡ್ರು) ನೇತೃತ್ವದಲ್ಲಿ ಬೃಹತ್ ಟ್ಯಾಕ್ಟರ್ ಪ್ರತಿಭಟನೆ.

ಹುಣಸಗಿ ಪಟ್ಟಣದಿಂದ ನಾರಾಯಣಪುರ ಮುಖ್ಯ ಇಂಜಿನಿಯರ್ ಆಫೀಸ್ ವರೆಗೆ ಪ್ರತಿಭಟನೆ. ಈ ಪ್ರತಿಭಟನೆಯು ಬೆಳಗ್ಗೆ 10.30 ಗಂಟೆಗೆ ಪ್ರಾರಂಭಿಸಿದರು.

ರಾಜ್ಯ ಸರಕಾರದ ರೈತ ವಿರೋಧಿ ನೀತಿಗಳ ಬಗ್ಗೆ ಘೋಷಣೆ ಕೂಗಿದರು. ಬೇಕೆ ಬೇಕು ಏ.10 ರವರೆಗೆ ಕಾಲುವೆಗೆ ನೀರು ಬೇಕು... ಎಂಬ ಘೋಷಣೆ ಮೊಳಗಿತು. ಬಳಿಕ ಪ್ರತಿಭಟನೆಯಲ್ಲಿ ರೈತ ಮುಖಂಡರು ಮಾತನಾಡಿ, ನಾರಾಯಣಪುರ ಎಡದಂಡೆ ಕಾಲುವೆಯ ಅವಲಂಬಾನೆಯ ರೈತರಿಗೆ ಅನ್ಯಾಯ ಮಾಡಬೇಡಿ ನಿಮ್ಮನ ನಂಬಿ ರೈತರರು ಶೇಂಗಾ, ಸಜ್ಜೆ, ಸೂರ್ಯಕಾಂತಿ, ಭತ್ತ ಸೇರಿ ಇನ್ನಿತರ ಬೆಳೆಗಳು ಇನ್ನೂ 20ರಿಂದ25 ದಿನಗಳಲ್ಲಿ ಕೈಗೆ ಬರುತ್ತವೆ. ಆದರೆ ತೆನೆ ಬರುವ ಸಂದರ್ಭದಲ್ಲಿ ಏಕಾಏಕಿ ಕಾಲುವೆ ನೀರು ನಿಂತು ಹೋದರೆ ರೈತರ ಲಕ್ಷಾಂತರ ಮೊತ್ತದ ಬೆಳೆ ನಷ್ಟವಾಗಿ ಅವರ ಬಾಳು ಕೂಡ ಹಾಳಾಗುತ್ತದೆ ಎಂದು ಹೇಳಿದರು.

ಕೃಷಿ ಇಲಾಖೆಯು ಬೆಳೆಗಳ ವಾಸ್ತವ ಸ್ಥಿತಿಯನ್ನು ಸರಕಾರಕ್ಕೆ ವರದಿ ಮಾಡಿದೆ. ನೀರಾವರಿ ಇಲಾಖೆಯ ಅಧಿಕಾರಿಗಳ ಬೇಜವಾಬ್ದಾರಿತನದಿಂದ ಆಲಮಟ್ಟಿ ಮತ್ತು ನಾರಾಯಣಪುರ ಜಲಾಶಯಗಳ ಸಂಗ್ರಹವಿದ್ದ ಅದೇಷ್ಟೋ ಟಿಎಂಸಿ ನೀರು ನದಿಗೆ ಹೋಗಿದೆ ಎಂದು ಆಕ್ರೋಶ ಹೊರ ಹಾಕಿದರು. ನೀರಾವರಿ ಸಲಹಾ ಸಮಿತಿಯವರ ಅವೈಜ್ಞಾನಿಕ ತಿರ್ಮಾನ, ತೆಲಂಗಾಣ ರಾಜ್ಯಕ್ಕೆ ರಾತೋರಾತ್ರಿ ನೀರು ಹರಿಸಿರುವುದು ಸರಿಯಾದ ಕ್ರಮವಲ್ಲ ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷರು ಹಾಗೂ ಮಾಜಿ ಸಚಿವರಾದ ನರಸಿಂಹ ನಾಯಕ (ರಾಜುಗೌಡ್ರು) ಹರಿ ಹಾಯ್ದರು.

ಏ.10 ರವರೆಗೆ ಕಾಲುವೆಗೆ ನೀರು ಹರಿಸದಿದ್ದರೆ ರೈತರು ಬೆಳೆ ನಷ್ಟ ಅನುಭವಿಸಿ ಆತ್ಮಹತ್ಯೆ ಮಾಡಿಕೊಂಡರೆ ಅದಕ್ಕೆ ಸರಕಾರವೇ ಜವಾಬ್ದಾರಿಯಾಗುತ್ತದೆ ಮತ್ತು ಸರಕಾರಕ್ಕೆ ಕೆಟ್ಟ ಹೆಸರು ಬರುತ್ತದೆ. ಕಾರಣ ಸರಕಾರ ರೈತರ ಹಿತ ಕಾಪಾಡಬೇಕಾಗಿರುವುದು ಅಗತ್ಯವಾಗಿದೆ.

ಈಗ ರೈತರಿಗೆ ಬಂದಿರುವ ಸಂಕಷ್ಟ ನಿವಾರಿಸಬೇಕು. ಕುಡಿಯಲು ಅವಶ್ಯವಿರುವ 24 ಟಿಎಂಸಿ ನೀರು ಇದೆ. ಹಾಗಾಗಿ ಏ.10 ವರೆಗೆ ಕಾಲುವೆಗೆ ನೀರು ಹರಿಸಿ ರೈತರ ಬೆಳೆ, ಬಾಳು ಉಳಿಸಬೇಕು ಎಂದು ತಿಳಿಸಿದರು

ಇದೆ ಸಂದರ್ಭದಲ್ಲಿ ಬಿಜೆಪಿ ರಾಜ್ಯ ಉಪಾಧ್ಯಕ್ಷರು ಹಾಗೂ ಮಾಜಿ ಸಚಿವರಾದ ನರಸಿಂಹ ನಾಯಕ (ರಾಜುಗೌಡ್ರು) , ಬಬ್ಲುಗೌಡ , ಅಮಿನ ರೆಡ್ಡಿ ಯಾಳಗಿ, ಬಸನಗೌಡ , ಹನಮಂತ ನಾಯಕ್ ತಾತಾ, ಹೆಚ್ ಸಿ ಪಾಟೀಲ್, ಯಲ್ಲಪ್ಪ ಕುರಕುಂಡಿ, ಶೇಖರ್ ಎಸ್ ನಾಯಕ, ತಿರುಪತಿ ಹೆಚ್ ನಾಯಕ, ಸಂಗಣ್ಣ ವೈಲಿ, ವೆಂಕಟೇಶ ಸಾಹುಕಾರ್, ಶಿವಣ್ಣ ಮಂಗಿಹಾಳ್, ರಮೇಶ ಕೋಲೂರು, ಶಿವು ಬಿರಾದಾರ, ಚಂದ್ರು ವೈ ಅನೇಕ ಸಂಘಟನೆಪರ ಹೋರಾಟಗಾರರು , ರೈತರ ಪರ ಹೊರಟರರು, ಇದ್ದರು

## ಇಫ್ತಾರ್ ಕೂಟಗಳಿಂದ ಸೌಹಾರ್ದತೆ ಬೆಳೆಯಲು ಸಹಾಯ: ಅಸ್ಲಾಂಮಿಯಾ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಸಾಮಾಜಿಕ ಜೀವನದಲ್ಲಿ ಸೌಹಾರ್ದಯುತವಾಗಿ ಬದುಕುವುದು ಹೇಗೆ ಎಂಬುವುದು ಕಲಿತುಕೊಳ್ಳುವುದೇ ಇಫ್ತಾರ್ ಕೂಟದ ಉದ್ಧೇಶವಾಗಿದೆ ಎಂದು ಪಟ್ಟಣದಲ್ಲಿ ಗೆಳೆಯರ ಬಳಗದಿಂದ ಆಯೋಜಿಸಿದ್ದ ಇಫ್ತಾರ್ ಕೊಟದಲ್ಲಿ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಮಾತನಾಡುತ್ತಾ ನುಡಿದರು. ಒಬ್ಬ ವ್ಯಕ್ತಿಯನ್ನು ಅರಿಯಬೇಕೆಂದರೆ ಆ ವ್ಯಕ್ತಿಯ ಜೊತೆ ಬೆರೆತಾಗ ಮಾತ್ರ ಆ ವ್ಯಕ್ತಿಯನ್ನು ಅರ್ಥ ಮಾಡಿಕೊಳ್ಳಲು ಸಾಧ್ಯ. ವ್ಯಕ್ತಿಯನ್ನು ಅರ್ಥ ಮಾಡಿಕೊಂಡರೆ ಸಮಾಜವನ್ನು ಅರ್ಥ ಮಾಡಿಕೊಂಡಂತೆ. ಸಮಾಜದಲ್ಲಿರುವ ಇತರ ಧರ್ಮಿಯರನ್ನು ಸೋದರತ್ವದಿಂದ ಕಾಣುವುದು ಮುಖ್ಯವಾಗಿದೆ ಎಂದು ಪವಿತ್ರ ರಂಜಾನ್ ಮಾಸದಲ್ಲಿ ಹಿಂದೂ ಮುಸ್ಲಿಂ ಸೌಹಾರ್ದತೆ ಇಫ್ತಾರ್ ಕೂಟಗಳಿಂದ ಸಮಾಜದಲ್ಲಿ ಸಾಮರಸ್ಯ ಇನ್ನಷ್ಟು ಬೆಳೆಯುತ್ತದೆ' ಅಸ್ಲಾಂಮಿಯಾ ಅಭಿಪ್ರಾಯ ಪಟ್ಟರು. ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ, ಸಂಜೀವನ ಭೋಸ್ಲೆ, ಗುಂಡಪ್ಪ, ಕೋರಿ, ಹಸನ್, ಪತ್ರಕರ್ತ ಅಬ್ದುಲ್ ಖದೀರ್ ಲಶ್ಕೇರಿ, ಅನೀಲಕುಮಾರ್ ಸಿಂಧೆ, ವೆಂಕಟಪ್ಪ, ಸೈಯದ್ ಅಜೀಮ, ರಾಜಕುಮಾರ ಆರ್. ಹಡಪದ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಡಾ.ಸುಬ್ಬಯ್ಯ ನೀಲಾಗೆ "ಶಂಕರಸಿರಿ" ಪ್ರಶಸ್ತಿ ಪ್ರದಾನ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.26-ಚಿನ್ಮಯಗಿರಿಯ ಡಾ.ಸಿದ್ದರಾಮ ಶಿವಾಚಾರ್ಯರ ಸಾನಿಧ್ಯದಲ್ಲಿ ಮಾ.19 ರಿಂದ ಏಪ್ರಿಲ್ 2 ರವರೆಗೆ ನಡೆಯಲಿರುವ ಸುಕ್ಷೇತ್ರ ಕಡಣಿ ಗ್ರಾಮದ ಶಂಕರಲಿಂಗೇಶ್ವರ 2025ನೇ ಸಾಲಿನ ಜಾತ್ರಾ ಮಹೋತ್ಸವ ನಿಮಿತ್ಯ ಶರಣಬಸವ ವಿಶ್ವವಿದ್ಯಾಲಯದ ಚಿತ್ರಕಲಾ ವಿಭಾಗದ ಮುಖ್ಯಸ್ಥ ಡಾ.ಸುಬ್ಬಯ್ಯ ಎಂ.ನೀಲಾ ಅವರಿಗೆ "ಶಂಕರಸಿರಿ" ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಚಿನ್ಮಯಗಿರಿ ಮಠದ ವೀರಮಹಾಂತೇಶ್ವರ ಶಿವಾಚಾರ್ಯರು, ಶಂಕರಲಿಂಗೇಶ್ವರ ದೇವಸ್ಥಾನ ಟ್ರಸ್ಟ್ ಅಧ್ಯಕ್ಷ ಸಿದ್ದಣ್ಣಗೌಡ ಕೆ.ಮಾಲಿಪಾಟೀಲ, ಕಾರ್ಯದರ್ಶಿ ಶಂಕಣ್ಣ ಎಸ್.ಎಲ್ದಿ ಸೇರಿದಂತೆ ಮತ್ತಿತರ ಗಣ್ಯರು ಉಪಸ್ಥಿತರಿದ್ದರು.

## ಬಾಲಕಿ ಆತ್ಮಹತ್ಯೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ತಾಲೂಕಿನ ಡಿಗ್ಗಿ ಗ್ರಾಮದ 9ನೇ ತರಗತಿಯಲ್ಲಿ ಓದುತ್ತಿದ್ದ

ಬಾಲಕಿ ಯೋರ್ವಳು ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡ ದುರ್ಘಟನೆ ನಡೆದಿದೆ.

ಸೋನಿ ಸಂತೋಷ ಬನವಾಸೆ (15) ಮೃತ ಪಟ್ಟವಳು ಎಂದು ಗುರುತಿಸಲಾಗಿದೆ.

ಮಗಳಿಗೆ ಮೊಬೈಲ್ ಹೆಚ್ಚು ಬಳಕೆ ಮಾಡಬಾರದು ಎಂದು ಬುದ್ಧಿ ಮಾತು ಹೇಳಿದ್ದಕ್ಕೆ ಈ ಘಟನೆ ನಡೆದಿದೆ ಎನ್ನಲಾಗಿದೆ.

ತಂದೆ ಸಂತೋಷ ವೈಜೇನಾಥ ಬನವಾಸೆ ನೀಡಿದ ದೂರಿನ ಮೇರೆಗೆ ಕಮಲನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಗುರುಮಠಕಲ್ ತಾಲೂಕ ಪಂಚಾಯತಿಯಲ್ಲಿ ವಿಶೇಷಚೇತನರ ಕುಂದು ಕೊರತೆಯ ಸಭೆ



ಮಲ್ಲಮ್ಮ ನುಡಿ ವಾರ್ತೆ

ಗುರುಮಠಕಲ್: ಮಾ. 26. ತಾಲೂಕ ಪಂಚಾಯತ ಸಭಾಂಗಣದಲ್ಲಿ ತಾಲೂಕಿನ ವಿಶೇಷಚೇತನರ ಕುಂದುಕೊರತೆಯ ಕುರಿತಾಗಿ ಸಭೆ ನಡೆಸಲಾಯಿತು. ಕಾರ್ಯಕ್ರಮದಲ್ಲಿ ಸಮಿತಿ ಅಧ್ಯಕ್ಷರು, ಕಾರ್ಯನಿರ್ವಾಹಕ ಅಧಿಕಾರಿಗಳಾದ ಅಂಬರೀಷ ಪಾಟೀಲ, ಉಪ ತಹಶೀಲ್ದಾರ ನರಸಿಂಹ ಸ್ವಾಮಿ, ತಾಲೂಕ ಆರೋಗ್ಯಧೀಕಾರಿಗಳು ಹಣಮಂತ ರೆಡ್ಡಿ ಂಆಕಖ. ಶರಣಪ್ಪ ಮೈಲಾರಿ, ಪ್ರಕಾಶ ವಿರುಪಾಕ್ಷ ಅಧಿಕಾರಿ. ಶ್ರೀಮತಿ ಸಂಪುರ್ತ್ ದೇವಾಪುತ್ರ ಹಾಗೂ ಎಲ್ಲಾ ತಾಲೂಕ ಮಟ್ಟದ ಅಧಿಕಾರಿಗಳು, ಜಿಲ್ಲಾ ಅಂಗವಿಕಲರ ಕಲ್ಯಾಣಧಿಕಾರಿಗಳು, ಜಿಲ್ಲಾ ವ್ಯವಸ್ಥಾಪಕರು ಎ.ಪಿ.ಡಿ ಸಂಸ್ಥೆ, ಹಾಗೂ ಯಾದಗಿರಿ ತಾಲೂಕಿನ ವಿಶೇಷಚೇತನರ ಅಧಿಕಾರಿ ಎಮ್.ಆರ್.ಡಬ್ಲ್ಯೂ .ಭೀಮರಾಯ ಸ್ವಾಗತಿಸಿ ಪ್ರಸ್ತಾವಿಕ ಮಾತಾನಾಡಿದರು, ವಿಕಲಚೇತನರ ಕುಂದು-ಕೊರತೆ ಸಭೆ ಮಾಡುವ ಉದ್ದೇಶವೆನೆಂದರೆ, 2004ರಲ್ಲಿ ಪಂಚಾಯತ್ ರಾಜ್ ಇಲಾಖೆಯಿಂದ ಸುತ್ತೋಲೆ ಹೊರಡಿಸಲಾಯಿತು. ಈ ಸಭೆಯ ಪ್ರಮುಖ ಉದ್ದೇಶವೆನೆಂದರೆ, ವಿಕಲಚೇತನರ ಕುಂದು-ಕೊರತೆ ಆಲಿಸಿ, ಶೀಘ್ರ ಪರಿಹಾರ ಕಲ್ಪಿಸುವುದು, ವಿವಿಧ ಇಲಾಖೆಯಿಂದ ಜಾರಿಗೊಳಿಸುವ ಯೋಜನೆಗಳನ್ನು ದೊರಕಿಸುವುದು. ಹಾಗೂ ವಿಶೇಷಚೇತನರನ್ನು ಸರ್ವತೋಮುಖ ಅಭಿವೃಧಿಗಾಗಿ ಅರ್ಥಿಕ, ಸಾಮಾಜಿಕ, ಶೈಕ್ಷಣಿಕ, ಆರೋಗ್ಯ ಮತ್ತು ಸಾಂಸ್ಕೃತಿಕ ಪುನರ ಚೇತನ ಒಳಗೊಂಡಂತೆ. ಈ ಸಭೆಯಲ್ಲಿ ಪರಿಹಾರ ಕಂಡುಕೊಳ್ಳುವುದು ಸಭೆಯ ಉದ್ದೇಶ ಎಂದು ತಿಳಿಸಿದರು. 2007-2008 ರಲ್ಲಿ ಗ್ರಾಮೀಣ ಪುನರ್ವಸತಿ ಯೋಜನೆ ಜಾರಿಗೆ ಬಂದಿರುತ್ತದೆ. (V.R.W) (U.R.W)(M.R.W) ತಾಲೂಕ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರ ಕೆಲಸದ ಕುರಿತು ವಿವರಿಸಲಾಯಿತು. ಇವರು ಉದ್ದೇಶ ಗ್ರಾಮೀಣ ಮತ್ತು ನಗರ ಪ್ರದೇಶದಲ್ಲಿ ವಾಸವಾಗಿರುವ ವಿಶೇಷಚೇತನರಿಗೆ ಭೇಟಿ ಮಾಡಿ ಮನೆ ಮನೆಗೆ ಸಮೀಕ್ಷೆಯನ್ನು ನಡೆಸುವುದು, ಸರಕಾರದಿಂದ ಸಿಗುವ ಸೌಲಭ್ಯಗಳು, ಮಾಹಿತಿ ನೀಡಿವುದು, ಹಾಗೂ ಸೌಲಭ್ಯಗಳು ಒದಗಿಸಿಕೊಡುವುದು ಇಲಾಖೆ ಅಧಿಕಾರಿಗಳು ಮಾಹಿತಿ ಕೇಳಿದಾಗ ಮಾಹಿತಿ ಒದಗಿಸುವುದು. ಇವರ ಆದ್ಯ ಕರ್ತವ್ಯಯಾಗಿರುತ್ತದೆ ಎಂದು ಹೇಳಿದರು. (V.R.W) ಮತ್ತು (U.R.W) ಸರ್ವೇ ಮಾಡಿದ ಪ್ರಕಾರ ಗುರುಮಠಕಲ್ ತಾಲೂಕಿನಲ್ಲಿ ಯು.ಡಿ.ಐ.ಡಿ ಕಾರ್ಡ ಹೊಂದಿರುವ ವಿಶೇಷಚೇತನರು ಒಟ್ಟು 3789 ಜನರು ಇರುತ್ತಾರೆ. 187 ಯು.ಡಿ.ಐ.ಡಿ ಕಾರ್ಡ ಮಾಡಿಸಲು ಇನ್ನೂ ಅರ್ಜಿ ಬಂದಿವೆ ಎಂದು ಹೇಳಿದರು . ವಿಶೇಷಚೇತನರ ಸ್ವ-ಸಹಾಯ ಸಂಘಗಳು ಒಟ್ಟು 16 ವಿಕಲಚೇತನರ ಸಂಘಗಳು ರಚನೆಯಾಗಿರುತ್ತವೆ. ಹಾಗೂ ಅರೈಕೆದಾರರ ಸ್ವ-ಸಹಾಯ ಸಂಘಗಳು ರಚನೆಯಾಗಿವೆ

ವಿಶಿಷ್ಟಗುರುತಿನಚೀಟಿ(ಗಆಖಆ) ಶಾಲೆಯಲ್ಲಿ ಮಕ್ಕಳು ನೊಂದಣಿ ಮಾಡಿಸುವದು. ವಿದ್ಯಾರ್ಥಿ ವೇತನ ಕೊಡಿಸುವುದು, ಶುಲ್ಕ ಮರುಪಾವತಿ ಕೊಡಿಸುವುದು, ಅಂಧರಿಗೆ ಟಾಕಿಂಗ್ ಲ್ಯಾಪ್ ಟಾಪ್, ಬ್ರೈಲ್ ಕಿಟ್, ಎಮ್ ಅರ್. ಕಿಟ್, ವಿವಾಹ ಪ್ರೋತಾಹ ಧನ ನೀಡುವದು, ಮಾಸಿಕ ಪೋಷಣಾ ಭತ್ಯೆ, ರಿಯಾಯಿತಿ ದರದ ಬಸ್ ಪಾಸ್, ರೈಲ್ವೆ ಪಾಸ್, ಗಾಲಿ ಕುರ್ಚಿ, ಟ್ರೈಸಿಕಲ್, ಶ್ರವಣ ಸಾಧನಗಳು, ಕೃತಕ ಕಾಲು, ಕೃತಕ ಕೆ. 75% ಪತಿ ಶತ ಹೊಂದಿರುವ ವಿಶೇಷ ಚೇತನರಿಗೆ ಯಂತ್ರ ಚಾಲಿತ ವಾಹನ, ಶೌಚಾಲಯ, ಎಲ್ಲಾ ಸರಕಾರಿ ಕಚೇರಿಗಳಲ್ಲಿ ಖಂಒಕ ವ್ಯವಸ್ಥೆ ಮಾಡುವ ಕುರಿತು, ಇನ್ನು ಬೇರೆ ಇಲಾಖೆಯಿಂದ ಸಿಗುವ ಸೌಲಭ್ಯಗಳು ವಿಕಲಚೇತನರಿಗೆ ಒದಗಿಸಿಕೊಡಲಾಗುತ್ತದೆ, ವಿಶೇಷ ಚೇತನರ ವಿನಂತಿಯಂತೆ ಗುರುಮಠಕಲ್ ತಾಲೂಕಿನಲ್ಲಿ ವಿಶೇಷ ಚೇತನ ಭವನ, ಹೆಚ್ಚುವರಿ ಅನುದಾನ ಕುರಿತಾಗಿ ಜಿಲ್ಲಾಧಿಕಾರಿಗಳೊಂದಿಗೆ ಹಾಗೂ ಸಂಬಂಧ ಪಟ್ಟ ಅಧಿಕಾರಿಗಳ ಜೊತೆ ಚರ್ಚಿಸಿ ಯೋಜನೆ ಮಾಡಲಾಗುವದು ಎಂದು ಕಾರ್ಯ ನಿರ್ವಾಹಕ ಅಧಿಕಾರಿ ಅಂಬರೀಷ ಪಾಟೀಲ ನುಡಿದರು ಈ ಸಭೆಗೆ ಗುರುಮಠಕಲ್ ತಾಲೂಕ ಪಂಚಾಯತ್ ವಿಷಯ ನಿರ್ವಾಹಕರಾದ ವಿದ್ಯಾಸಾಗರ ಕುಲಕರ್ಣಿ ಮತ್ತು ಶರಣಪ್ಪ ಚೌಹಣ, ನಾಗೇಶ, ತಾಲೂಕ Prd task force ವಿಕಲ ಚೇತನರ ಅಧ್ಯಕ್ಷ ಸಿದ್ದಣ ಗೌಡ ನಜಾರಾಪುರ, ಎಲ್ಲಾ ಪಂಚಾಯತ ಅಭಿವೃದ್ದಿ ಅಧಿಕಾರಿಗಳು, ಗುರುಮಠಕಲ, ಚಂಡರಿಕಿ, ಚಪೆಟ್ಲಾ, ಮಿನಸಾಪುರ, ಪುಟಪಾಕ, ಕಂದಕುರ, ಪಸ್ಪುಲ, ಗಾಜರಕೊ ೀಟ, ಕಾಳಬೆಳಗುಂದಿ ಹಾಗೂ ಉಳಿದ ಪಂಚಾಯತಗಳಿಂದ ಬಂದಿರುವ ವಿಶೇಷಚೇತನರು ಹಾಜರಾಗಿ ತಮ್ಮ ಸಮಸ್ಯೆಗಳನ್ನು ಹೇಳಿಕೊಂಡರು.

## ರಾಜ್ಯದಲ್ಲಿ ಸರ್ಕಾರ ಆರು ಸಾವಿರ ಶಾಲೆಗಳನ್ನು ಮುಚ್ಚಲು ಹೊರಟಿದೆ -ರಾಜಶೇಖರ್ ವಿ. ಎನ್.



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ರಾಜ್ಯದಲ್ಲಿ ಸರ್ಕಾರ ಆರು ಸಾವಿರ ಸರ್ಕಾರಿ ಶಾಲೆಗಳನ್ನು ಮುಚ್ಚಲು ಹೊರಟಿದೆ ಎಂದು ಶಿಕ್ಷಣ ಉಳಿಸಿ ಹೋರಾಟ ಸಮಿತಿಯ ರಾಜ್ಯ ಉಪಾಧ್ಯಕ್ಷ ವಿ.ಎನ್, ರಾಜಶೇಖರ್ ಅವರು ಆಕ್ರೋಶ ವ್ಯಕ್ತಪಡಿಸಿದರು.

ನಗರದ ಪ್ರವಾಸಿ ಮಂದಿರದಲ್ಲಿ ಬಂಡಾಯ ಸಾಹಿತಿ ಅಲ್ಲಮ ಪ್ರಭು ಬೆಟ್ಟದೂರು 75 ರ ಸಭೆ ಬಳಿಕ ಶಿಕ್ಷಣ ಉಳಿಸಿ ಹೋರಾಟ ಸಮಿತಿಯ ರಾಜ್ಯ ಉಪಾಧ್ಯಕ್ಷ ವಿ.ಎನ್, ರಾಜಶೇಖರ್ ಮುಂದುವರೆದು ಮಾತನಾಡಿ ಶಾಲೆಗಳನ್ನು ಮರ್ಜ್ ಮಾಡಲು ನಿರ್ಧಾರತೆಗೆದುಕೊಂಡಿದೆ, ಮರ್ಜ್ ಅಂದರೆ ಇದು ವಾಸ್ತವ್ಯದಲ್ಲಿ ಆರು ಸಾವಿರ ಸರ್ಕಾರಿ ಶಾಲೆಗಳನ್ನು ಮುಚ್ಚಲ್ಪಡುತ್ತದೆ, ಇದು ಬಹಳ ಅಘಾತಕಾರಿ ಹಾಗೂ ನೋವಿನ ವಿಷಯ, ಸರ್ಕಾರ ಹೇಳುತ್ತಿರುವುದು ಹತ್ತು ಮಕ್ಕಳಿಗಿಂತ ಕಡಿಮೆ ಸಂಖ್ಯೆ ಇರುವ ಪ್ರವೇಶಕ್ಕೆ ಬರುವ ನಿರೀಕ್ಷೆ ಇಲ್ಲದ್ದರಿಂದ ಶಾಲೆಗಳನ್ನು ಮರ್ಜ್ ಮಾಡಲಾಗುತ್ತಿದೆ, ಅದು ಅಲ್ಲ, ಮೂಲಭೂತ ಪ್ರಶ್ನೆಯಾಗಬೇಕಿರೋದು,ಂ ಯಾಕೆ ಹತ್ತು ವಿದ್ಯಾರ್ಥಿಗಳು ಇಲ್ಲ, ಯಾಕೆ ಶಿಕ್ಷಣ ಗುಣ ಮಟ್ಟ ಕುಸಿದಿದೆ ? ಅದು ಮುಖ್ಯ ಪ್ರಶ್ನೆ ಆಗಬೇಕು, ಸರ್ಕಾರಿ ಶಾಲೆಗಳ ಈ ದುಸ್ಥಿತಿಗೆ ಕಾರಣ ಸಾವಿರಾರು ಶಿಕ್ಷಕರ ಹುದ್ದೆಗಳ ಖಾಲಿ ಬಿದ್ದಿವೆ, ಆ ಹುದ್ದೆಗಳಿಗೆ ಶಿಕ್ಷಕರ ಭರ್ತಿ ಮಾಡಬೇಕು, ರಾಜ್ಯ ಸರ್ಕಾರವೇ ಹೇಳಿಕೊಳ್ಳುವ ಪ್ರಕಾರ ಸರಿಸುಮಾರು 59 ಸಾವಿರ ಶಿಕ್ಷಕರ ಹುದ್ದೆ ಖಾಲಿ ಬಿದ್ದಿವೆ ಅದನ್ನು ತುಂಬುತ್ತಿಲ್ಲ, ಈ ತಕ್ಷಣಕ್ಕೆ ಒಂದು ತರಗತಿಗೆ ಒಬ್ಬ ಶಿಕ್ಷಕ ಲೆಕ್ಕ ತಗೊಂಡರೆ ಕರ್ನಾಟಕದಲ್ಲಿ ಎರಡುವರೆ ಲಕ್ಷ ಶಿಕ್ಷಕರನ್ನು ಭರ್ತಿ ಮಾಡಬೇಕಾಗುತ್ತದೆ, ಅದನ್ನು ಮಾಡುತ್ತಿಲ್ಲ, ಅತಿಥಿ ಶಿಕ್ಷಕರು 30 ರಿಂದ 40,000 ಸಾವಿರ ಜನರಿದ್ದಾರೆ, ಅವರನ್ನು ಕ್ರಮಬದ್ಧಗೊಳಿಸುತ್ತಿಲ್ಲ, ಇದು ತುಂಬಾ ನೋವಿನ ವಿಷಯ, ಇವತ್ತಿನ ಸರ್ಕಾರ ಅಲ್ಲ, ಇನ್ನುವರೆಗೆ ಬಂದಂತಹ ಯಾವುದೇ ಪಕ್ಷದ ಸರ್ಕಾರಗಳು ಅಧಿಕಾರಕ್ಕೆ ಬರಲಿ, ಇವರ ಶಿಕ್ಷಣ, ಆರೋಗ್ಯ ಆದ್ಯತೆ ಅಲ್ಲವೇ ಅಲ್ಲ, ಮೊನ್ನೆ ಹೋದ ವಾರ ವಿಧಾನ ಸಭೆಯಲ್ಲಿ ಚರ್ಚೆಗೆ ಬಂದಿತ್ತು, ಶಿಕ್ಷಣ ಸಚಿವರು ಹೇಳಿದ ಪ್ರಕಾರ 25 ವಿದ್ಯಾರ್ಥಿಗಳಿಗಿಂತ ಕಡಿಮೆ ಇರುವ ಶಾಲೆಗಳ ಸಂಖ್ಯೆ ಹದಿನೇಳು ಸಾವಿರ ಇದೆ ಎಂದು ಹೇಳಿದ್ದಾರೆ, ಒಂದೊಂದು ಹಳ್ಳಿಗೆ ಮಾದರಿಯ ಶಾಲೆ ಮಾಡಬೇಕಾದರೆ ಈ ಶಾಲೆಗಳನ್ನು ಮುಚ್ಚಬೇಕಾಗಿದೆ ಎಂದು ಹೇಳಿದ್ದಾರೆ, ಬಹಳ ನೋವಿನ ವಿಷಯ ಎಂದರೆ ಬಿಜೆಪಿಯ ಶಾಸಕರು, ಬೇರೆ ಪಕ್ಷಗಳ ಶಾಸಕರು ಎದ್ದು ನಿಂತು ದಯವಿಟ್ಟು ನಮ್ಮೂರಿಗೆ ಬನ್ರಿ ನಮ್ಮೂರಿನ ಸರ್ಕಾರಿ ಶಾಲೆ ಮುಚ್ಚೋಣ ಎಂದು ಪೈಪೋಟಿಯಲ್ಲಿ ಹೇಳುತ್ತಿದ್ದರು, ಇವರು ತಮ್ಮ ಖಾಸಗಿ ಆಸ್ತಿಯಂತೆ ಮಾತನಾಡುತ್ತಿದ್ದರು, ಇದು ಎಂಥಾ ದುರ್ಗತಿ ಬಂದಿದೆ ಎಂದು ತೋರಿಸುತ್ತದೆ, ಶಾಲೆ ಮುಚ್ಚುವುದರಲ್ಲಿ ಯಾವುದೇ ಭಿನ್ನಾಭಿಪ್ರಾಯಗಳಿಲ್ಲ ದಂತೆ ಕಾಂಗ್ರೆಸ್, ಬಿಜೆಪಿ, ಜೆಡಿಎಸ್ ಎಲ್ಲರೂ ಒಂದಾಗಿ ಬಿಟ್ಟಿದ್ದಾ-ರೆ, ಸರ್ಕಾರಿ ಶಾಲೆಗಳನ್ನು ಮುಚ್ಚಬೇಕೆನ್ನುವುದು ರಾಷ್ಟ್ರೀಯ ಶಿಕ್ಷಣ ನೀತಿ 2020 ಏನಿದೆ ಅದರ ಪ್ರಮುಖ ಶಿಫಾರಸುಗಳಲ್ಲಿ ಒಂದು, ನಾನು ಶಿಕ್ಷಣ ಉಳಿಸಿ ಹೋರಾಟ ಸಮಿತಿಯಿಂದ ರಾಜ್ಯ ಸರ್ಕಾರಕ್ಕೆ ಕೇಳಲು ಇಷ್ಟಪಡ್ತೀನಿ, ನೀವು ರಾಷ್ಟ್ರೀಯ ಶಿಕ್ಷಣ ನೀತಿ ವಿರೋಧಿಸುತ್ತೇವೆ ಅಂತ ಹೇಳುತ್ತೀರಿ, ರಾಜ್ಯ-ಕ್ಕೊಂದು ಶಿಕ್ಷಣ ನೀತಿ ತರಬೇಕು ಅಂತ ಹೇಳುತ್ತೀರಿ, ಇನ್ನೊಂದು ಕಡೆ ನೀವು ಅದೇ ರಾಷ್ಟ್ರೀಯ ಶಿಕ್ಷಣ ನೀತಿಯ ಶಿಫಾರಸ್ಸು ಶಾಲೆಗಳನ್ನು ಮರ್ಜ್ ಮಾಡುವುದು ಅಂದರೆ ಶಾಲೆಗಳನ್ನು ಮುಚ್ಚಲು ಹೊರಟಿದ್ದೀರಿ, ಏನು ವಿರೋಧ ನಿಮ್ಮದು ? ಇದು ಬಾಯಿಯೊಪಚಾರಕ್ಕೆ ಅಷ್ಟೇ ಹೇಳುದಾ ? ಸರ್ಕಾರಿ ಶಾಲೆಗಳನ್ನು ಉಳಿಸಬೇಕು, ಸರ್ಕಾರಿ ಶಾಲೆಗಳನ್ನು ಬೆಳೆಸಬೇಕು ಅಂದರೆ ಶಿಕ್ಷಕರನ್ನು ನೇಮಕ ಮಾಡಬೇಕು, ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು, ಶಿಕ್ಷಕರಿಗೆ ಶಿಕ್ಷಣೇತರ ಪಠ್ಯೇತರ ಕೆಲಸಗಳನ್ನು ಕೊಡಬಾರದು, ಒಂದನೇ ತರಗತಿಯಿಂದ ವಿದ್ಯಾರ್ಥಿಗಳಿಗೆ ಪರೀಕ್ಷೆ ಆಗಬೇಕು, ಮೌಲ್ಯಮಾಪನ ನಡೆಯಬೇಕು, 10ನೇ ತರಗತಿವರೆಗೆ ವಿದ್ಯಾರ್ಥಿಗಳಿಗೆ ಅನುತ್ತೀರ್ಣ ಮಾಡಬಾರದೆಂಬ ನೀತಿ ಶಿಕ್ಷಣದ ಗುಣಮಟ್ಟ ಕುಸಿಯಲು ಕಾರಣವಾಗಿದೆ, ಹೀಗಾಗಿ ಶಿಕ್ಷಕರಿಗೂ ಜವಾಬ್ದಾರಿ ಇಲ್ಲದಂತಾಗಿದೆ, ವಿದ್ಯಾರ್ಥಿಗಳನ್ನು ಅನುತ್ತೀರ್ಣ ಮಾಡಬೇಕಂತಲ್ಲ, ಪರೀಕ್ಷೆಗಳನ್ನು ನಡೆಸಬೇಕು, ಗಂಭೀರತೆ ಇರಬೇಕು, ಅಂ-ದಾಗ ಮಕ್ಕಳಿಗೆ, ಶಿಕ್ಷಕರಿಗೂ ಜವಾಬ್ದಾರಿ ಬರುತ್ತದೆ, ಇದಕ್ಕೆ ಪ್ರಮುಖವಾಗಿ ನಮ್ಮ ಶಿಕ್ಷಣ ಉಳಿಯ ಬೇಕೆಂದರೆ ರಾಜ್ಯ ಸರ್ಕಾರ ಬಜೆಟ್ಟಿನಲ್ಲಿ ಕನಿಷ್ಠ 30ರಷ್ಟು, ಕೇಂದ್ರ ಸರ್ಕಾರ 10% ರಷ್ಟು ಶಿಕ್ಷಣಕ್ಕೆ ಹಣ ನೀಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಶಾಲಾ ಪಾಲಕರ ಹೋರಾಟ ಸಮಿತಿ ಸಂಚಾಲಕ ಎಸ್,ಎ,ಗಫಾರ್, ಪ್ರಗತಿಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಬಸವರಾಜ್ ಶೀಲವಂತರ್, ಕೊಳಚೆ ನಿರ್ಮೂಲನಾ ವೇದಿಕೆಯ ಜಿಲ್ಲಾ ಸಂಚಾಲಕ ಗಾಳೆಪ್ಪ ಮುಂಗೋಲಿ, ಜನಪರ ಸಂಘಟನೆಗಳ ಒಕ್ಕೂಟದ ಜಿಲ್ಲಾ ಸಂಚಾಲಕ ಮಖಬೂಲ್ ರಾಯಚೂರು, ಶಿವಪ್ಪ ಹಡಪದ್ ಮುಂತಾದವರು ಉಪಸ್ಥಿತರಿದ್ದರು.

## ಕನ್ನಡದಲ್ಲಿ ನಾಮಫಲಕ ಅಳವಡಿಸಲು ಮೌನೇಶ ಬೆನಕನಹಳ್ಳಿ ಮನವಿ



ಸೇಡಂ. ಮಾ. 26. ತಾಲೂಕಿನ ಪುರಸಭೆ ಅಧಿಕಾರಿಗಳಿಗೆ ಕನ್ನಡದಲ್ಲಿ ನಾಮಫಲಕಗಳನ್ನು ಅಳವಡಿಸಲು ಮನವಿ ಪತ್ರ ನೀಡಿ ಮಾತನಾಡಿದ ಕರವೇ( ನಾರಾಯಣಗೌಡ ಬಣ ) ತಾಲೂಕಾಧ್ಯಕ್ಷ ಮೌನೇಶ ಬೆನಕನಹಳ್ಳಿ

ಕರ್ನಾಟಕ ಸರ್ಕಾರದ ಆದೇಶದ ಪ್ರಕಾರ ಸರ್ಕಾರಿ ಕಚೇರಿಗಳಲ್ಲಿ ಅಧಿಕಾರಿಗಳ ಹೆಸರು ಹಾಗೂ ಹುದ್ದೆಗಳ ನಾಮಫಲಕ

ಕನ್ನಡಲ್ಲಿರಬೇಕೆಂದು ಸರ್ಕಾರದ ಆದೇಶಕ್ಕೆ ಗೌರವನಿಡಬೇಕು ಆದರೆ ಇನ್ನು ಕೆಲವು ಸರ್ಕಾರಿ ಕಚೇರಿಗಳಲ್ಲಿ ನಾಮಫಲಕ ಬದಲಾವಣೆ ಆಗದಿರುವಿದು ವಿಪರ್ಯಾಸವೆ ಸರಿ ಅದೇ ರೀತಿ ತಾಲೂಕಿನ ಮಳಿಗೆ ಅಂಗಡಿ ಮುಗ್ಗಟ್ಟು ಹಾಗೂ ಶಾಪಿಂಗ ಮಾಲಗಳ ಮುಖಫಲಕದ ನಾಮಫಲಕವು ಕಡ್ಡಾಯವಾಗಿ ಬದಲಾವಣೆ ಮಾಡದಿದ್ದಲ್ಲಿ ಅವರ ಅಂಗಡಿ ಪರವಾನಗಿ ರದ್ದು ಮಾಡಬೇಕೆಂದು ಹೇಳಿದರು

ಈ ಸಂಧರ್ಭದಲ್ಲಿ ಮಹೇಶ. ದೇವು. ರಾಜು. ವಸಂತು. ಮಲ್ಲಿಕಾರ್ಜುನ. ವಿಶ್ವನಾಥ ಇನ್ನಿತರರು ಇದ್ದರು.

## ಮಾ.29 ವಿವಿಧ ಮಠಗಳಲ್ಲಿ ಶಿವಾನುಭವ ಚಿಂತನಾಗೋಷ್ಠಿ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.26:ಯುಗಾದಿ ಅಮವಾಸ್ಯೆ ನಿಮಿತ್ತ ಮಾ.29 ರಂದು ಜಿಲ್ಲೆಯ ವಿವಿಧ ಮಠಗಳಲ್ಲಿ ಶಿವಾನುಭವ ಚಿಂತನಾ ಗೋಷ್ಠಿ ಜರುಗಲಿದೆ.

ಅಂದು ಅಬ್ಬೇತುಮಕೂರಿನ ವಿಶ್ವರಾಧ್ಯ ಮಠದಲ್ಲಿ ರಾತ್ರಿ 8.30ಕ್ಕೆ 479ನೇ ಶಿವಾನುಭವ ಗೋಷ್ಠಿ ನಡೆಯಲಿದೆ. ಡಾ.ಗಂಗಾಧರ ಸ್ವಾಮೀಜಿ ಅಧ್ಯಕ್ಷತೆ ವಹಿಸಿ ಧಾರ್ಮಿಕ ವಿಷಯದ ಕುರಿತು ಉಪನ್ಯಾಸ ನೀಡಲಿದ್ದಾರೆ. ಜೇವರ್ಗಿ ತಾಲೂಕಿನ ಶಾಖಾಪುರ ವಿಶ್ವ-ರಾಧ್ಯ ತಪೋವನ ಮಠದಲ್ಲಿ ರಾತ್ರಿ 8ಕ್ಕೆ 369ನೇ ಗೋಷ್ಠಿ ನಡೆಯಲಿದೆ. ಡಾ. ಸಿದ್ದರಾಮ ಶಿವಾಚಾರ್ಯರು ಅಧ್ಯಕ್ಷತೆ ವಹಿಸಿ ಪ್ರವಚನ ನೀಡಲಿದ್ದಾರೆ. ಕಲಬುರಗಿ ತಾಲೂಕಿನ ಶ್ರೀನಿವಾಸ ಸರಡಗಿಯ ಚಿಕ್ಕವಿರೇಶ್ವರ ಹಿರೇಮಠ ಸಂಸ್ಥಾನದಲ್ಲಿ ರಾತ್ರಿ 8ಕ್ಕೆ 314ನೇ ಗೋಷ್ಠಿ ನಡೆಯಲಿದೆ. ಡಾ. ರೇವಣಸಿದ್ದ ಶಿವಾಚಾರ್ಯರು ನೇತೃತ್ವವಹಿಸಲಿದ್ದಾರೆ. ಯಾದಗಿರಿ ಜಿಲ್ಲೆಯ ಶಹಾಪೂರ ತಾಲೂಕಿನ ಅಪ್ಪನ ಶಾಖಾ ಮಠದಲ್ಲಿ ಎಪ್ರಿಲ್ 3 ರಂದು ರಾತ್ರಿ 8.50ಕ್ಕೆ 296ನೇ ಶಿವಾನುಭವ ಗೋಷ್ಠಿ ನಡೆಯಲಿದೆ.

## ಏ. 5ರ ಒಳಗಾಗಿ ಒಳಮೀಸಲಾತಿ ಜಾರಿ ಮಾಡದಿದ್ದಲ್ಲಿ ಮುಂದಿನ ಅನಾಹುತಗಳಿಗೆ

# ಸರ್ಕಾರವೇ ನೇರ ಹೊಣೆ: ಭಾಸ್ಕರ ಪ್ರಸಾದ ಎಚ್ಚರಿಕೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 26 : ಏಪ್ರಿಲ್ 5ರಂದು ಬಾಬು ಜಗಜೀವನರಾಮ್ ಅವರ ಜಯಂತಿ ಉತ್ಸವ ಇರುವುದರಿಂದ ಅದರ ಒಳಗೆ ಈ ಸರ್ಕಾರ ಒಳಮೀಸಲಾತಿ ಜಾರಿ ಮಾಡದಿದ್ದಲ್ಲಿ ಮುಂದೆ ಆಗುವ ಅನಾಹುತಗಳಿಗೆ ಸರ್ಕಾರವೇ ಹೊಣೆಯಾಗಲಿದೆ ಎಂದು ಮಾದಿಗ ಹೋರಾಟ ಸಮನ್ವಯ ಸಮಿತಿ ರಾಜ್ಯಪ್ರಮುಖರಾದ ಭಾಸ್ಕರಪ್ರಸಾದ ಎಚ್ಚರಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು ಈಗಾಗಲೇ ಮುಖ್ಯಮಂತ್ರಿಗಳು ಒಂದು ವಾರ ಗಡುವು ಕೇಳಿದ್ದಾರೆ. ಆದರೆ ನಾವು ಸರ್ಕಾರಕ್ಕೆ 12 ದಿವಸ ಸಮಯಾವಕಾಶ ನೀಡುತ್ತಿದ್ದೇವೆ. ಅಷ್ಟರೊಳಗೆ ಒಳಮೀಸಲಾತಿ ಜಾರಿಯಾಗಬೇಕು. ಇಲ್ಲವಾದರೆ ವಿಧಾನಸೌಧದ ಮೆಟ್ಟಿಲುಗಳಲ್ಲಿ ನಮ್ಮ ಹೆಣಗಳನ್ನು ನೋಡುವಿರಿ ಎಂದು ಸರ್ಕಾರಕ್ಕೆ ಎಚ್ಚರಿಸಿದರು.

ಮುಂದುವರೆದು ಮಾತನಾಡಿರುವ ಭಾಸ್ಕರಪ್ರಸಾದ ಅವರು ಮುಖ್ಯಮಂತ್ರಿಗಳು ಈಗಾಗಲೇ ನೇರವಾಗಿ ನಮ್ಮ ಬಳಿ ಮುಕ್ತವಾಗಿ ಅವರ ಅಳಲು ತೆ-ೋಡಿಕೊಂಡಿದ್ದಾರೆ. ಅದೇನೆಂದರೆ ಗೃಹಸಚಿವ ಡಾ. ಜಿ.ಪರಮೇಶ್ವರ, ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ಹಾಗೂ ಸಮಾಜ ಕಲ್ಯಾಣ ಸಚಿವ ಹೆಚ್.ಸಿ.ಮಹಾದೇವಪ್ಪ ಈ ನಾಲ್ಕು



ಜನ ಸಚಿವರು ಒಳಮೀಸಲಾತಿಗೆ ದೊಡ್ಡ ಪ್ರಮಾಣದ ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಮಾದಿಗ ಸಮಾಜದ ಸಚಿವರಾದ ಆರ್.ಬಿ.ತಿಮ್ಮಾಪುರ ಹಾಗೂ ಕೆ.ಎಚ್.ಮುನಿಯಪ್ಪ ಅವರು ಕ್ಯಾಬಿನೆಟ್‌ನಲ್ಲಿ ಮೌನ ವಹಿಸುತ್ತಿರುವರು. ಹೀಗಿರುವಾಗ ನಾನೇನು ಮಾಡಲಿ ಎಂದು ತಮ್ಮ ಅಸಹಾಯಕತೆ ತೋಡಿ-ಕೊಂಡಿದ್ದಾರೆ ಎಂದು ಗಂಭೀರ ಆರೋಪ ಮಾಡಿದರು. ಪ್ರೊ. ಬಿ.ಕೃಷ್ಣಪ್ಪ ಅವರ ಸಮಾಧಿಯಿಂದ ಆರಂಭವಾಗುವ ನಮ್ಮ ಪಾದಯಾತ್ರೆ ಬೆಂಗಳೂರಿನವರೆಗೆ ಸಾಗಿದೆ. ಮುನಿಯಪ್ಪ ಅವರು ಮೂರು ತಿಂಗಳ ಕಾಲಾವಕಾಶ ಕೇಳಿದ್ದರು. ಆದರೆ ಅದನ್ನು ನಾವು ಒಪ್ಪಲಿಲ್ಲ. ಹಾಗಾಗಿ ಸರ್ಕಾರ ಒಂದು ವಾರದ ಗಡುವು ಕೇಳಿದೆ. ಮುಖ್ಯಮಂತ್ರಿ ಸಿದ್ಧರಾಮಯ್ಯನವರು ಒಂದೇ ದಿನದಲ್ಲಿ ಪ್ರತ್ಯೇಕ ಲಿಂಗಾಯತ ಧರ್ಮ ಮಾಡಲು ಹೊರಟಿದ್ದರು. ಮುಡಾ ಹಗರಣದಲ್ಲಿ ತಮ್ಮ ಮೈಮೇಲೆ ಆರೋಪ ಬಂದಿದೆ ಎಂದು ತರಾತುರಿಯಲ್ಲಿ ರಾತ್-ೋ ರಾತ್ರಿ 12 ನಿವೇಶನಗಳನ್ನು ಸರ್ಕಾರಕ್ಕೆ ಹಿಂದಿರುಗಿಸಿದರು. ಆದರೆ ಒಳಮೀಸಲಾತಿ ಜಾರಿ ಮಾಡಲು ಇವರಿಗೇಕೆ ಕಾಲಾವಕಾಶ ಬೇಕು? ಎಂದು ಪ್ರಶ್ನೆ ಮಾಡಿದ್ದರು. ಈಗಾಗಲೇ ನಾಗಮೋಹನದಾಸ್ ಅವರ ಆಯೋಗ ಎರಡು ತಿಂಗಳು ವಿಳಂಬ ಮಾಡಿದೆ.

ಸದಾಶಿವ ಆಯೋಗದ ಪ್ರಕಾರ ಮೀಸಲಾತಿ ಜಾರಿ ಮಾಡಿ. ಮಾಧುಸ್ವಾಮಿ ವರದಿ ಪ್ರಕಾರ ಹಾಗೂ ಕಾಂತರಾಜ ವರದಿ ಪ್ರಕಾರ ಇದೂ ಸಹ ಸಾಧ್ಯವಿಲ್ಲವೆಂದರೆ ಹೊಸ ಜಾತಿಗಳ ದತ್ತಾಂಶ ಕ್ರೂಢಿಕರಿಸಿ ಒಳಮೀಸಲಾತಿ ಜಾರಿ ಮಾಡಿ. ಆದರೆ ಕುಂಟುನೆಪ ಹೇಳಿ ಕಾಲಾಹರಣ ಮಾಡಿದರೆ ಸರ್ಕಾರ ಗಂಭೀರ ಪರಿಣಾಮ ಎದುರಿಸಬೇಕಾಗುತ್ತದೆ ಎಂದು ಭಾಸ್ಕರ ಪುನರುಚ್ಚರಿಸಿದರು. 35 ವರ್ಷಗಳಿಂದ ಒಳಮೀಸಲಾತಿಗಾಗಿ ಹೋರಾಟ ಮಾಡುತ್ತಿರುವ ನಮಗೆ ಈ ಸರ್ಕಾರ ಘೋರ ಅನ್ಯಾಯ ಮಾಡಿದೆ. 38 ವರ್ಷಗಳ ಕಾಲ ಇದೇ ಕಾಂಗ್ರೆಸ್ ಸರ್ಕಾರ ರಾಜ್ಯವಾಳಿದರೂ ನಮ್ಮನ್ನು ನಿರಂತರವಾಗಿ ತುಳಿಯುತ್ತ ಬಂದಿದೆ. ಈಗಾಗಲೇ ಹರಿಯಾಣ, ತಮಿಳುನಾಡು, ತೆಲಂಗಾಣ, ಆಂಧ್ರಪ್ರದೇಶಗಳಲ್ಲಿ ಒಳಮೀಸಲಾತಿ ಜಾರಿಯಾಗಿರುತ್ತದೆ. ಸರ್ವೋಚ್ಚ ನ್ಯಾಯಾಲಯವು ಸಹ ತನ್ನ ತೀರ್ಪು ಪ್ರಕಟಿಸಿದೆ. ಹೀಗಿರುವಾಗ ಇಲ್ಲಿಯ ಸರ್ಕಾರ ಒಳಮೀಸಲಾತಿ ಜಾರಿ ಮಾಡದೆ ಭಂಡತನ ಪ್ರದರ್ಶಿಸುತ್ತಿದೆ. ಈ ಸರ್ಕಾರಕ್ಕೆ ಏ.5 ಅಂತಿಮ ಗಡುವು ನೀಡಿದ್ದು, ಜಾರಿ ಮಾಡದಿದ್ದರೆ ರಾಜ್ಯದ ಮೂಲೆಮೂಲೆಗಳಿಂದ ಒಂದು ಲಕ್ಷ ಜನರನ್ನು ಸೇರಿಸಿ ಬೆಂಗಳೂರಿನಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು. ಈ ಸರ್ಕಾರಕ್ಕೆ ಬಾಬು ಜಗಜೀವನರಾಮ್ ಅವರ ಬಗ್ಗೆ ಕಾಳಜಿ ಇದ್ದರೆ ಅವರ ಅನುಯಾಯಿಗಳಾದ ನಮಗೆ ಅಂದು ಖುಷಿಸುದ್ದಿ ನೀಡಬೇಕು. ಇಲ್ಲವಾದಲ್ಲಿ ಜಗಜೀವನರಾಮ್ ಅವರ ಜಯಂತಿ ಆಚರಿಸಲು ಬಿಡುವುದಿಲ್ಲ ಎಂದು ಖಡಕ್ ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಸಮಾಜದ ಮುಖಂಡರಾದ ದೇವಿದಾಸ ತುಮಕುಂಟೆ, ರಮೇಶ ಕಟ್ಟಿತೂಗಾಂವ, ಕಲ್ಲಪ್ಪ ವೈದ್ಯ ಮಾತನಾಡಿದರು. ಸ್ವಾಮಿದಾಸ ಕೆಂಪೆನೋರ್, ಬಂಟಿ ದರ್ಬಾರೆ, ಪ್ರದೀಪ ಹೆಗಡೆ, ಪೀಟರ್ ಶ್ರೀಮಂಡಲ, ಶಿವರಾಜ ನೆಲವಾಳಕರ್, ಡಾ. ಬಸವರಾಜ ಔರಾದೆ, ರಾಜಕುಮಾರ ಹಳ್ಳಿಖೇಡ, ಶಿವರಾಜ ಮುಗನೂರೆ, ದಾವೀದ್ ಸೇರಿದಂತೆ ಇತರರಿದ್ದರು.

# ನಮ್ಮ ಭಾಗದ ಜನರು ಭಾವೈಕ್ಯತೆಯಿಂದ ಜೀವನ ನಡೆಸುತ್ತಿದ್ದಾರೆ: ಬಂಡೆಪ್ಪ ಖಾಶೆಂಪುರ್

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 26 : ಅಷ್ಟೂರ ಗ್ರಾಮದ ಅಲ್ಲಮಪ್ರಭು ದೇವರ ಬಳಿ ಯಾವುದೇ ಭೇದಭಾವ ಇಲ್ಲ. ಜಾತಿ, ಧರ್ಮದ ಭೇದಭಾವ ಮಾಡದೇ ಸಹಸ್ರಾರು ಸಂಖ್ಯೆಯ ಭಕ್ತರು ಜಾತ್ರೆಯಲ್ಲಿ ಪಾಲ್ಗೊಳ್ಳುವುದು ವಿಶೇಷವಾಗಿದೆ ಎಂದು ಮಾಜಿ ಸಚಿವರು, ಜೆಡಿಎಸ್ ಪಕ್ಷದ ಹಿರಿಯ ನಾಯಕರಾಗಿರುವ ಬಂಡೆಪ್ಪ ಖಾಶೆಂಪುರ್ ರವರು ಹೇಳಿದರು.

ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಅಷ್ಟೂರ ಗ್ರಾಮದ ಹೊರವಲಯದಲ್ಲಿರುವ ಶ್ರೀ ಅಲ್ಲಮಪ್ರಭು ದೇವರ ದರ್ಗಾದ ಆವರಣದಲ್ಲಿ ಮಂಗಳವಾರ ರಾತ್ರಿ ನಡೆದ ಶ್ರೀ ಅಲ್ಲಮಪ್ರಭು ದೇವರ ಜಾತ್ರಾ ಮಹೋತ್ಸವ & ಸಾಂಸ್ಕೃತಿಕ ಕಾರ್ಯಕ್ರಮ (ಉರ್ಸ್ /ಸಂದಲ್) ದಲ್ಲಿ ಪಾಲ್ಗೊಂಡು, ದರ್ಶನ ಪಡೆದು ಅವರು ಮಾತನಾಡಿದರು.



ಅಲ್ಲಮಪ್ರಭು ದೇವರ ಬಳಿ ಎಲ್ಲರೂ ಒಂದೇ. ಇಲ್ಲಿ ಅದು ಇದು, ಆ ಜಾತಿ ಈ ಜಾತಿ ಎಂಬ ಯಾವುದೇ ಭೇದಭಾವ ಇರುವುದಿಲ್ಲ. ಎಲ್ಲವನ್ನೂ, ಎಲ್ಲರನ್ನೂ ಇಲ್ಲಿ ಒಂದೇ ರೀತಿಯಲ್ಲಿ ಕಾಣಲಾಗುತ್ತದೆ. ಎಲ್ಲಾ ಸಮಾಜದವರು ಸೇರಿ ಈ ಜಾತ್ರೆ ಮಾಡುತ್ತಾರೆ. ಇದು ಬಹಳಷ್ಟು ಸಂತಸದ ವಿಷಯವಾಗಿದೆ. ನಮ್ಮ ಬೀದರ್ ದಕ್ಷಿಣ ವಿಧಾನಸಭಾ ಕ್ಷೇತ್ರದ ಬಹುತೇಕ ಹಳ್ಳಿಗಳಲ್ಲಿ ದರ್ಗಾಗಳಿವೆ. ಅಲ್ಲಿ ವರ್ಷಕ್ಕೊಮ್ಮೆ ಉರ್ಸ್ ಆಗುತ್ತದೆ.

ಎಲ್ಲಾ ಜಾತಿ, ಧರ್ಮಗಳ ಜನರು ಒಗ್ಗಟ್ಟಿನಿಂದ ಉರ್ಸ್ ಮಾಡುತ್ತಾರೆ. ಅದರಂತೆ ಅಷ್ಟೂರ ಗ್ರಾಮದ ಮುಖಂಡರಲ್ಲಿ ಒಗ್ಗಟ್ಟಿದೆ. ಅವರು ಒಗ್ಗಟ್ಟಿನಿಂದ ಕೆಲಸ ಮಾಡುತ್ತಿದ್ದಾರೆ. ನಮ್ಮ ಭಾಗದ ಜನರು ಭಾವೈಕ್ಯತೆಯಿಂದ ಜೀವನ ನಡೆಸುತ್ತಿದ್ದಾರೆ. ಇಲ್ಲಿ ಅಷ್ಟೂರ ಅಲ್ಲಮಪ್ರಭು ದೇವರ ಜಾತ್ರೆಯಲ್ಲಿ ಐತಿಹಾಸಿಕ ಕುಸ್ತಿ ಕಾರ್ಯಕ್ರಮ ನಡೆಯುತ್ತದೆ. ಅಷ್ಟೂರ ಕುಸ್ತಿ ಅಂದ್ರೆ ಪಕ್ಕದ ಮಹಾರಾಷ್ಟ್ರದಿಂದ ಕೂಡ ಕುಸ್ತಿಪಟುಗಳು ಬರುತ್ತಾರೆ.

ನೂರಾರು ವರ್ಷಗಳಿಂದ ನಮ್ಮ ಹಿರಿಯರು ಆಚರಣೆ ಮಾಡಿಕೊಂಡು ಬಂದಿರುವ ಪರಂಪರೆಯನ್ನು ಇವತ್ತಿಗೂ ನಮ್ಮ ಜನ ಕಾಪಾಡಿಕೊಂಡು ಬರುತ್ತಿದ್ದಾರೆ. ಅದೇ ನಮ್ಮ ಭಾರತದ ಸಂಸ್ಕೃತಿ ಮತ್ತು ಸಭ್ಯತೆ ಎನ್ನಬಹುದಾಗಿದೆ. ಇದು ಬೇರೆ ಕಡೆ ಎಲ್ಲಿಯೂ ಸಿಗುವುದಿಲ್ಲ ಎಂದು ಭಾರತೀಯ ಸಂಸ್ಕೃತಿ, ಪರಂಪರೆಯ ಇತಿಹಾಸವನ್ನು ಮಾಜಿ ಸಚಿವ ಬಂಡೆಪ್ಪ ಖಾಶೆಂಪುರ್ ರವರು ಮೆಲುಕು ಹಾಕಿದರು. ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ಮಾಡ್ಯಾಳದ ಸೋಮಶೇಖರ್ ಒಡೆಯರ್, ಹೆಬ್ಬಳ್ಳಿಯ ಶ್ರೀಮಂತ ಧರ್ಮಣ್ಣ ಒಡೆಯರ್, ಖಟಕ್ ಚಿಂಚೋಳಿ ಹಿರೇಮಠದ ಬಸವಲಿಂಗ ಮಹಾಸ್ವಾಮಿಗಳು ವಹಿಸಿದ್ದರು. ಕಾರ್ಯಕ್ರಮದಲ್ಲಿ ಪ್ರಮುಖರಾದ ಪಂಡಿತರಾವ್ ಚಿದ್ರಿ, ಗೀತಾ ಪಂಡಿತರಾವ್ ಚಿದ್ರಿ, ಬಾಬುರಾವ್ ಮಲ್ಕಾಪೂರೆ, ಪ್ರಕಾಶ್ ಪಾಟೀಲ್, ಶಶಿಧರ್ ಪಾಟೀಲ್, ಶಿವಕುಮಾರ್ ನಾಗಲಗಿದ್ದಿ, ಅರ್ಜುನ್ ಕಾಳಗೊಂಡ, ರಾಹುಲ್ ಮೊರೆ, ಸಂಗಶೆಟ್ಟಿ ರಾಮತೀರ್ಥ, ಉಮೇಶ್ ರತನಗೊಂಡ, ಮಹಮ್ಮದ್ ಕುದ್ದುಸ್, ಮಹಮ್ಮದ್ ಪಿರೋಜ್, ಬಾಬುರಾವ್ ನಾಗಲಗಿದ್ದಿ, ಸುನೀಲ್ ಬೌದ್ಧೆ, ಬಸಯ್ಯಸ್ವಾಮಿ, ಲೋಕೇಶ್ ಜಾಂತೆ, ಉಮೇಶ್ ಮೇತ್ರೆ, ಮಾರ್ಟಿನ್ ಸೇರಿದಂತೆ ಅನೇಕರಿದ್ದರು.

# ನೌಕರರ ಸಂಘ: ನಾಳೆ ಮಹಿಳಾ ದಿನಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 26 : ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ವತಿಯಿಂದ ನಗರದ ಪ್ರತಾಪನಗರದ ಸರ್ಕಾರಿ ನೌಕರರ ಸಮುದಾಯ ಭವನದಲ್ಲಿ ಮಾ. 28 ರಂದು ಸಂಜೆ 5.30ಕ್ಕೆ ಮಹಿಳಾ ದಿನಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.



ಮಹಿಳಾ ದಿನಾಚರಣೆ ಪ್ರಯುಕ್ತ ಆಯೋಜಿಸಿದ್ದ ಕ್ರೀಡಾಕೂಟದ ವಿವಿಧ ಸ್ಪರ್ಧೆಗಳ ವಿಜೇತರಿಗೆ ಬಹುಮಾನ ವಿತರಿಸಲಾಗುವುದು. ವಿವಿಧ ಕ್ಷೇತ್ರಗಳ ಸಾಧಕ ಮಹಿಳಾ ಸರ್ಕಾರಿ ನೌಕರರನ್ನು ಸನ್ಮಾನಿಸಲಾಗುವುದು ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಸೋಮಶೇಖರ ಬಿರಾದಾರ ತಿಳಿಸಿದ್ದಾರೆ.

ನೌಕರರು ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದ್ದಾರೆ.

# ಸಮುದಾಯ ಭವನಕ್ಕೆ ನಿವೇಶನ ಒದಗಿಸಿ

ಮಲ್ಲಮ್ಮ ನುಡಿ ವಾರ್ತೆ ಬೀದರ. ಮಾ. 26 : ನಗರದ ಸುತ್ತಮುತ್ತಲಿನ ಪ್ರದೇಶದಲ್ಲಿ ಹಿಂದುಳಿದ ವರ್ಗಗಳ ಸಮುದಾಯ ಭವನ ನಿರ್ಮಾಣಕ್ಕೆ ನಿವೇಶನ ಒದಗಿಸಬೇಕು ಎಂದು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಒಕ್ಕೂಟ ಒತ್ತಾಯಿಸಿದೆ.

ಒಕ್ಕೂಟದ ಪದಾಧಿಕಾರಿಗಳು ನಗರದಲ್ಲಿ ಮಂಗಳವಾರ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರಿಗೆ ಈ ಕುರಿತು ಮನವಿ ಪತ್ರ ಸಲ್ಲಿಸಿದರು. ಧಾರ್ಮಿಕ, ಸಾಂಸ್ಕೃತಿಕ ಹಾಗೂ ಇತರ ಕಾರ್ಯಕ್ರಮಗಳ ಆಯೋಜನೆಗೆ ನಿವೇಶನ ಇಲ್ಲದ ಕಾರಣ ಹಿಂದುಳಿದ ವರ್ಗಗಳಿಗೆ ಬಹಳ ಸಮಸ್ಯೆಯಾಗುತ್ತಿದೆ ಎಂದು ಗಮನ ಸೆಳೆದರು. ಜಿಲ್ಲಾ ಉಪ್ಪಾರ



ಸಮಾಜದ ಗೌರವಾಧ್ಯಕ್ಷ ಜಗನ್ನಾಥ ಉಪ್ಪಾರ, ಅಧ್ಯಕ್ಷ ತಾನಾಜಿ ಸಗರ್, ಭೋವಿ ಸಮಾಜದ ಅಧ್ಯಕ್ಷ ಶೈಲೇಂದ್ರ ಹಿವಾರೆ, ಭಾವುಸಾರ ಕ್ಷತ್ರೀಯ ಸಮಾಜದ ಅಧ್ಯಕ್ಷ ಸಂಜುಕುಮಾರ ಘನಾತೆ, ಗೌಳಿ ಸಮಾಜದ ಅಧ್ಯಕ್ಷ ವಿಠ್ಠಲರಾವ್ ಗೌಳಿ, ಇಡಿಗ ಸಮಾಜದ ಬೀದರ್ ನಗರ ಘಟಕದ ಅಧ್ಯಕ್ಷ ಸಂಗಯ್ಯ ಸುಲ್ತಾನಪುರ, ಕಲಾಲ್ ಸಮಾಜದ ಅಧ್ಯಕ್ಷ ಸಾಯಿಕುಮಾರ ಖಾಟಿಕ್, ವಿವಿಧ ಸಮಾಜಗಳ ಮುಖಂಡರಾದ ಶಿವಕುಮಾರ ಶಹಾಪುರೆ, ಶಾಂತಕುಮಾರ ಮಂಗಲಗಿ, ಉಮೇಶ ಭೋವಿ, ಧನಾಜಿ ಸಗರ್ ಇದ್ದರು.

# ಅರ್ಷದ್ ಅಲಿಯವರ ಸಾತ್ವಿಕತೆ

## ಯುವ ಪತ್ರಕರ್ತರಿಗೆ ಉಸಿರಾಗಲಿ: ಶಿವಶರಣಪ್ಪ ವಾಲಿ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 26 : ದಿ. ಕಾಜಿ ಅರ್ಷದ್ ಅಲಿಯವರ ಸ್ವಾಭಿಮಾನ ಹಾಗೂ ಸಾತ್ವಿಕ ಗುಣಗಳು ಇಂದಿನ ಯುವ ಪತ್ರಕರ್ತರಿಗೆ ಉಸಿರಾಗಲಿ ಎಂದು ಹಿರಿಯ ಪತ್ರಕರ್ತ ಶಿವಶರಣಪ್ಪ ವಾಲಿ ತಿಳಿಸಿದರು. ಬುಧವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕವು ಆಯೋಜಿಸಿದ ಮಾಜಿ ವಿಧಾನ ಪರಿಷತ್ ಸದಸ್ಯರು ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಮಾಜಿ ಜಿಲ್ಲಾಧ್ಯಕ್ಷರೂ ಆಗಿದ್ದ ದಿ. ಕಾಜಿ ಅರ್ಷದ್ ಅಲಿಯವರ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು. ಪತ್ರಕರ್ತರಾದವರು ಅಧಿಕಾರಿಗಳೊಂದಿಗೆ ಸ್ನೇಹತ್ವ ಬೆಳೆಸಬೇಕೇ ವಿನಃ ಗುಲಾಮಗಿರಿ ಮಾಡಕೂಡದು. ನಮ್ಮ ವೃತ್ತಿಧರ್ಮ ಪ್ರಾಮಾಣಿಕತೆಯಿಂದ ಪಾಲಿಸಬೇಕು. ನಾವು ಇನ್ನೊಬ್ಬರಿಗೆ ಹೆದರಿಸುವ



ಅಥವಾ ಬ್ಲ್ಯಾಕ್ ಮೇಲ್ ಮಾಡುವ ಪತ್ರಕರ್ತರಾಗದೆ ನಮ್ಮ ಬರವಣಿಗೆಗೆ ಜನ ಹೆದರಬೇಕು. ಸಂಬಂಧ ಹಾಗೂ ನಿಯಮ ಬೇರೆ ಬೇರೆಯಾಗಿರಬೇಕು. ನಾವು ಮಾರ್ಗದರ್ಶಕರಾಗಬೇಕೆ ಹೊರತು ಅರ್ಧಂಬರ್ಧ ತಿಳಿದುಕೊಂಡು ಸುದ್ದಿಮನೆಯ ಪ್ರತಿನಿಧಿಯಾಗಬಾರದು. ಒಟ್ಟಾರೆ ಅರ್ಷದ ಅಲಿಯವರಿಗೆ ನಿಜವಾದ ಶ್ರದ್ಧಾಂಜಲಿ ಸಲ್ಲಿಕೆಯಾಗಬೇಕಾದರೆ ಗರ್ವ, ಸಿಟ್ಟು, ಅಹಂಕಾರ ಇವುಗಳಿಂದ ವಿಮುಖರಾಗಿರಬೇಕೆಂದು ಕರೆ ನೀಡಿದರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ಮಂಜುನಾಥ ಸುಳ್ಳೊಳ್ಳಿ ಮಾತನಾಡಿ ಜ್ಞಾನದ ಹಾಗೂ ಧೈರ್ಯದ ಕೊರತೆಯಿಂದ ಇಂದು ಶ್ರೇಷ್ಠ ವರದಿಗಾರಿಕೆ ವಿಮುಖವಾಗುತ್ತಿದೆ. ಹೆಚ್ಚು ಅಧ್ಯಯನಶೀಲರಾಗಿ ಪುಸ್ತಕಗಳನ್ನು ಓದುವ ಅಭ್ಯಾಸ ಬೆಳೆಸಿಕೊಳ್ಳುವಂತೆ ತಿಳಿಸಿದರು. ಹಿರಿಯ ಪತ್ರಕರ್ತ ಗಂಧರ್ವ ಸೇನಾ ಮಾತನಾಡಿ ಅರ್ಷದ ಅಲಿಯವರು ಒಂದು ವಿಶ್ವಕೋಶದಂತಿದ್ದರು. ಪರಿಪೂರ್ಣ ಅಧ್ಯಯನಗೈದು ಪ್ರಖರ ಸುದ್ದಿ ಬಿತ್ತರಿಸುವ ಅವರ ಕೌಶಲ್ಯ ಇಂದಿನ ಉದಯೋನ್ಮುಖ ಪತ್ರಕರ್ತರಿಗೆ ದಾರಿದೀಪವಾಗಲಿದೆ ಎಂದರು

ಪತ್ರಕರ್ತ ಬಾಬು ವಾಲಿ ಮಾತನಾಡಿ ಪತ್ರಕರ್ತರು ಪದೇ ಪದೇ ಸೇರುತ್ತಿರಬೇಕು. ಇದರ ಮೂಲಕ ಒಗ್ಗಟ್ಟು ಪ್ರದರ್ಶಿಸುವ ಮೂಲಕ ಸಂಘಟನೆ ಬಲಪಡಿಸಬೇಕೆಂದು ಕರೆ ಕೊಟ್ಟರು. ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಡಿ.ಕೆ ಗಣಪತಿ ಅಧ್ಯಕ್ಷತೆ ವಹಿಸಿ ಮಾತನಾಡಿ ಸಂಘವು ಎಲ್ಲಾ ಹಿರಿಯ ಪತ್ರಕರ್ತರ ಶ್ರದ್ಧಾಂಜಲಿ ಕಾರ್ಯಕ್ರಮಗಳು ಆಚರಿಸಿ ಗೌರವ ಸಲ್ಲಿಸುತ್ತಿದೆ. ಹಿರಿಯ ಪತ್ರಕರ್ತರ ಮನೆಗೆ ಹೋಗಿ ಅವರಿಗೆ ಸನ್ಮಾನಿಸುವುದು, ಮಾರ್ಗದರ್ಶನ ಪಡೆಯುವುದು, ಪ್ರಶಸ್ತಿ ಪುರಸ್ಕೃತರನ್ನು ಗೌರವಿಸುವುದು, ನೊಂದ ಕುಟುಂಬಗಳಿಗೆ ನೆರವಾಗುವುದು ಸೇರಿದಂತೆ ಹತ್ತು ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದೆ ಎಂದರು. ಪತ್ರಕರ್ತರ ಮಾಳಪ್ಪ ಅಡಸಾರೆ ಹಾಗೂ ಸಿದ್ರಾಮಯ್ಯ ಸ್ವಾಮಿ ಮಾತನಾಡಿದರು. ಅರ್ಷದ ಅಲಿಯವರ ಕುಟುಂಬಸ್ಥರಾದ ರಿಣಜಿಡಿಇಣಈ ಕಾಜಿ ಅಲಿಯೋದ್ದಿನ್, ಐ.ಎಫ್. ಡಬ್ಲ್ಯೂ.ಜೆ ಸದಸ್ಯ ಅಪ್ಪಾರಾವ ಸೌದಿ, ಪತ್ರಕರ್ತ ಶಶಿಕುಮಾರ ಪಾಟೀಲ, ವೇದಿಕೆಯಲ್ಲಿದ್ದರು. ಇದಕ್ಕೂ ಮುನ್ನ ಅರ್ಷದ ಅಲಿಯವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಎರಡು ನಿಮಿಷ ಮೌನಾಚರಣೆ ಮಾಡಲಾಯಿತು. ವಾರ್ತಾ ಇಲಾಖೆಯ ವಿಜಯಕೃಷ್ಣ ಸೋಲಪುರ, ಪತ್ರಕರ್ತರಾದ ದೀಪಕ ವಾಲಿ, ಚಂದ್ರಕಾಂತ ಪಾಟೀಲ, ಶ್ರೀನಿವಾಸ ಚೌಧರಿ, ಪೃಥ್ವಿರಾಜ್ ಎಸ್., ನಾಗಶೆಟ್ಟಿ ಧರಂಪುರ, ಅಬ್ದುಲ್ ಖದಿರ, ಶಶಿ ಶೆಂಬೆಳ್ಳಿ, ವಿಜಯಕುಮಾರ ಬೆಲ್ದೆ, ಶಶಿಕಾಂತ ಬಂಬುಳಗಿ, ರೇವಣಸಿದ್ದಪ್ಪ ಪಾಟೀಲ, ಗೋಪಿಚಂದ ತಾಂದಳೆ, ಎಂ.ಪಿ.ಮುಧಾಳೆ, ಸಂತೋಷ ಚೆಟ್ಟಿ, ಮಹಾರುದ್ರ ಡಾಕುಳಗೆ ಸೇರಿದಂತೆ ಜಿಲ್ಲೆಯ ಇತರೆ ಪತ್ರಕರ್ತರು ಉಪಸ್ಥಿತರಿದ್ದರು. ಆರಂಭದಲ್ಲಿ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸ್ವಾಗತಿಸಿ ನಿರೂಪಿಸಿದರು. ವಿದ್ಯುನ್ಮಾನ ಮಾಧ್ಯಮದ ಮಲ್ಲಿಕಾರ್ಜುನ ಮರಕಲೆ ವಂದಿಸಿದರು.

# ಸಿಸಿ ರಸ್ತೆ ಕಾಮಗಾರಿ ಕಳಪೆ: ಪ್ರಾದೇಶಿಕ ಆಯುಕ್ತರಿಗೆ ದೂರು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 26 : ಹುಲಸೂರು ತಾಲ್ಲೂಕಿನ ಗಡಿಗೌಡಗಾಂವನಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ರೂ. 90 ಲಕ್ಷ ವೆಚ್ಚದಲ್ಲಿ ನಿರ್ಮಿಸುತ್ತಿರುವ ಸಿ.ಸಿ. ರಸ್ತೆ ಕಾಮಗಾರಿ ಕಳಪೆಯಾಗಿದೆ ಎಂದು ನಮ್ಮ ಕರ್ನಾಟಕ ಸೇನೆ ದೂರಿದೆ. ಸೇನೆಯ ಜಿಲ್ಲಾ ಘಟಕದ ಪದಾಧಿಕಾರಿಗಳು ಕಲಬುರಗಿಯಲ್ಲಿ ಪ್ರಾದೇಶಿಕ ಆಯುಕ್ತರಿಗೆ ಈ ಕುರಿತು ಮನವಿ ಪತ್ರ ಸಲ್ಲಿಸಿದ್ದಾರೆ.

ನಿರ್ಮಿತಿ ಕೇಂದ್ರದಿಂದ ಮಣ್ಣು ಅಗೆಯದೆ ಸಿಸಿ ರಸ್ತೆ ನಿರ್ಮಾಣ ಕಾಮಗಾರಿ ಆರಂಭಿಸಲಾಗಿದೆ. ಕಳಪೆ ಕಾಮಗಾರಿಗೆ ಸಂಬಂಧಿಸಿದಂತೆ ದೂರು ಸಲ್ಲಿಸಿದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದರು.

ಕಳಪೆ ಕಾಮಗಾರಿಯಲ್ಲಿ ನಿರ್ಮಿತಿ ಕೇಂದ್ರದ ಎಂಜಿನಿಯರ್ ಶೇಖ ಅಮೀರ್ ಅವರು ಶಾಮೀಲಾಗಿದ್ದಾರೆ. ಕಾಮಗಾರಿಯಲ್ಲಿ ಕೇವಲ ವ್ಯವಸ್ಥಾಪಕರನ್ನು



ಬಲಿ ಪಶು ಮಾಡಲಾಗಿದೆ ಎಂದು ಆಪಾದಿಸಿದರು.

ಜಿಲ್ಲೆಯಲ್ಲಿ ನಿರ್ಮಿತಿ ಕೇಂದ್ರದಿಂದ ನಡೆಯುವ ಎಲ್ಲ ಕಾಮಗಾರಿಗಳು ಕಳಪೆಯಾಗಿವೆ. ಕೇಂದ್ರದವರು ನಕಲಿ ಕಾಮಗಾರಿಗಳ ಜನಕರಾಗಿದ್ದಾರೆ. ಔರಾದ್ (ಬಿ) ಪಟ್ಟಣದ ಸರ್ಕಾರಿ ಕೈಗಾರಿಕಾ ತರಬೇತಿ ಕೇಂದ್ರ, ಬೀದರನ ಚಿಕ್ಕಪೇಟೆಯ ಇವಿಎಂ ವೇರ್ ಹೌಸ್, ಬಸವಕಲ್ಯಾಣದ ರೈತ ಭವನಗಳು ಕಳಪೆ ಕಾಮಗಾರಿಗೆ ನಿದರ್ಶನವಾಗಿವೆ. ಕೇಂದ್ರದಲ್ಲಿ ಹಗರಣ ನಡೆಯುತ್ತಿದ್ದರೂ ಮೇಲಧಿಕಾರಿಗಳು ಕ್ರಮ ಜರುಗಿಸುತ್ತಿಲ್ಲ ಎಂದು ದೂರಿದರು. ಕೂಡಲೇ ತಂಡ ರಚಿಸಿ ನಿರ್ಮಿತಿ ಕೇಂದ್ರ ಕಾಮಗಾರಿಗಳ ತನಿಖೆ ನಡೆಸಬೇಕು. ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಸೇನೆಯ ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ಪಾಟೀಲ, ಪ್ರಧಾನ ಕಾರ್ಯದರ್ಶಿ ಸಂಜು ಯಾದವ್, ಬೀದರ್ ತಾಲ್ಲೂಕು ಅಧ್ಯಕ್ಷ ಅನಿಲ್ ರಾಜಗೀರಾ, ಬೀದರ್ ನಗರ ಘಟಕದ ಅಧ್ಯಕ್ಷ ಸಂತೋಷ ಪಾಟೀಲ, ಕೃಷ್ಣ ತೆಲಂಗ್ ಇದ್ದರು.

# ರಸ್ತೆ ಅಪಘಾತದಲ್ಲಿ ಜಿಂಕೆ ಗಾಯ:ಡಾ. ಅಚ್ಚುತ ಅವರಿಂದ ಪ್ರಥಮ ಚಿಕಿತ್ಸೆ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮಾ.26:ಬೀದರ ನಾಂಡೆದ ರಾಷ್ಟ್ರೀಯ ಹೆದ್ದಾರಿ ಹೊಂದಿಕೊಂಡಿರುವ ಹೊಳಸಮುದ್ರ-ಡಿಗ್ಗಿ ರಸ್ತೆ ಮೇಲೆ ಅಪರಿಚಿತ ವಾಹನ ಒಂದು ಜಿಂಕೆ ರಸ್ತೆ ಹಾದು ಹೋಗುವಾಗ ಅಪಘಾತ ಸಂಭವಿಸಿದೆ. ಅಪಘಾತದಿಂದ ಜಿಂಕೆಯ ಹಿಂಬದಿಯ ಎರಡೂ ಕಾಲುಗಳಿಗೆ ತೀವ್ರಗಾಯವಾಗಿದ್ದು, ಸ್ಥಳಕ್ಕೆ ಧಾವಿಸಿದ ಸ್ಥಳೀಯರು ಸಂಬಂಧಪಟ್ಟ ಅರಣ್ಯ ಅಧಿಕಾರಿಗಳಿಗೆ ಮಾಹಿತಿ ತಿಳಿಸಿದರು,

ಬೀದರ ಕಡೆ ಹೋಗಿದ ವಾಹನ ಬರಲು ಎರಡೂ ಗಂಟೆ ಸಮಯ ಬೇಕಾಗುತ್ತದೆ ಎಂದಾಗ, ಅಲ್ಲೆ



ನೆರದಿದ ಪತ್ರಕರ್ತರಾದ ಪರಮೇಶ ರಾಂಪುರೆ ಅವರು ಹೊಳಸಮುದ್ರ ಮೂಲದ ಪಶು ವೈದ್ಯ ಡಾ. ಅಚ್ಚುತ ಬಿರಾದಾರ ಅವರಿಂದ ಪ್ರಥಮ ಚಿಕಿತ್ಸೆ ಮಾಡಿಸಿ, ಸಂಜೆ ರಾತ್ರಿವರೆಗೂ ಕಾದು ಸಂತಪುರ ವಲಯ ಅರಣ್ಯ ಅಧಿಕಾರಿಗಳ ವಾಹನದಲ್ಲಿ ಜಿಂಕೆಯನ್ನು ಕಳಿಸಿದ್ದಾರೆ.

ಸಂತಪುರ ಅರಣ್ಯ ಕಚೇರಿಯಲ್ಲಿ ರಾತ್ರಿ ಚಿಕಿತ್ಸೆ ಮಾಡಿ, ಹೆಚ್ಚಿನ ಚಿಕಿತ್ಸೆಗಾಗಿ ಕಂತಾಣ ಪಶು ಆಸ್ಪತ್ರೆಗೆ ಕಳುಹಿಸಿದ್ದೇವೆ ಎಂದು ಅರಣ್ಯ ಸಿಬ್ಬಂದಿ ವೈಜೀನಾಥ ಮೆಹತ್ರೆ ತಿಳಿಸಿದರು. ಈ ಸಂದರ್ಭದಲ್ಲಿ ಪರಮೇಶ ರಾಂಪುರೆ, ಸಂಗಮೇಶ ಮುರ್ಕೆ, ಹೊಳಸಮುದ್ರ ಗ್ರಾಮದ ಪಶು ವೈದ್ಯ ಡಾ. ಅಚ್ಚುತ ಬಿರಾದಾರ, ನಿಲೇಶ ಪಾಟೀಲ, ನಾಗರಾಜ ರಾಂಪುರೆ, ಅಂಕೋಶ, ಅರಣ್ಯ ಸಿಬ್ಬಂದಿ ಬಬನ ಜಾಧವ ಎಲ್ಲರೂ ಸೇರಿ ಜಿಂಕೆ ಜೀವ ಬದುಕಿಸಿ ಸಾರ್ಥಕತೆ ಮೆರೆದಿದ್ದಾರೆ

CITATION
IN THE COURT OF THE PRL.CIVIL JUDGE AND JMFC., AT HUMNABAD
CRL. MISC. NO. 2499/2025

Petitioner's :-

1. Baburao S/o Late Siddappa Buranpur Age.72 R/o Humnabad
2. Manikappa Buranpur S/o Late Madivalappa Buranpur Age. 61 R/o Kallur Road Humnabad.
3. Siddaprabhu S/o Madivalappa Age.63 R/o Kufartod galli Humnabad.

THE CHIEF REGISTRAR OF BIRTH AND DEATH THROUGH THE TMC OFFICE HUMNABAD

Sub:-Petition U/Sec 13(3) of Birth and Death Registration Act 1969

Whereas the above named petitioner has filed the petition under section 13(3) of Birth and Death Registration Act 1969 praying this Honorable court to issue Death certificates of Gundappa S/o Madeppa Buranpur Who died on 03.07.1965 The petitioner claiming the death certificate of petitioners grand-father for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this court on 05.04.2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 18.03.2025.

//By order of the court//
Chief Ministerial Officer.
Prl. Civil Judge and JMFC court
Humnabad

CITATION
IN THE COURT OF THE PRL.CIVIL JUDGE AND JMFC., AT HUMNABAD
CRL. MISC. NO. 2546/2024

Petitioner's :-

6. Manikappa Buranapur S/o Late Madivalappa Buranpur Age.61 Occu. Agriculture R/o Kallur Road Humnabad Dist:Bidar.
7. Siddarapbhu S/o Madivalappa Age. 63 Occu: Agriculture R/o Kufartod Galli Humnabad Dist:Bidar. Road Humnabad.
8. Babu Rao S/o Late Siddappa Buranpur Age.72 R/o Kufartod galli Humnabad. Dist:Bidar.

THE CHIEF REGISTRAR OF BIRTH AND DEATH THROUGH THE TMC OFFICE HUMNABAD

Sub:-Petition U/Sec 13(3) of Birth and Death Registration Act 1969

Whereas the above named petitioner has filed the petition under section 13(3) of Birth and Death Registration Act 1969 praying this Honorable court to issue Death certificates of Madivalappa S/o Gundappa Buranpur Who died on 02.01.1971 The petitioner claiming the death certificate of her sons for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this court on 05.04.2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 14.03.2025

//By order of the court//
Chief Ministerial Officer.
Prl. Civil Judge and JMFC court
Humnabad

### ಯುಗಾದಿ ಹಾಗೂ ರಂಜಾನ್ ಪ್ರಯುಕ್ತ
# ಹೆಚ್ಚುವರಿ ಬಸ್‌ಗಳ ಕಾರ್ಯಾಚರಣೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಮಾ. 26:ಯುಗಾದಿ ಹಾಗೂ ರಂಜಾನ್ ಹಬ್ಬದ ಪ್ರಯುಕ್ತ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಿಂದ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಇದೇ ಮಾರ್ಚ್ 27 ರಿಂದ 29 ರವರೆಗೆ ನಿಗಮದ ತಾಲ್ಲೂಕು/ ಜಿಲ್ಲಾ ಕೇಂದ್ರಗಳಿಂದ ಬೆಂಗಳೂರಿಗೆ ಮತ್ತು ಇತರೆ ಪ್ರಮುಖ ಸ್ಥಳಗಳಿಗೆ, ಇದೇ ಮಾರ್ಚ್ 28 ರಿಂದ 30 ರವರೆಗೆ ಬೆಂಗಳೂರಿನಿಂದ ಕ.ಕ.ರ.ಸಾ.ನಿಗಮದ ವ್ಯಾಪ್ತಿಯ ವಿವಿಧ ಸ್ಥಳಗಳಿಗೆ ದೈನಂದಿನ ಕಾರ್ಯಾಚರಣೆಯಲ್ಲಿರುವ 196 ಸಾರಿಗೆಗಳನ್ನು ಹೊರತುಪಡಿಸಿ, 205 ಹೆಚ್ಚುವರಿ ವಾಹನಗಳ ಕಾರ್ಯಾಚರಣೆ ಮಾಡಲಾಗುತ್ತದೆ ಎಂದು ಕಲಬುರಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವ್ಯವಸ್ಥಾಪಕ ನಿರ್ದೇಶಕರು ತಿಳಿಸಿದ್ದಾರೆ.

# ಡಾ.ಬಾಬು ಜಗಜೀವನರಾಂ, ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಅರ್ಥಪೂರ್ಣವಾಗಿ ಆಚರಣೆಗೆ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿಮಾ.26-ಜಿಲ್ಲೆಯಲ್ಲಿ ಏ.5ರಂದು ಆಚರಿಸಲ್ಪಡುವ ಡಾ.ಬಾಬು ಜಗಜೀವನರಾಂ ಅವರ 118ನೇ ಜಯಂತಿ ಹಾಗೂ ಏ.14ರಂದು ಆಚರಿಸಲ್ಪಡುವ ಡಾ.ಬಿ.ಆರ್. ಅಂಬೇಡ್ಕರ್ ಅವರ 134ನೇ ಜಯಂತಿಯನ್ನು ಅರ್ಥಪೂರ್ಣವಾಗಿ ಹಾಗೂ ಅದ್ದೂರಿಯಾಗಿ ಆಚರಿಸಲು ನಿರ್ಧರಿಸಲಾಗಿದೆ.

ಜಿಲ್ಲಾಧಿಕಾರಿ ಡಾ.ಸುಶೀಲ.ಬಿ ಅವರ ಅಧ್ಯಕ್ಷತೆಯಲ್ಲಿ ಇಂದು ಡಾ. ಬಾಬು ಜಗಜೀವನರಾಂ ಹಾಗೂ ಸಂವಿಧಾನ ಶಿಲ್ಪಿ ಡಾ.ಬಿ.ಆರ್ ಅಂಬೇಡ್ಕರ್ ಅವರ ಜಯಂತಿ ಆಚರಣೆ ಕುರಿತ ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಬರುವ ಏಪ್ರೀಲ್ 5ರ ಬೆಳಿಗ್ಗೆ 11ಗಂಟೆಗೆ ಹಸಿರು ಕ್ರಾಂತಿಯ ಹರಿಕಾರ ಡಾ.ಬಾಬು ಜಗಜೀವನರಾಮ್ ಅವರ 118ನೇ ಜನ್ಮದಿನಾಚರಣೆಯನ್ನು ನಗರದ ಡಾ.ಬಾಬು ಜಗಜೀವನರಾಂ ಸಭಾಂಗಣದಲ್ಲಿ ಆಚರಿಸಲು ನಿರ್ಧರಿಸಲಾಗಿದ್ದು, ಈ ಸಭಾಂಗಣದ ಸುಸ್ಥಿತಿ ಕುರಿತು ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಪರಿಶೀಲಿಸಿ ವರದಿ ಸಲ್ಲಿಸಲು ತಿಳಿಸಿದರು.

ಅಂದು ವೇದಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, ಶಿಷ್ಟಾಚಾರದಂತೆ ಅತಿಥಿ ಗಣ್ಯರನ್ನು ಆಹ್ವಾನಿಸಲು, ವೇದಿಕೆ, ಆಹ್ವಾನ ಪತ್ರಿಕೆ, ವೇದಿಕೆ ಸಿದ್ದತೆ ಮಾಡಿಕೊಳ್ಳುವಂತೆ ಹಾಗೂ ನುರಿತ ಉಪನ್ಯಾಸಕರನ್ನು ಆಹ್ವಾನಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ವಿದ್ಯಾರ್ಥಿಗಳಿಗೆ, ಸಾಧಕರಿಗೆ, ಗಣನೀಯ ಸಮಾಜ ಸೇವೆ ಸಲ್ಲಿಸಿದ ಐವರನ್ನು ಆಯ್ಕೆ ಮಾಡಿ ಸನ್ಮಾನಿಸಲು ಜಿ.ಪಂ ಸಿಇಓ ಹಾಗೂ ಜಯಂತ್ಯೋತ್ಸವ ಸಮಿತಿ ಇಬ್ಬರು ಸದಸ್ಯರನ್ನು ಒಳಗೊಂಡ ಸಮಿತಿ ಆಯ್ಕೆ ಮಾಡಲಿದೆ.

ಮೆರವಣಿಗೆ ಕುರಿತು ಮುಂಚಿತವಾಗಿ ತಿಳಿಸಬೇಕು.

ಜಿಲ್ಲಾ, ಗ್ರಾಮ ಪಂಚಾಯತ್, ತಾಲೂಕ ಮಟ್ಟ ಹಾಗೂ ಶಾಲಾ, ಕಾಲೇಜು, ಕಚೇರಿಯಲ್ಲಿ ಜಯಂತಿ ಆಚರಣೆಗೆ ಕ್ರಮ ಕೈಗೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಆಚರಣೆ:

ಭಾರತರತ್ನ ಡಾ.ಬಿ.ಆರ್. ಅಂಬೇಡ್ಕರ್ ಅವರ 134ನೇ ಜನ್ಮದಿನಾಚರಣೆಯನ್ನು ಏಪ್ರೀಲ್ 14ರಂದು ಅದ್ದೂರಿಯಾಗಿ ಆಚರಿಸಲು ಇಂದಿನ ಸಭೆಯಲ್ಲಿ ನಿರ್ಧರಿಸಲಾಗಿದೆ.

ಅಂದು ಬೆಳಿಗ್ಗೆ ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ

ಬೆಳಿಗ್ಗೆ 11ಗಂಟೆಗೆ ವೇದಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುವುದು.

ಕಳೆದ ಎರಡು ವರ್ಷಗಳಲ್ಲಿ ಲೋಕಸಭಾ, ವಿಧಾನ ಸಭಾ ಚುನಾವಣೆಗಳ ಹಿನ್ನೆಲೆಯಲ್ಲಿ ಈ ಇಬ್ಬರೂ ಮಹನೀಯರ ಜಯಂತಿ ಸರಳವಾಗಿ ಆಚರಿಸಲಾಗಿದೆ.ಈ ಬಾರಿ

ಕಾರ್ಯಕ್ರಮವು ಶಿಸ್ತುಬದ್ಧವಾಗಿ ನಡೆಯಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಆಯಾ ಜಯಂತಿ ದಿನ ಅಥವಾ ನಂತರದ ಮೆರವಣಿಗೆಗಳ ಕುರಿತು ಮುಂಚಿತವಾಗಿ ಪೋಲಿಸ್ ಇಲಾಖೆ ಹಾಗೂ ಜಿಲ್ಲಾಡಳಿತಕ್ಕೆ ಮಾಹಿತಿ ನೀಡಬೇಕು. ಅಲ್ಲದೆ ಜಗಜೀವನರಾಂ ಮತ್ತು ಅಂಬೇಡ್ಕರ್ ಕುರಿತು ಉಪನ್ಯಾಸ ನೀಡಲು ಉತ್ತಮ ಉಪನ್ಯಾಸಕರನ್ನು ಆಹ್ವಾನಿಸಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಶಿಷ್ಟಾಚಾರದ ಪ್ರಕಾರ ಆಮಂತ್ರಣ ಪತ್ರಿಕೆ, ವೇದಿಕೆ ನಿರ್ಮಾಣ, ಅಲಂಕಾರ ಸೇರಿದಂತೆ ಇತರೆ ಕಾರ್ಯಗಳನ್ನು ಅಚ್ಚುಕಟ್ಟಾಗಿ ಮಾಡಬೇಕು. ವಿವಿಧ ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ ಕಾರ್ಯಕ್ರಮದಲ್ಲಿ ಹಾಜರಿರಬೇಕು. ಅಲ್ಲದೆ ಉತ್ತಮವಾಗಿ ಸೇವೆ ಸಲ್ಲಿಸಿದ ಸಾಧಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಸನ್ಮಾನಿಸಲು ನಿರ್ಧರಿಸಲಾಗಿದ್ದು, ಸಮಿತಿ ಮೂಲಕ ಆಯ್ಕೆ ನಡೆಸಲು ಸೂಚಿಸಿದರು.

ಜಿಲ್ಲೆಯ ಎಲ್ಲ ತಾಲೂಕು ಕಚೇರಿ, ಶಾಲಾ-ಕಾಲೇಜು, ಗ್ರಾಮ ಪಂಚಾಯತಿ ಹಾಗೂ ಇತರೆ ಕಚೇರಿಗಳಲ್ಲಿ ಡಾ. ಬಾಬು ಜಗಜೀವನರಾಂ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಕಡ್ಡಾಯವಾಗಿ ಆಚರಿಸಲು ನಿರ್ದೇಶನ ನೀಡಲಾಯಿತು.ಡಾ.ಅಂಬೇಡ್ಕರ್ ಅವರ ಜೀವನ ಚರಿತ್ರೆ ಕುರಿತು ಶಾಲಾ, ಕಾಲೇಜು ಹಂತದಲ್ಲಿ ಭಾಷಣ, ಪ್ರಬಂಧ ಸ್ಪರ್ಧೆ ಹಮ್ಮಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಯಂತಿಯಂದು ಸೂಕ್ತ ಪೋಲಿಸ್ ಬಂದೋಬಸ್ತ್, ಶಿಷ್ಟಾಚಾರದಂತೆ ಅತಿಥಿ ಗಣ್ಯರನ್ನು ಆಹ್ವಾನಿಸಲು, ಇತರೆ ಕ್ರಮ ಕೈಗೊಳ್ಳಲು ಅವರು ಸೂಚಿಸಿದರು.

ಜಿಲ್ಲಾ ಪಂಚಾಯತ್ ಸಿಇಓ ಲವೀಶ್ ಒರಡಿಯಾ, ಅಪರ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ, ಸಹಾಯಕ ಆಯುಕ್ತರಾದ ಹಂಪಣ್ಣ ಸಜ್ಜನ್, ಸಮಾಜಕಲ್ಯಾಣ ಇಲಾಖೆಯ ಉಪನಿರ್ದೇಶಕ ಚನ್ನಬಸಪ್ಪ, ಡಾ.ಬಾಬು ಜಗಜೀವನರಾಂ ಜಯಂತ್ಯೋತ್ಸವ ಸಮಿತಿ ಅಧ್ಯಕ್ಷ ನಿಂಗಪ್ಪ ಹತ್ತಿಮನಿ, ಮರೆಯಪ್ಪ ಚಟ್ಟರ್ ಕರ್, ಭೀಮಾಶಂಕರ್, ಹನುಮಂತ ಲಿಂಗೇರಿ ಹಾಗೂ ಡಾ.ಬಿ.ಆರ್ ಅಂಬೇಡ್ಕರ್ ಜಯಂತ್ಯೋತ್ಸವ ಸಮಿತಿ ಅಧ್ಯಕ್ಷ ನರೇಂದ್ರ ಅನ್ವರ್, ಭಗವಂತ್ ಅನ್ವರ್, ಶ್ರೀಕಾಂತ, ಸಮಾಜದ ಮುಖಂಡರು, ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

CITATION
IN THE COURT OF THE PRL.CIVIL JUDGE AND JMFC., AT HUMNABAD
CRL. MISC. NO. 2458/2024

Petitioner's :-

1. Baburao S/o Late Siddappa Buranpur Age.72 R/o Humnabad
2. Manikappa Buranpur S/o Late Madivalappa Buranpur Age. 61 R/o Kallur Road Humnabad
3. Siddaprabhu S/o Madivalappa Age.63 R/o Kufartod galli Humnabad

THE CHIEF REGISTRAR OF BIRTH AND DEATH THROUGH THE TMC OFFICE HUMNABAD

Sub:-Petition U/Sec 13(3) of Birth and Death Registration Act 1969


Whereas the above named petitioner has filed the petition under section 13(3) of Birth and Death Registration Act 1969 praying this Honorable court to issue Death certificates of Rachamma W/o Gundappa Buranpur Who died on 03.08.1966 The petitioner claiming the death certificate of her sons for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this court on 05.04.2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 18.03.2025

//By order of the court//
Chief Ministerial Officer.
Prl. Civil Judge and JMFC court
Humnabad

### ಜಯಂತೋತ್ಸವ ಸಮಿತಿ ಅಧ್ಯಕ್ಷರಾಗಿ ವಾಸುದೇವ ಕಟ್ಟಿಮನಿ, ಗೌರವಾಧ್ಯಕ್ಷರಾಗಿ ಶಂಕ್ರಪ್ಪ ಶಾಣ್ಯಾನೋರ್,ಆಯ್ಕೆ,



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಡಾ,ಬಾಬಾಸಾಹೇಬ್ ಅಂಬೇಡ್ಕರ ಹಾಗೂ ಡಾ,ಬಾಬುಜಗಜೀವನರಾಮರವರ ಜಯಂತಿ ಆಚರಣೆಗಳ ನಿಮಿತ್ಯವಾಗಿ ಡಾ, ಬಾಬು ಜಗಜೀವನರಾಂ ಜಯಮತೋತ್ಸವ ಸಮಿತಿ ಅಧ್ಯಕ್ಷರಾಗಿ ವಾಸುದೇವ ಕಟ್ಟಿಮನಿ, ಹಾಗೂ ಗೌರವಾಧ್ಯಕ್ಷರಾಗಿ ಶಂಕ್ರಪ್ಪ ಶ್ಯಾಣೆನೋರ್, ರವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ, ಉಪಾಧ್ಯಕ್ಷರಾಗಿ ಶಿವುಕುಮಾರ ದೊಡ್ಮನಿ, ಪ್ರಧಾನ ಕಾರ್ಯದರ್ಶಿಗಳಾಗಿ ಭೀಮರಾಯ ಕರಕಳ್ಳಿ, ಸಹ ಕಾರ್ಯದರ್ಶಿಗಳಾಗಿ ಮಲ್ಲಿಕಾರ್ಜುನ ಹಾಲಬಾವಿ, ಸಹ ಕಾರ್ಯದಶಿಗಳಾಗಿ, ಜಗದೀಶ ಅನುವಾರ, ಖಜಾಂಚಿಗಳಾಗಿ, ಬಸವರಾಜ ಪೂಜಾರಿಯವರನ್ನು ನೇಮಕ ಮಾಡಲಾಯಿತು, ಈ ಸಭೆಯಲ್ಲಿ ನಗರ ಆಶ್ರೆಯ ಸಮಿತಿ ಅಧ್ಯಕ್ಷರಾದ ವಸಂತ ಸುರುಪುರಕರ್, ರುದ್ರಪ್ಪ ಹುಲಿಮನಿ, ಶಾಂತಪ್ಪ ಗುತ್ತೆದಾರ, ಭೀಮರಾಯ ಪೂಜಾರಿ, ಶರಣಪ್ಪ ಕ್ಯಾತನಾಳ, ಭೀಮರಾಯ ಕಾಂಗ್ರೆಸ್, ಮೋಹನರಾಜಗೌಡ, ಪರಶುರಾಮ ಪೂಜಾರಿ, ಸೇರಿದಂತೆ ಅನೇಕ ಗಣ್ಯರು ಹಾಜರಿದ್ದರು,

CITATION
IN THE COURT OF THE PRL.CIVIL JUDGE AND JMFC., HUMNABAD AT HUMNABAD
CRL. MISC. NO. 2186/2024

Petitioner's :-

1. Sonamma W/o Late Basavaraj Age.55 R/o Dubalgundi Tq:Humnabad
2. Laxmibai W/o Late Shankar Age. 55 Years, R/o Hallikhed B. Tq:Humnabad
3. Vidyyavati W/o Amruthrao Age.48 Years R/o Kurbkhelagi Tq:Bhalki
4. Mahadevi W/o Pandit Age.45 Years R/o Kurbkhelagi Tq:Bhalki
5. Jagdevi W/o Govind Hangargi Age.50 R/o Chandragutta Hyderabad

RESPONDENT:-

THE CHIEF REGISTRAR OF BIRTH AND DEATH THROUGH CHIEF OFFICER, TMC., HUMNABAD

Sub:-Petition U/Sec 13(3) of Birth and Death Registration Act 1969

Whereas the above named petitioner has filed the petition under section 13(3) of Birth and Death Registration Act 1969 praying this Honorable court to issue Death certificate of their grand mother Late Gundamma W/o Late Manikappa, Who died on 03-08-2022 at Dubalgundi Humnabad. The petitioners claiming the death certificate of deceased Gundamma W/o Late Manikappa, for transfer of property and other official purpose and home record.

Therefore, it is hereby proclaimed that if any persons or persons have got any objection in this regard, he/they may approach to this Honorable court on 19/04.2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this 19th MARCH-2025

//By order of the court//
Chief Ministerial Officer.
Prl. Civil Judge and JMFC court
Humnabad

### ಸಂವಿಧಾನ ಬದಲಾವಣೆ ಡಿಕೆ ಹೇಳಿಕೆಗೆ ಬಿಜೆಪಿ ಖಂಡನೆ ಪ್ರಕೃತಿ ದಹನ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಕಾಲಾನುಕ್ರಮದಲ್ಲಿ ಸಹಜವಾಗಿ ಮುಸಲ್ಮಾನರಿಗೆ ಧರ್ಮ ಆದರಿತ ಮೀಸಲಾತಿಗೆ ಸಂವಿಧಾನ ಬದಲಾವಣೆಯಾಗಬಹುದು ಎಂದು ಎಂದು ನವದೆಹಲಿಯಲ್ಲಿ ಟಿವಿ ಸಂದರ್ಶನದಲ್ಲಿ ಮಾತನಾಡಿದ ರಾಜ್ಯದ ಡಿಸಿಎಮ್, ಡಿಕೆ ಶಿವುಕುಮಾರವರು ಮುಂದಿನ ದಿನಗಳಲ್ಲಿ ನ್ಯಾಯಾಲಯದ ತಿರ್ಪೂ, ಸಂವಿಧಾನ ಬದಲಾವಣೆಯಾಗಬಹುದು ಎಂದು ಅಶ್ಚರ್ಯದ ಹೇಳಿಕೆ ನೀಡಿದ್ದಕ್ಕೆ ಶಹಾಪುರ ಬಿಜೆಪಿ ಕಾರ್ಯಕರ್ತರು ನಗರದ ಬಸವೇಶ್ವರ ವೃತ್ತದಲ್ಲಿ ಡಿಕೆಸಿಯವರ ಭಾವಚಿತ್ರಗಳನ್ನು ಪ್ರಕೃತಿ ದಹನ ಮಾಡಿದರು, ಈ ಸಂಧರ್ಭದಲ್ಲಿ ಮಾತನಾಡಿದ ಯಾದಗಿರಿ ಜಿಲ್ಲಾ ಬಿಜೆಪಿ ಮಾಜಿ ಅಧ್ಯಕ್ಷರಾದ ಅಮೀನರಡ್ಡಿ ಯಾಳಗಿಯವರು ಮಾತನಾಡಿದ ಸರ್ಕಾರ ಬೇಸರ ತಂದಿದೆ, ಯಾವಾಗ ಹೋದೀತು ಎಂದು ಜನರು ಕಾಯುತ್ತಿದ್ದಾರೆ, ಸಂವಿಧಾನ ಬದಲಾವಣೆಗೆ ತರಾತುರಿಯಲ್ಲಿರುವ ಕಾಂಗ್ರೆಸ್ ವಿನಾಕಾರಣ ಬಿಜೆಪಿ ಪಕ್ಷದ ಮೇಲೆ ಗೂಬೆ ಕೂರಿಸುತ್ತಿದ್ದಾರೆ. ಉಪ ಮುಖ್ಯಮಂತ್ರಿಯರು ಸಂಧರ್ಭಾನುಸಾರವಾಗಿ ಬದಲಾವಣೆ ಮಾಡುವ ಹಿಂಗಿತ ವ್ಯಕ್ತಪಡಿಸಿರುವದನ್ನು ಖಂಡನೀಯ, ಭಹಿಂರಂಗವಾಗಿ ಕ್ಷೇಮೆ ಕೆಳಬೇಕು, ಇಲ್ಲ ರಾಜೀವನಾಮೆ ನೀಡಬೆಕು ಎಂದು ಅವರು ಒತ್ತಾಯ ಮಾಡಿದರು, ಸದನದಲ್ಲಿ ಹನಿಟ್ರಾಪ್ ಮಾಡಿದ್ದನ್ನು ಹೇಳಿದ್ದರೂ, ತಮ್ಮ ತಪ್ಪನ್ನು ಮುಚ್ಚಿಸಕೊಳ್ಳಲು 18 ಬಿಜೆಪಿ ಶಾಸಕರನ್ನು ಅಮಾನತ್ತುಗೊಳಿಸಿದ್ದಾರೆ, ಇದು ಸಂವಿಧಾನ ವಿರೋಧಿ ನೀತಿಯಾಗಿದೆ ಎಂದು ಯಾಳಗಿ ಆಕ್ರೋಶ ವ್ಯಕ್ತಪಡಿಸಿದರು, ಈ ಪ್ರತಭಟನೆಯಲ್ಲಿ ಯಾದಗಿರಿ ಜಿಲ್ಲಾ ಬಿಜೆಪಿ ಅಧ್ಯಕ್ಷರಾದ ಬಸವರಾಜ ವಿಭೂತಿಹಳ್ಳಿ, ತಾಲುಕಾ ಅಧ್ಯಕ್ಷರಾದ ತಿರುಪತಿ ಹತಿಕಟಗಿ ಸಗರ, ನಗರ ಘಟಕದ ಅಧ್ಯಕ್ಷರಾದ ಚಂದ್ರಶೇಖರಯಾಳಗಿ, ಹಿರಿಯ ಮುಖಂಡರಾದ ಅಡಿವೆಪ್ಪಾ ಜಾಕಾ, ಗುರು ಕಾಮಾ ಸಾಹು, ಮಲ್ಲಿಕಾರ್ಜುನ ಕಂದಕೂರ, ದೇವಿಂದ್ರಕೊನೇರ, ಸೇರಿದಂತೆ ನೂರಾರು ಕಾರ್ಯಕರ್ತರು ಭಾಗಹಸಿದ್ದರು.

# ಜಂಗಮ ವಟುಗಳಿಗೆ ಧಾರ್ಮಿಕ ಸಂಸ್ಕಾರ ಬೇಸಿಗೆ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ಕಲಬುರ್ಗಿ,ಮಾ,26,ಚಿತ್ತಾಪೂರ ತಾಲೂಕಿನ ಸನ್ನತಿ ಶ್ರೀ ಗುರು ಸೋಮೇಶ್ವರ ವೈದಿಕ ಜ್ಯೋತಿ ಗುರುಕುಲದಲ್ಲಿ ಮೂರನೇ ವರ್ಷದ ಜಂಗಮ ವಟುಗಳಿಗೆ ಧಾರ್ಮಿಕ ಸಂಸ್ಕಾರ ಬೇಸಿಗೆ ಶಿಬಿರ ಹಮ್ಮಿಕೊಳ್ಳಲಾಗಿದೆ ಎಂದು ಜಗದೀಶ್ವರಯ್ಯ ಶಾಸ್ತ್ರೀ ಸನ್ನತಿರವರು ತಿಳಿಸಿದ್ದಾರೆ. ಈ ಕುರಿತು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿರುವ ಅವರು ಜಂಗಮ ಗುರುಬಂಧುಗಳು ತಮ್ಮ ಮಕ್ಕಳ ಹೆಸರನ್ನು ದಿನಾಂಕ : 5-04-2025 ರೊಳಗಾಗಿ ನೋಂದಣಿ ಮಾಡಿಕೊಳ್ಳಲು ತಿಳಿಸಿದ್ದು ದಿನಾಂಕ 11-04-2025 ರಿಂದ 24-05-2025



ವರೆಗೆ ಜರುಗಲಿದೆ ಎಂದು ಹೇಳಿದ್ದಾರೆ.ಗಣೇಶ ಪೂಜೆ, ಲಕ್ಷ್ಮೀ ಪೂಜೆ, ಪಂಚಾಂಗ ಮಾಹಿತಿ, ಸಂಪೂರ್ಣ ಕಂಠ ಪಾಠ ರುದ್ರಾಭೀಷೇಕ

ದೇವಸ್ಥಾನದಲ್ಲಿ ಅರ್ಚನೆ ಮಾಡುವುದು, ಅಲಂಕಾರ ಮಾಡುವುದು ಮತ್ತು ಭಗವದ್ಗೀತೆ, ಯೋಗ, ಅಭ್ಯಾಸ ಮಾಡಿಸಲಾಗುವುದು ಹೆಚ್ಚಿನ ಮಾಹಿತಿಗೆ: ಜಗದೀಶ್ ಶಾಸ್ತ್ರೀಗಳು ಜಂಗಮವಾಣಿ +917829457156

## ವಿಶ್ವ ಜಲ ದಿನ ಕಾರ್ಯಕ್ರಮದಲ್ಲಿ ಜಿಪಂ ಸಿಇಒ ಮಹಮ್ಮದ್ ಹ್ಯಾರೀಸ್ ಸುಮೈರ್ ಕರೆ ನೀರು ಸಂರಕ್ಷಣೆ ನಮ್ಮೆಲ್ಲರ ಹೊಣೆ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.26-ನಿಸರ್ಗ ಕೊಡುಗೆಯಾದ ನೀರು ಅತ್ಯಮೂಲ್ಯವಾದದ್ದು.ಎಲ್ಲರೂ ಮಿತವಾಗಿ ಬಳಸುವ ಮೂಲಕ ಸಂರಕ್ಷಿಸೋಣ ಎಂದು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯ ನಿರ್ವಾಹಕಅಧಿಕಾರಿಮಹಮ್ಮದ್ ಹ್ಯಾರೀಸ್ ಸುಮೈರ್ ಅವರು ಹೇಳಿದರು.

ಜಿಲ್ಲಾ ಪಂಚಾಯತ್,ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ವೀರಶೈವ ಮಹಾವಿದ್ಯಾಲಯ ಇವರ ಸಂಯುಕ್ತಾಶ್ರಯದಲ್ಲಿ ವೀರಶೈವ ಮಹಾವಿದ್ಯಾಲಯದ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಿದ್ದ ವಿಶ್ವ ಜಲ ದಿನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸಂವಿಧಾನವು ನಮಗೆ ಮೂಲಭೂತ ಹಕ್ಕುಗಳನ್ನು ನೀಡುವುದರ ಜೊತೆಗೆ ಮೂಲಭೂತ ಕರ್ತವ್ಯಗಳನ್ನು ಸಹ ನೀಡಿದೆ. ಅದರಲ್ಲಿ ಪರಿಸರ ರಕ್ಷಣೆ ಜೊತೆಗೆ ನೀರು ಸಂರಕ್ಷಣೆಯೂ ಒಳಗೊಂಡಿದೆ. ಸುಸ್ಥಿರ ಅಭಿವೃದ್ಧಿಯ ಮೂಲಕ ನೀರನ್ನು ಸಂರಕ್ಷಿಸಿ ಮುಂದಿನ ಪೀಳಿಗೆಗೂ ನೀಡೋಣ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ಬಿಸಿಲಿನ ಪ್ರಖರತೆ ಹೆಚ್ಚಾಗಿ ಕಂಡುಬರುತ್ತಿದೆ. ಕುಡಿಯುವನೀರುಪೋಲಾಗದಂತೆ ನೋಡಿಕೊಳ್ಳಬೇಕು. ಏ.10 ರವರೆಗೆ ತುಂಗಭದ್ರ ಜಲಾಶಯದಿಂದ ಕಾಲುವೆಗಳಿಗೆ ನೀರು ಹರಿಯಲಿದ್ದು, ಕೃಷಿ ಚಟುವಟಿಕೆಗಳಿಗೂ ಆದ್ಯತೆ ನೀಡಬೇಕಾಗುತ್ತದೆ. ಹಾಗಾಗಿ ನೀರನ್ನು ಮಿತವಾಗಿ ಬಳಸಲು ಸೂಚಿಸಬೇಕು ಎಂದು ಸಲಹೆ ನೀಡಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಮಾತನಾಡಿ, ಸಕಲ ಜೀವರಾಶಿಗಳಿಗೆ ನೀರು ಬಹುಮುಖ್ಯವಾಗಿದೆ. ಭೂ ಮಂಡಲದಲ್ಲಿ ಇರುವ ನೀರಿನ ಪ್ರಮಾಣದಲ್ಲಿ ಶೇ.97ರಷ್ಟು ಉಪ್ಪುನೀರು ಇದ್ದು,ಶೇ3.ರಷ್ಟು ಮಾತ್ರ ಸಿಹಿ ನೀರು ಬಳಕೆಗೆ ಉಪಯುಕ್ತವಾಗಿದೆ. ಇದರಲ್ಲಿ ಕೇವಲ ಶೇ.0.07ರಷ್ಟು ನೀರು ಕುಡಿಯಲು ಬಳಕೆಯಾಗುತ್ತಿದೆ. ಉಳಿದ ನೀರು ಘನ ರೂಪದಿ ಹಿಮಪಾತಗಳಲ್ಲಿದೆ ಎಂದು ಅವರು ಹೇಳಿದರು.

ಬೇಸಿಗೆಬಂತೆಂದರೇಕುಡಿಯುವ ನೀರಿನ ಬರ ಎದುರಾಗಿ ಹನಿ ನೀರಿಗೂ ಪರದಾಡುವ ಸ್ಥಿತಿ ನಿರ್ಮಾಣವಾಗುತ್ತದೆ. ಹೀಗಾಗಿ ನೀರನ್ನು ಅತಿಯಾಗಿ ಪೋಲು ಮಾಡದೆ ಅಗತ್ಯವಿರುವಷ್ಟು ಮಾತ್ರ ಬಳಸಬೇಕು ಎಂದು ತಿಳಿಸಿದರು.

ಭೂಮಿಯ ಮೇಲೆ ಎಲ್ಲಾ ಜೀವಿಗಳಿಗೂ ಬದುಕುವ ಹಕ್ಕಿದೆ. ಎಲ್ಲಾ ಜೀವಿಗಳಿಗೂ ನೀರು ಅತ್ಯವಶ್ಯಕವಾಗಿದೆ. ಸಮುದ್ರಗಳು ಕಡಲತೀರ ಕೊರೆದು ಭೂಮಿಯನ್ನು ಅತಿಕ್ರಮಿಸುತ್ತಿವೆ. ಪ್ರಸ್ತುತದಲ್ಲಿ ಸಣ್ಣ-ಸಣ್ಣ ನದಿ, ಹಳ್ಳಗಳು ಕಣ್ಮರೆಯಾಗುತ್ತಿವೆ ಎಂದು ವಿಷಾದ ವ್ಯಕ್ತಪಡಿಸಿದರು.

ಪ್ರಸ್ತುತದಲ್ಲಿ ಕಾರ್ಖಾನೆಗಳಿಂದ ವಾಯು ಮಾಲಿನ್ಯ ಉಂಟಾಗಿ ಓಜೋನ್ ಪದರಿಗೆ ರಂಧ್ರಗಳು ಬಿದ್ದು ಸೂರ್ಯನ ಶಾಖದಿಂದ ಹಲವಾರು ಪರಿಣಾಮ ಬೀರುತ್ತಿದೆ. ಗಿಡ ಮರಗಳನ್ನು ಬೆಳೆಸಬೇಕು. ಪ್ರಕೃತಿ ಸಂರಕ್ಷಣೆ ಮಾಡಬೇಕು ಎಂದು ಕಿವಿಮಾತು ಹೇಳಿದರು.

ಸರ್ಕಾರಗಳು ಕೆರೆ-ನದಿಗಳನ್ನು ಸಂರಕ್ಷಿಸಲು ಹಲವಾರು ರೀತಿಯಲ್ಲಿ ಕ್ರಮ ಕೈಗೊಳ್ಳುತ್ತಿವೆ. ತಮ್ಮ ಮನೆಯ ಅಕ್ಕ-ಪಕ್ಕದಲ್ಲಿ ನೀರು ಪೋಲಾಗುವುದು ಕಂಡುಬಂದಲ್ಲಿ ಅದನ್ನು ನಿಲ್ಲಿಸುವ ಕೆಲಸ ಮಾಡಬೇಕು ಎಂದು ನ್ಯಾಯಾಧೀಶರು ಹೇಳಿದರು.

ಕಾರ್ಯಕ್ರಮದಲ್ಲಿ ವಿಶ್ವ ಜಲ ದಿನ ಅಂಗವಾಗಿ ಏರ್ಪಡಿಸಿದ್ದ ಪ್ರಬಂಧ ಸ್ಪರ್ಧೆ ಮತ್ತು ರಂಗೋಲಿ ಸ್ಪರ್ಧೆಯಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಬಹುಮಾನ ಮತ್ತು ಪ್ರಶಸ್ತಿ ಪತ್ರ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಪಂ ಮುಖ್ಯ ಯೋಜನಾಧಿಕಾರಿ ವಾಗೀಶ್ ಶಿವಾಚಾರ್ಯ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಕಾರ್ಯಪಾಲಕ ಅಭಿಯಂತರ ಹೆಚ್.ಇಂದುಧರ, ಸಹಾಯಕ ಕಾರ್ಯಪಾಲಕ ಅಭಿಯಂತರರಾದ ವೈ.ರಾಮಚಂದ್ರ, ರವೀಂದ್ರನಾಯ್ಕ, ವೀರಶೈವ ಮಹಾವಿದ್ಯಾಲಯದ ಅಧ್ಯಕ್ಷ ದರೂರು ಶಾಂತನಗೌಡ, ಸದಸ್ಯ ಖಾರದಪುಡಿ ಮುದ್ದನಗೌಡ, ಕಾಲೇಜಿನ ಪ್ರಾಚಾರ್ಯ ಜಿ.ಮಲ್ಲನಗೌಡ ಸೇರಿದಂತೆ ಕಾಲೇಜಿನ ಬೋಧಕ-ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಏಪ್ರೀಲ್ ಮೇ, ಕುಡಿಯುವ ನೀರಿನ ಭವಣೆಗೆ ತುರ್ತು ಕ್ರಮ-ತಾ,ಪಂ, ಇಓ ಶರಬೈ!

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಮುಂದಿನ ಸುಡು ಬೇಸಿಗೆಯ ಎಪ್ರೀಲ್ ಮತ್ತು ಮೇ,ತಿಂಗಳಲ್ಲಿ ಹಳ್ಳಗಳಲ್ಲಿ ಕುಡಿಯುವ ನೀರಿನ ಭವಣೆ ನೀಗಿಸಲು ಗ್ರಾ,ಪಂ,ಅಭಿವೃದ್ಧಿ ಅಧಿಕಾರಿಗಳಿಗೆ ತುರ್ತು ಕ್ರಮ ಕೈಗೊಳ್ಳಲು ಸೂಚನೆ ನೀಡಲಾಗಿದೆ ಎಂದು ತಾ, ಪಂ,ಕಾರ್ಯನಿರ್ವಾಹಣಾಧಿಕಾರಿಗಳಾದ ಬಸವರಾಜ ಶರಬೈರವರು ಪತ್ರಿಕೆಗೆ ತಿಳಿಸಿದರು, ಮುಂದುವರೆದು ಮಾತನಾಡಿದ ಅವರು,ತಾ,ಪಂ, ಕಚೇರಿಯಲ್ಲಿ ಕುಡಿಯುವ ನೀರಿನ ಸಾಹಾಯವಾಣಿ ಪ್ರಾರಂಭ ಮಾಡಲಾಗುತ್ತದೆ,




ಕುಡಿಯುವ ನೀರಿನ ಸಮಸ್ಯೆಗಳು ಉಂಟಾದಲ್ಲಿ ಕರೆಮಾಡಲು ಸಾರ್ವತ್ರಿಕ ಅನೂಕೂಲವಾಗುತ್ತದೆ, ಅಲ್ಲದೆ ಪ್ರತಿ ಗ್ರಾ,ಪಂ,ಅಭಿವೃದ್ಧಿ ಅಧಿಕಾರಿಗಳಿಗೆ ಗ್ರಾಮಗಳಲ್ಲಿನ ಹಳೆಯ ವಾಟರ್ ಮಷಿನಗಳು ಕೆಟ್ಟುಹೋದಲ್ಲಿ ಮುಂಜಾಗ್ರತಿಗಾಗಿ ರಿಪೇರಿ ಮಾಡಿಕೊಳ್ಳಬೇಕು, ಮತ್ತು ಹಳೆ ಕೊಳೆವೆ ಬಾವಿಗಳ ರಿಪೇರಿ ಕಾರ್ಯ ಮಾಡಲು ಸೂಚನೆ ನೀಡಿದ್ದೇವೆ, ಈ ಕುರಿತು ತಹಿಸಲ್ದಾರ ಉಮಾಕಾಂತ ಹಳ್ಳೆಯವರ ಸಮ್ಮುಖದಲ್ಲಿ ಕುಡಿಯುವ ನೀರು ನೈರ್ಮ್ಯಲ್ಯ ಇಲಾಖೆಯ ಎಇಇ ಯವರೊಂದಿಗೆ ಚರ್ಚಿಸಿ ಮುಂದಿನ ಕುಡಿಯುವ ನೀರು ಒದಗಿಸಲು ಕುರಿತು ರೂಪರೇಷಗಳನ್ನು ರೂಪಿಸಲಾಗಿದೆ,ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಗಂಭಿರ್ಯತೆಗಳು ಉಂಟಾದಲ್ಲಿ ಸರ್ಕಾರದ ಮಾರ್ಗದರ್ಶನದಂತೆ ಸೂಕ್ತ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅವರು ತಿಳಿಸಿದರು,

## ನವೋದಯದ 6ನೇ ತರಗತಿಯ ಪ್ರವೇಶ ಪರೀಕ್ಷಾ ಫಲಿತಾಂಶ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.26- ಜವಾಹರ ನವೋದಯ ವಿದ್ಯಾಲಯದಿಂದ 2025-26ನೇ ಸಾಲಿನ 6ನೇ ತರಗತಿ ಪ್ರವೇಶ ಪರೀಕ್ಷೆಯನ್ನು ಜಿಲ್ಲೆಯಲ್ಲಿ ಜನವರಿ 18ರಂದು ನವೋದಯ ವಿದ್ಯಾಲಯ ಸಮಿತಿಯು ಯಶಸ್ವಿಯಾಗಿ ನಡೆಸಲಾಗಿದ್ದು, ಈ ಪರೀ-ಕ್ಷೆಯ ಫಲಿತಾಂಶವನ್ನು ಪ್ರಕಟಿಸಲಾಗಿದೆ.

ಅಭ್ಯರ್ಥಿಗಳು ಫಲಿತಾಂಶವನ್ನು ವೆಬ್‌ಸೈಟ್ ವಿಳಾಸ: www.cbseitms.rcil.gov.in/nvsclass6, ನಲ್ಲಿ ನೋಡಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 7204109046 ಅಥವಾ 9703473495ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲೆಯ ಮುದಗಲ್ ಜವಾಹರ ನವೋದಯ ವಿದ್ಯಾಲಯದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಡೂರು ಪುರಸಭೆ: ಆಕ್ಷೇಪಣೆಗಳಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.26-ಸಂಡೂರು ಪುರಸಭೆ ವ್ಯಾಪ್ತಿಯಲ್ಲಿ ಬರುವ ಕಪ್ಪಲಕುಂಟ ರಸ್ತೆಯ ಹತ್ತಿರ ನಿರ್ಮಾಣವಾಗುತ್ತಿರುವ ಜಿ+2 ಯೋಜನೆಯ ಮನೆಗಳಿಗೆ ಸಂಡೂರು ಶಾಸಕರ ಅಧ್ಯಕ್ಷತೆಯಲ್ಲಿ ಮಾ.25 ರಂದು ನಡೆದ ನಗರ ಆಶ್ರಯ ಸಮಿತಿ ಸಭೆಯಲ್ಲಿ 1670 ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದ್ದು, ಫಲಾನುಭವಿಗಳ ಆಯ್ಕೆ ಪಟ್ಟಿಯನ್ನು ಸಂಡೂರು ಪುರಸಭೆಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಫಲಾನುಭವಿಗಳ ಹೆಸರು,ಆಧಾರ್ ಕಾರ್ಡ್, ಜಾತಿ ಪ್ರಮಾಣ ಪತ್ರಗಳಲ್ಲಿ ಬದಲಾವಣೆ ಇದ್ದಲ್ಲಿ ಆಕ್ಷೇಪಣೆ ಸಲ್ಲಿಸಬಹುದು ಎಂದು ಸಂಡೂರು ಪುರಸಭೆ ಮುಖ್ಯಾಧಿಕಾರಿ ತಿಳಿಸಿದ್ದಾರೆ.

ಆಕ್ಷೇಪಣೆಗಳನ್ನು ಪೂರಕ ದಾಖಲೆಗಳೊಂದಿಗೆ ಪುರಸಭೆಗೆ ಅರ್ಜಿ ಸಲ್ಲಿಸಬಹುದು. ಫಲಾನುಭವಿಗಳ ಆಯ್ಕೆ ಪಟ್ಟಿಯಲ್ಲಿ ಪ್ರಸ್ತುತ ನಿವೇಶನ ಹೊಂದಿದ, ವಸತಿ ಸೌಲಭ್ಯ ಪಡೆದ ಫಲಾನುಭವಿಗಳು ಕಂಡುಬಂದಲ್ಲಿ ಅರ್ಜಿಯೊಂದಿಗೆ ಸೂಕ್ತ ದಾಖಲೆ ಲಗತ್ತಿಸಿ ಏ.01 ರೊಳಗಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಂಡೂರು ಪುರಸಭೆ ಕಚೇರಿಗೆ ಸಂಪರ್ಕಿಸಬಹು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆರ್‌ಟಿಒ ಕಚೇರಿ: ವಿವಿಧೆಡೆ ಶಿಬಿರ(ಕ್ಯಾಂಪ್)

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.26- ಜಿಲ್ಲಾ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ ವತಿಯಿಂದ ಸಾರ್ವಜನಿಕರ ಕೆಲಸಗಳಿಗಾಗಿ ವಿವಿಧ ತಾಲ್ಲೂಕುಗಳಲ್ಲಿ ಪ್ರತಿ ತಿಂಗಳು ಶಿಬಿರ(ಕ್ಯಾಂಪ್)ಗಳನ್ನು ಆಯೋಜಿಸಲಾಗುತ್ತಿದೆ ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ಶ್ರೀನಿವಾಸ ಗಿರಿ ತಿಳಿಸಿದ್ದಾರೆ.

ಸಂಡೂರು-ಪ್ರತಿ ತಿಂಗಳು 10ನೇ ತಾರೀಖು, ಕಂಪ್ಲಿ-ಪ್ರತಿ ತಿಂಗಳು 15ನೇ ತಾರೀಖು ಮತ್ತು ಸಿರುಗುಪ್ಪ-ಪ್ರತಿ ತಿಂಗಳು 20ನೇ ತಾರೀಖುಗಳಂದು ನಡೆಯಲಿದೆ.

ಈ ಹಿಂದೆ ಸಿರುಗುಪ್ಪ ತಾಲ್ಲೂಕಿನಲ್ಲಿ ಪ್ರತಿ ತಿಂಗಳು 5, 20 ರಂದು ಶಿಬಿರಗಳನ್ನು ಆಯೋಜಿಸಲಾಗುತ್ತಿತ್ತು. ಈಗ ಸಂಡೂರು, ಕಂಪ್ಲಿ ತಾಲ್ಲೂಕು ವಿಜಯನಗರ ಜಿಲ್ಲೆಯ ಹೊಸಪೇಟೆ ಕಚೇರಿಯಿಂದ ಬೇರ್ಪಟ್ಟು ಬಳ್ಳಾರಿ ಜಿಲ್ಲಾ ಕಚೇರಿಗೆ ಸೇರ್ಪಡೆಯಾದ ಕಾರಣ ತಾಲ್ಲೂಕುಗಳು ಕಚೇರಿ ವ್ಯಾಪ್ತಿಗೆ ಒಳಪಡುವುದರಿಂದ ಆಯಾ ತಾಲ್ಲೂಕುಗಳಲ್ಲಿ ಪ್ರತಿ ತಿಂಗಳು ಶಿಬಿರ(ಕ್ಯಾಂಪ್)ಗಳನ್ನು ಆಯೋಜಿಸಲಾಗುವುದು.

ಆಯಾ ದಿನಗಳಂದು ಸಾರ್ವತ್ರಿಕ ರಜೆಗಳು ಬಂದಲ್ಲಿ ಮುಂದಿನ ಕೆಲಸದ ದಿನಗಳಲ್ಲಿ ಶಿಬಿರ(ಕ್ಯಾಂಪ್)ಗಳನ್ನು ಆಯೋಜಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉಪನ್ಯಾಸಕ ಚಂದ್ರಪ್ರಸಾದರವರಿಗೆ ಪಿಎಸ್,ಡಿ, ಪದವಿ.ಹರ್ಷ

ಮಲ್ಲಮ್ಮ ನುಡಿ ವಾರ್ತೆ

ಶಹಾಪುರ,ಅರ್ಥಶಾಸ್ತ್ರ ಉಪನ್ಯಾಸಕರಾಗಿ ಸೇವೆಸಲ್ಲಿಸುತ್ತಿರುವ ಚಂದ್ರಪ್ರಸಾದ ಮೋನಪ್ಪ ಹೊಸಮನಿಯರಿಗೆ ಪಿಎಚ್,ಡಿ, ಪದವಿ ದೊರತ್ತಿದ್ದು,ಕರ್ನಾಟಕ ರಾಜ್ಯ ಮುಕ್ತ ವಿವಿ ಮೈಸೂರಿನ ಅರ್ಥಶಾಸ್ತ್ರ ಪ್ರಾಧ್ಯಾಪಕರಾದ ಡಾ,ಟಿಪಿ ಶಶಿಕುಮಾರ ರವರ ಮಾರ್ಗದರ್ಶನದಲ್ಲಿ ಅರ್ಥಶಾಸ್ತ್ರ ವಿಭಾಗಕ್ಕೆ ಸಲ್ಲಿಸಿದ ಪ್ರಬಂಧಕ್ಕೆ ಡಾಕ್ಟರೇಟ್ ಪದವಿ ನೀಡಲಾಗಿದೆ, ಯುವ ಚೇತನ ಉಪನ್ಯಾಸಕ



ಚಂದ್ರಪ್ರಸಾದರ ಡಾಕ್ಟರೇಟ್ ಪದಿವ ನೀಡಿದ್ದಕ್ಕೆ ಅನೇಕ ಹರ್ಷ ವ್ಯಕ್ತಪಡಿಸಿದ್ದಾರೆ,

## ನಗರಸಭೆ 2025-26 ನೆಯ ಸಾಲಿನ 1083,50 ಲಕ್ಷ, ರೂ,ಗಳ ಬಜೆಟ್ ಮಂಡನೆ,



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ,ಶಹಾಪುರ ನಗರಸಭೆ 2025-26 ನೆಯ ಸಾಲಿನ ಆಯ್ಯವ್ಯಯ ಬಜೆಟ್ ಮೇಲಿನ ಚರ್ಚೆ ನಿನ್ನೆ ನಗರಸಭೆ ಸಭಾಂಗಣದಲ್ಲಿ ಜರುಗಿತು, ಈ ಸಭೆಯ ಅಧ್ಯಕ್ಷತೆಯನ್ನು ನಗರಸಭೆ ಅಧ್ಯಕ್ಷರಾದ ಶ್ರೀಮತಿ ಮಹೇರುನ್ನುಸಾಬೇಗಂ, ಗಂಡ ಲಿಯಾಕತಲಿ,ರವರು ವಹಿಸಿದ್ದು, ಉಪಾಧ್ಯಕ್ಷರಾದ ಶ್ರೀಮತಿ ಲಕ್ಷ್ಮೀಂಬಾಯಿ ಗಂಡ ದೇವಿಂದ್ರಪ್ಪ ಉಪಸ್ಥಿತಿರಿದ್ದರು, ಈ ಸಂಧರ್ಭದಲ್ಲಿ ನಗರಸಭೆ ಪೌರಾಯುಕ್ತರಾದ ರಮೇಶ ಬಡಿಗೇರವರು ಮುಂಗಡ ಬಜೆಟ್ ವಿವರಣೆಗಳನ್ನು ನೀಡಿದರು, ಆರೋಗ್ಯ ಘನತ್ಯಾಜವಸ್ತುಗಳ ನಿರ್ವಹಣೆ, ನೈರ್ಮಿಲ್ಯಕರಣಕ್ಕಾಗಿ ಹೆಚ್ಚು ಒತ್ತು ನೀಡಲಾಗಿದೆ,ಪ,ಜಾ, ಪ,ಪಂ,ಗಳ ಅಭಿವೃದ್ಧಿ ನಿಧಿ [24.10] 35.20 ಲಕ್ಷ, ರೂ,, ಕಲ್ಯಾಣನಿಧಿ, 7,25% ಮಳೆ ಹಾನಿ ಪ್ರಕೃತಿ ವಿಕೋಪ ಸಾಹಾಯಧನ 2,20.ರೂ,ಗಳನ್ನು ಮೀಸಲಿರಿಸಲಾಗಿದೆ, ರಾಜಸ್ವ ಸ್ವೀಕೃತಿಗಳು 2,166 ಲಕ್ಷ,ರೂ, ಬಂಡವಾಳ ಸೀಕೃತಿಗಳು 1430 ಅಸಾಧಾರಣ ಸ್ವೀಕೃತಿಗಳು 1084 ಒಟ್ಟು ಪಾವತಿಗಳು 4999 ಲಕ್ಷ, ಅಂದಾಜು ಮಾಡಲಾಗಿದೆ, ಶಹಾಪುರ ನಗರಸಭೆ 1083.50 ಲಕ್ಷ ರೂಗಳ ಮುಂದಿನ ಆರ್ಥಿಕ ವರ್ಷದ ಬಜೆಟ್ ಮಂಡನೆ ಮಾಡಲಾಯಿತು, ಈ ಸಭೆಯಲ್ಲಿ ಎಇಇ ನಾನಾಸಾಹೆಬ್ ಮಡಿವಾಳಕರ್, ಪರಿಸರ ಇಂಜನಿಯರ್, ಹರೀಶ ಸಜ್ಜನ ಲೇಕ್ಕಾಧಿಕಾರಿಗಳು ಎಲ್ಲಾ ಸದಸ್ಯರು ನಗರಸಭೆ ಸಿಬ್ಬಂದಿಯವರು ಹಾಜರಿದ್ದರು,

## ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ: ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.26-ಜಿಲ್ಲೆಯಲ್ಲಿ ಅಲ್ಪಸಂಖ್ಯಾತರಕಲ್ಯಾಣಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ (ಆಂಗ್ಲ ಮಾಧ್ಯಮ) ಶಾಲೆ ಹಾಗೂ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ (ಸಿಬಿಎಸಿಇ) ಗಳ 2025-26 ನೇ ಶೈಕ್ಷಣಿಕ ಸಾಲಿಗೆ 6 ನೇ ತರಗತಿಗೆ ಉಚಿತ ಪ್ರವೇಶಕ್ಕಾಗಿ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆಯ ಅವಧಿಯನ್ನು ಏ.10 ರವರೆಗೆ ವಿಸ್ತರಿಸಲಾಗಿದೆ ಎಂದು ಅಲ್ಪ ಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ವಿಠೋಬಾ ಹೊನಕಾಂಡೆ ಅವರು ತಿಳಿಸಿದ್ದಾರೆ. ಆಸಕ್ತಿಯುಳ್ಳ ಐದನೇ ತರಗತಿ ಉತ್ತೀರ್ಣ ಹೊಂದಿದ ವಿದ್ಯಾರ್ಥಿಗಳು ಸೇವಾಸಿಂಧು ಆನ್‌ಲೈನ್ ಪೋರ್ಟಲ್ https://sevasindhuservices.karnataka.gov.in ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

**ಶಾಲೆಗಳ ವಿವರ:**

ಬಳ್ಳಾರಿ ತಾಲ್ಲೂಕಿನ ಕೊಳಗಲ್ಲಿನ ಡಾ.ಎ.ಪಿ.ಜೆ ಅಬ್ದುಲ್ ಕಲಾಂ ವಸತಿ ಶಾಲೆ(ಸಿ.ಬಿ.ಎಸ್.ಸಿ) ಯ ಪ್ರಾಂಶುಪಾಲರ ಮೊ. 7353346069. ಸಂಡೂರು ತಾಲ್ಲೂಕಿನ ತೋರಣಗಲ್ಲು ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಶಾಲೆಯ ಪ್ರಾಂಶುಪಾಲರ ಮೊ.9480933730. ಕಂಪ್ಲಿ ತಾಲ್ಲೂಕಿನ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಶಾಲೆಯ ಪ್ರಾಂಶುಪಾಲರ ಮೊ.9113280239.ಕುರುಗೋಡು ತಾಲ್ಲೂಕಿನ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಶಾಲೆಯ ಪ್ರಾಂಶುಪಾಲರ ಮೊ. 9113280239. ಬಳ್ಳಾರಿ ತಾಲ್ಲೂಕಿನ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ಶಾಲೆಯ ಪ್ರಾಂಶುಪಾಲರ ಮೊ.7353346069.

**ತಾಲ್ಲೂಕು ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿಗಳ ಸಂಪರ್ಕ ವಿವರ:** ಬಳ್ಳಾರಿ-8310321101, ಸಂಡೂರು-9036925966, 8660575061 ಮತ್ತು ಸಿರುಗುಪ್ಪ-9148889975.

ಹೆಚ್ಚಿನ ಮಾಹಿತಿಗಾಗಿ ನಗರದ ಜೋಳದರಾಶಿ ದೊಡ್ಡನಗೌಡ ರಂಗಮಂದಿರ ಹತ್ತಿರದ ಜಿಲ್ಲಾ ಅಲ್ಪಸಂಖ್ಯಾತರ ಜಿಲ್ಲಾ ಅಧಿಕಾರಿಗಳ ಕಾರ್ಯಾಲಯದ ದೂ.08392-200125/224, ಸಹಾಯವಾಣಿ ಕೇಂದ್ರ 8277799990(24*7)ಅಥವಾ ತಾಲೂಕು ಅಲ್ಪ ಸಂಖ್ಯಾತರ ವಿಸ್ತರಣಾಧಿಕಾರಿಗಳ ಹಾಗೂ ಜಿಲ್ಲೆಯ ಎಲ್ಲಾ ಅಲ್ಪಸಂಖ್ಯಾತರ ತಾಲೂಕು ಮಾಹಿತಿ ಕೇಂದ್ರ, ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ ಭೇಟಿನೀಡಿ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಯಾಲಿಸಿಸ್,ಸಿಟಿಸ್ಕಾನಿಂಗ್ ಅಲ್ಟ್ರಾಸೌಂಡ್ ಪ್ರಾರಂಭ!

## ಸಾರ್ವಜನಿಕರು ಆಸ್ಪತ್ರೆ ಸೌಲಭ್ಯಗಳನ್ನು ಪಡೆದುಕೊಳ್ಳಿ-ಡಾ. ಗಾಯಕವಾಡ್.




ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಕಳೆದ6ತಿಂಗಳಿಂದಲೂ ಸಾರ್ವತ್ರಿಕ ಚಿಕಿತ್ಸೆಗಳಿ ತುರ್ತು ಸೇವೆಗಳು ಸ್ಥಗಿತಗೊಂಡಿದ್ದ ಡಯಾಲಿಸಿಸ್,ಸಿಟಿಸ್ಕಾನಿಂಗ್ಅಲ್ಟ್ರಾಸೌಂಡ್, ಎಕ್ಸರೇ,ಬಿ,ಪಿ,ಶುಗರ್,ಜೊತೆಗೆ ಕಣ್ಣು,ಮೂಗುಗಂಟಲು,ಸಂಭಂದಿಸಿದ ಚಿಕಿತ್ಸೆಗಳು,ಅಲ್ಲದೆ ಗರ್ಭಣಿ ತಾಯಿಂದಿರಿಗೆ ಸೀಜರಿನ ಸಂತಾನಹರಣ ಶಸ್ತ್ರಚಿಕಿತ್ಸೆ, ಹರ್ನಿಯಾ,,ಮೂಲವ್ಯಾದಿ,ಅಪಂಟಿಕ್ಸ್, ಮುಳೆ ಮುರಿತ ಸೇರಿದಂತೆ ಇತರೆತುರ್ತು ಶಸ್ತ್ರಚಿಕಿತ್ಸೆಗಳನ್ನು ಪ್ರಾರಂಭ ಮಾಡಲಾಗಿದೆ,ಅಲ್ಲದೆ ಆಯುಷ್ಮಾನ ಭಾರತ ಸೇರಿ ಅನೇಕ ಉಚಿತ ಸೌಲಭ್ಯಗಳು ಸಿಗಲ್ಲಿವೆ, ಸರ್ಕಾರಿ ಆಸ್ಪತ್ರೆ ಮೇಲ್ದರ್ಜೆಗೆರಿಸಿ ಸಣ್ಣಕೈಗಾರಿಕಾ ಸಾರ್ವಜನಿಕ ಉಧ್ಯಮಗಳ ಮಂತ್ರಿ ಶರಣಬಸ್ಸಪ್ಪಗೌಡ ದರ್ಶನಾಪುರವರು ಕೆಕೆಆರ್,ಡಿ,ಬಿ,ಯಿಂದ 1ಕೊಟಿ, 50 ಲಕ್ಷ,ರೂ ಅನುಧಾನ ಮಂಜೂರಿ ಮಾಡಿಸಿದ್ದಾರೆ, ಎಂದು ಶಹಾಪುರ ಸರ್ಕಾರಿ ಆಸ್ಪತ್ರೆಯ ಆಡಳಿತ ವೈಧ್ಯಾಧಿಕಾರಿಗಳಾದ ಡಾ, ಪಧ್ಮಾನಂದ ಗಾಯಕವಾಡ್ ರವರು ತಿಳಿಸಿದ್ದಾರೆ. ಸರ್ಕಾರಿ ಆಸ್ಪತ್ರೆಯಲ್ಲಿ ಒಟ್ಟು 18 ಜನನುರಿತ ತಜ್ಞವೈಧ್ಯರಿದ್ದು, ಸಾರ್ವತ್ರಿಕ ಸೇವೆಗೆ ಲಭ್ಯವಾಗಿದ್ದಾರೆ, 24 ಗಂಟೆಗಳ ಕಾಲ ಸಾರ್ವತ್ರಿಕ ಚಿಕಿತ್ಸೆಗೆ ಸರ್ಕಾರಿ ವೈಧ್ಯರು ಸಜ್ಜಾಗಿದ್ದಾರೆ, ಎಂದು ತಿಳಿಸಿದ ಅವರು, ರಕ್ತದ ಬಗೆಯ ಎಲ್ಲಾ ಪರೀಕ್ಷೆಗಳನ್ನು ಮಾಡಲು ಖಾಸಗಿ ಲ್ಯಾಬ್ ನೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ, ಉತ್ತಮ

## ಡಾ ಬಿ.ಆರ್.ಅಂಬೇಡ್ಕರ್ ರವರ 134ನೇ ಜಯೋತೋತ್ಸವ ಸಮಿತಿಗೆ ಪದಾಧಿಕಾರಿಗಳ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ : ಸಂವಿಧಾನ ಶಿಲ್ಪಿ ಭಾರತರತ್ನ ಡಾ.ಬಿ.ಆರ್. ಅಂಬೇಡ್ಕರ್ ಅವರ 134ನೇ ಜಯತೋತ್ಸವ ಸಮಿತಿಯ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು

ಅಧ್ಯಕ್ಷರನ್ನಾಗಿ ಹಿರಿಯ ಮುಖಂಡರಾದ ಹೊನ್ನಪ್ಪ ರಸ್ತಾಪುರ ಅವರನ್ನು ಆಯ್ಕೆ ಮಾಡಲಾಯಿತು ಗೌರವ ಅಧ್ಯಕ್ಷರನ್ನಾಗಿ ಅಶೋಕ್ ತಳವಾರ್ ಹಿರಿಯ ಉಪಾಧ್ಯಕ್ಷರುಗಳನ್ನಾಗಿ ಬಸವರಾಜ್ ನಾಟೆಕಾರ್ ಮಹಾದೇವ ದಿಗ್ಗಿ

ಪ್ರಧಾನಕಾರ್ಯದರ್ಶಿ ಬಸಲಿಂಗಪ್ಪ ಕೋಳಿ ಕಾರ್ಯದರ್ಶಿ ವಿಶ್ವ ನಾಟೆಕಾರ್ ಖಜಾಂಚಿ ಡಾ ಶರಣಪ್ಪ ಸಂಘರ್ಷ ಸಂಘಟನಾ ಕಾರ್ಯದರ್ಶಿ ಲಕ್ಷ್ಮಣ ಸಿತ್ನಿ ರಾಜು ಮುಂಡಾಸ್ ಜಂಟಿ ಕಾರ್ಯದರ್ಶಿ ಮಲ್ಲಿಕಾರ್ಜುನ ಉಕ್ಕಿನಾಳ ಸಹ ಕಾರ್ಯದರ್ಶಿ ಭೀಮಾಶಂಕರ್ ದಾದಲ್ಲಿ ಮೆರವಣಿಗೆ ಸಮಿತಿ ಅಧ್ಯಕ್ಷರು ಮಲ್ಲು ಬೊಮ್ಮನಹಳ್ಳಿ ಉಪಾಧ್ಯಕ್ಷರು ಶರಣಪ್ಪ ತಳವಾರ್

ಈ ಸಂದರ್ಭದಲ್ಲಿ ಹಿರಿಯ ಮುಖಂಡರಾದ ಮಲ್ಲಿಕಾರ್ಜುನ ಪೂಜಾರಿ ನೀಲಕಂತ ಬಡಿಗೇರ್ ಶ್ರೀಶೈಲ ಹೊಸಮನಿ ಭೀಮರಾಯ ಬಸವರಾಜ್ ತಳವಾರ್ ತಳವಾರ್ ನಾಗಣ್ಣ ಬಡಿಗೇರ್ ನಗರಸಭೆ ಸದಸ್ಯರಾದ ಶಿವುಕುಮಾರ್ ತಳವಾರ್ ಸುಭಾಸ್ ತಳವಾರ್ ಹೊನ್ನಪ್ಪ ಗಂಗನಾಳ ಜಯರೆಡ್ಡಿ ಗೋಗಿ ಶರಣಪ್ಪ ಭೂತಳಿ ರಾಹುಲ್ ಸಾಧ್ಯಪುರ ರಾಜು ಚಂದಾಪುರ ಮರೆಪ್ಪ ಸಲದಾಪುರ ಮತ್ತು ಯುವಕರು ಭಾಗವಹಿಸಿದರು

## ನವೋದಯ ಶಾಲೆಗೆ ಆಯ್ಕೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆ ಕುಕನೂರು ತಾಲೂಕಿನ ಕುದರಿಮೋತಿ ಗ್ರಾಮದ ಮಂಜುನಾಥ್ ಹಿರೇಮಠ್ ಇವರ ಮಗನಾದ ನಂದೀಶ ಹೀರೆಮಠ್ ಜವಾಹರ್ ನವೋದಯ ವಿದ್ಯಾಲಯಕ್ಕೆ 6ನೇ ತರಗತಿ ಪ್ರವೇಶ ಪರೀಕ್ಷೆಯಲ್ಲಿ



ಆಯ್ಕೆಯಾಗಿದ್ದಾನೆ.

ಬ್ರೈಟ್ ಫ್ಯೂಚರ್ ಆಂಗ್ಲ ಮಾಧ್ಯಮ ಶಾಲೆ ಕುದರಿಮೋತಿ 2024-25ನೇ ಸಾಲಿನ ಪ್ರವೇಶ ಪರೀಕ್ಷೆಯಲ್ಲಿ ಆಯ್ಕೆ ಯಾಗುವ ಮೂಲಕ ಹೆತ್ತವರಿಗೆ, ಗ್ರಾಮಕ್ಕೆ ಹಾಗೂ ಕೋಚಿಂಗ್ ನೀಡಿದ ಶಾಲೆಗೆ ಕೀರ್ತಿ ತಂದಿದ್ದಾನೆ.

# ಕುಡಿಯುವ ನೀರಿನ ಸಮಸ್ಯೆಯಾಗದಂತೆ ಎಚ್ಚರವಹಿಸಿ ಡಾ. ಶರಣಪ್ರಕಾಶ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಸೇಡಂ.ಮಾ. 26. ತಾಲೂಕು ಪಂಚಾಯತ್ ಸಭಾಂಗಣದಲ್ಲಿ ವೈದ್ಯಕೀಯ ಶಿಕ್ಷಣ ಸಚಿವರಾದ ಡಾ. ಶರಣಪ್ರಕಾಶ ಪಾಟೀಲ ರವರ ಅಧ್ಯಕ್ಷತೆಯಲ್ಲಿ ತಾಲೂಕು ಮಟ್ಟದ 'ಟಾಸ್ಕ್ ಫೋರ್ಸ್' ಸಭೆಯನ್ನು ನಡೆಸಿ ಮಾತನಾಡಿ ಬೇಸಿಗೆ ಆರಂಭವಾದ್ದರಿಂದ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ಎಚ್ಚರಿಕೆ ವಹಿಸಬೇಕೆಂದು ಪಿಡಿಓಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಪಂಚಾಯತ್ ಮಟ್ಟದಲ್ಲಿ ಪಿಡಿಓಗಳು ಬೋರ್ ವೆಲ್ ಗಳು ಹಾಗೂ ಜಲ ಮೂಲಗಳನ್ನು ಪರೀಕ್ಷಿಸಿ ಕ್ರಮ ಕೈಗೊಂಡು ವರದಿ ಸಲ್ಲಿಸಬೇಕು. ಹೆಚ್ಚು ನೀರಿನ ಸಮಸ್ಯೆ ಇರುವ ಗ್ರಾಮಗಳಲ್ಲಿ ಶಾಶ್ವತ ಬೋರ್ ವೆಲ್ ಕೊರೆಸಿ, ಇತರೆ ಬೋರ್ ವೆಲ್ ಗಳನ್ನು ಫ್ಲಶಿಂಗ್ ಮಾಡಿಸಿ ಜನರ ಅನುಕೂಲಕ್ಕೆ ತಕ್ಕಂತೆ ನೀರು ಪೂರೈಕೆ ಮಾಡಬೇಕು ಎಂದು ಹೇಳಿದರು.ಸೇಡಂ ತಾಲೂಕಿನಲ್ಲಿ ನೀರಿನ ಪೂರೈಕೆಯಲ್ಲಿ ಎಲ್ಲಿಯೂ ಲೋಪಗಳಾಗದಂತೆ ಎಚ್ಚರಿಕೆ ವಹಿಸಿ ಎಂದು ಸೂಚಿಸಿ, ಅನುದಾನದ ಬಳಕೆಯಲ್ಲಿ ಕುಡಿಯುವ ನೀರಿನ ಸರಬರಾಜಿಗೆ ಆದ್ಯತೆ ನೀಡಿ ಎಂದು ತಿಳಿಸಿದರು. ಪಿಡಿಓಗಳು ಗ್ರಾಮಗಳಿಗೆ ಭೇಟಿ ನೀಡಿ ಒಂದು ವಾರದಲ್ಲಿ ನನಗೆ ವರದಿ ಸಲ್ಲಿಸಬೇಕು. ಹೆಚ್ಚು ಬಿಸಿಲಿದೆ ಎಂದು ಮನೆಯಲ್ಲಿಯೇ ಕುಳಿತು ಮೊಬೈಲ್ ನಲ್ಲಿ ವರದಿ ಸಲ್ಲಿಸುವವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಸಿದರು. ಸಭೆಯಲ್ಲಿ ತಹಶಿಲ್ದಾರರು ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತ್ ಪಿಡಿಓಗಳು ಇನ್ನಿತರ ಅಧಿಕಾರಿಗಳು ಉಪಸ್ಥಿತರಿದ್ದರು.

# ಮಹಿಳೆಗೆ ಬೇಕು ಸ್ವಯಂ ರಕ್ಷಣೆ, ಕಾನೂನು ಅರಿವು : ಡಾ. ರಾಮ್ ಅರಸಿದ್ಧಿ




ಕೊಪ್ಪಳ: ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸೋಮವಾರ ನಡೆದ ಕಾನೂನು ಅರಿವು ಕಾರ್ಯಾಗಾರವನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್.ಅರಸಿದ್ಧಿ ಉದ್ಘಾಟಿಸಿ ಮಾತನಾಡಿದರು.

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಭಾರತ ಸಾಕಷ್ಟು ಅಭಿವೃದ್ಧಿ ಹೊಂದಿದರೂ ಮಹಿಳಾ ಶೋಷಣೆಯ ಪ್ರಕರಣಗಳಿಗೆ ಇನ್ನೂ ಅಂಕುಶ ಬಿದ್ದಿಲ್ಲ. ಮಹಿಳೆಯರು ಸ್ವಯಂ ರಕ್ಷಣಾ ಕಲೆಗಳಿಗೆ ಆದ್ಯತೆ ನೀಡಿ ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್.ಅರಸಿದ್ಧಿ ಕರೆ ನೀಡಿದರು.

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸೋಮವಾರ ಮಹಿಳಾ ದಿನಾಚರಣೆ ಅಂಗವಾಗಿ ಕಾಲೇಜಿನ ಮಹಿಳಾ ಸಬಲೀಕರಣ ವಿಭಾಗ, ಮಹಿಳೆಯರ ಅನೈತಿಕ ಕಳ್ಳ ಸಾಗಾಣಿಕೆ, ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ತಡೆ, ವಾಣಿಜ್ಯ ಲೈಂಗಿಕ ಶೋಷಣೆ ತಡೆಗೆ ಸಂಬಂಧಿಸಿದಂತೆ ನಡೆದ ಕಾನೂನು ಅರಿವು ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಈ ನಿಟ್ಟಿನಲ್ಲಿ ಯುವಕರಿಗೂ ಸೂಕ್ತತೆ ಅಗತ್ಯ. ಸಾಮಾಜಿಕ ಮಾಧ್ಯಮಗಳನ್ನು ಸಕಾರಾತ್ಮಕ ಕಾರ್ಯಗಳಿಗೆ ಬಳಸಬೇಕು.

**ಉಪನ್ಯಾಸ ಮಾಲಿಕೆ:**

ಮಹಿಳೆಯರ ಸಬಲೀಕರಣ ಮತ್ತು ಮಹಿಳೆಯರಿಗಾಗಿ ಇರುವ ಸರಕಾರಿ ಯೋಜನೆಗಳ ಕುರಿತು ಶಿಶು ಅಭಿವೃದ್ಧಿ ಯೋಜನಾಧಿಕಾರಿ ರೋಹಿಣಿ ಕೋಟಗಾರ, ಮಹಿಳೆಯರ ಲೈಂಗಿಕ ದೌರ್ಜನ್ಯ ತಡೆ ಕುರಿತು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಾನೂನು ಮತ್ತು ಪರಿವೀಕ್ಷಣಾಧಿಕಾರಿ ಶಿವಲೀಲಾ, ಅನೈತಿಕವಾಗಿ ಮಹಿಳೆಯರ ಕಳ್ಳ ಸಾಗಾಣಿಕೆ ತಡೆ ಹಾಗೂ ವಾಣಿಜ್ಯ ಲೈಂಗಿಕ ಶೋಷಣೆ ತಡೆ ಕುರಿತು ನ್ಯಾಯವಾದಿ ಹನುಮಂತರಾವ್ ಉಪನ್ಯಾಸ ನೀಡಿದರು.

ಮಹಿಳೆಯರು ಶೋಷಣೆಗೆ ಸಂಬಂಧಿಸಿದಂತೆ ಯಾರಿಗೂ ಹೆದರಬೇಕಿಲ್ಲ. ಮುಖ್ಯವಾಗಿ ಪೊಲೀಸರೆದುರು ಯಾವುದೇ ಮಾಹಿತಿ ಮುಚ್ಚಿಡಬಾರದು ಎಂದ ಎಸ್ಪಿ, ಈಚೆಗೆ ಸಾಣಾಪುರದಲ್ಲಿ ನಡೆದ ಅತ್ಯಾಚಾರ ಪ್ರಕರಣದ ನಿದರ್ಶನ ವಿವರಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ಮಹಾಂತಸ್ವಾಮಿ ಪೂಜಾರ, ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷ ಪ್ರಕಾಶ ಕಡಗದ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಹೇಮಂತಕುಮಾರ ವೇದಿಕೆಯಲ್ಲಿದ್ದರು. ಈ ಸಂದರ್ಭದಲ್ಲಿ ಕಾಲೇಜಿನ ಬೋಧಕ ಸಿಬ್ಬಂದಿ ಡಾ.ಪ್ರಕಾಶ್ ಬಳ್ಳಾರಿ, ಡಾ.ವಿಪ್ಲವಿ, ಗೀತಾ.ಜಿ, ಡಾ.ನಾಗರಾಜ ದೊರೆ, ಡಾ.ಬೋರೇಶ್, ವೈ.ಬಿ.ಅಂಗಡಿ, ಮಾರುತಿ ತಳವಾರ, ಬಸವರಾಜ ಕರುಗಲ್, ವಸಂತಕುಮಾರ್, ಅನ್ನಪೂರ್ಣ ಹಾಗೂ ವಿದ್ಯಾರ್ಥಿಗಳು ಇದ್ದರು.

ಕಾಲೇಜಿನ ಪ್ರಾಂಶುಪಾಲ ಡಾ.ಡಿ.ಎಚ್.ನಾಯ್ಕ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ವಿಜಯಲಕ್ಷ್ಮೀ ಕೆಂಗೇರಿ ಪ್ರಾರ್ಥಿಸಿದರು. ಡಾ.ಮಹಾಂತೇಶ ನೆಲಾಗಣಿ ನಿರೂಪಿಸಿದರು. ಡಾ.ತುಕಾರಾಮ ನಾಯ್ಕ ಸ್ವಾಗತಿಸಿದರು.

ಕಾಲೇಜಿನ ಕನ್ನಡ ವಿಭಾಗದ ಸಹ ಪ್ರಾಧ್ಯಾಪಕರು, ಮಹಿಳಾ ಸಬಲೀಕರಣ ಘಟಕದ ಸಂಯೋಜಕರಾದ ಡಾ.ಭಾಗ್ಯಜ್ಯೋತಿ ಪ್ರಾಸ್ತಾವಿಕ ಮಾತನಾಡಿದರು. ಜ್ಞಾನೇಶ್ವರ ಪತ್ತಾರ ವಂದಿಸಿದರು.

ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧ ಮತ್ತು ಪರಿಹಾರ)

# ಕಾಯ್ದೆ-2013 ರ ಕುರಿತು ಜಾಗೃತಿ ಮೂಡಿಸಲು ತರಬೇತಿ ಕಾರ್ಯಾಗಾರ

ಕಲಬುರಗಿ,ಮಾ.26-ಕರ್ತವ್ಯದ ಸ್ಥಳದಲ್ಲಿ ಮಹಿಳೆಯರಿಗೆ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧ ಮತ್ತು ಪರಿಹಾರ) ಕಾಯ್ದೆ-2013 ರ ಕುರಿತು ಜಾಗೃತಿ ಮೂಡಿಸಲು ಕಾರಾಗೃಹದ ಅಧಿಕಾರಿ/ಸಿಬ್ಬಂದಿ ವರ್ಗಗಳಿಗೆ ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಬುಧವಾರ ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಯಿತು. ಈ ಕಾರ್ಯಾಗಾರವನ್ನು ಉದ್ಘಾಟಿಸಿ ಕಡಗಂಚಿ ಕಾರ್ಮಲ್ ಜ್ಯೋತಿ ಪಬ್ಲಿಕ್ ಚಾರಿಟೇಬಲ್ ಟ್ರಸ್ಟ್(ರಿ) ಶಾಖೆಯ ಕಾರ್ಯದರ್ಶಿಗಳಾದ ಡಾ॥ ಫಾಧರ್ ವಿಲಿಯಮ್ ಮಿರಂಡಾ ಅವರು ಮಾತನಾಡಿ, ಕರ್ತವ್ಯದ ಸ್ಥಳದಲ್ಲಿ ಮಹಿಳೆಯರಿಗಾಗಿ ಲೈಂಗಿಕ ಕಿರುಕುಳ (ತಡೆಗಟ್ಟುವಿಕೆ, ನಿಷೇಧ ಮತ್ತು ಪರಿಹಾರ) ಕಾಯ್ದೆ-2013ರ ಡಿಸೆಂಬರ್ 9 ರಂದು ಜಾರಿಗೆ ಬಂದಿದ್ದು, ಕಾರ್ಯಕ್ಷೇತ್ರದಲ್ಲಿ ಲೈಂಗಿಕ ಕಿರುಕುಳ ತಡೆಗಟ್ಟುವುದು ಹಾಗೂ ದೂರುಗಳನ್ನು ಪರಿಹರಿಸುವುದು ಮತ್ತು ತಡೆಯುವುದು ಈ ಕಾಯ್ದೆಯ ಮುಖ್ಯ ಉದ್ದೇಶವಾಗಿದೆ. ಕರ್ತವ್ಯದ ಸ್ಥಳದಲ್ಲಿ ಮಹಿಳೆಯರು ತಮ್ಮ ಮೇಲೆ ಲೈಂಗಿಕ ಕಿರುಕುಳದ ಸನ್ನಿವೇಶ ಕಂಡು ಬಂದಲ್ಲಿ ಯಾವುದೇ ಭಯ ಇಲ್ಲದೇ ಧೈರ್ಯವಾಗಿ ಅವರ ವಿರುದ್ಧ ದೂರನ್ನು ದಾಖಲಿಸಬೇಕು ಎಂದರು.

ಅಡ್ವಕೇಟ್ ಸಿಸ್ಟರ್ ಜಯಶ್ರೀ ಅವರು ಪ್ರೋಜಕ್ಟರ್ ಮೂಲಕ ಮಾಹಿತಿ ನೀಡುತ್ತಾ ಮಾತನಾಡಿ, ಕಾರ್ಯ ಕ್ಷೇತ್ರದಲ್ಲಿ ಮಹಿಳೆ ಮೇಲೆ ನಡೆಯುವ ದೌರ್ಜನ್ಯದ ಕುರಿತು ಲೈಂಗಿಕ ಕಿರುಕುಳದ ವ್ಯಾಪ್ತಿಯು ಸಾರ್ವಜನಿಕ, ಖಾಸಗಿ ಮತ್ತು ಸರ್ಕಾರಿ ಇಲಾಖೆಗಳಲ್ಲಿ ಕೆಲಸ ಮಾಡುವ ಮಹಿಳೆಯವರ ಮೇಲೆ ನಡೆಯುವ ಲೈಂಗಿಕ ಕಿರುಕುಳದ ಬಗ್ಗೆ 2013 ರ ಕಾಯ್ದೆ ಅಡಿಯಲ್ಲಿ ವಿವಿಧ ಸೆಕ್ಷನ್‌ಗಳ ಮುಖಾಂತರ ವಿವರವಾಗಿ ತಿಳಿಸಿದರು. ಕಾರ್ಯ ಕ್ಷೇತ್ರದಲ್ಲಿ ಲೈಂಗಿಕ ಕಿರುಕುಳದ ಬಗ್ಗೆ ದೂರನ್ನು ಪಡೆಯಲು ಮತ್ತು ಪರಿಹಾರವನ್ನು ಕಂಡುಕೊಳ್ಳಲು ಸಮಿತಿಯನ್ನು ರಚಿಸಬೇಕು. ಈ ಸಮಿತಿಯು ಕೂಲಂಕುಷವಾಗಿ ಪರಿಶೀಲಿಸಿ ಸೂಕ್ತ ಕ್ರಮವನ್ನು ಕೈಗೊಳ್ಳಬೇಕು ಎಂದರು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಕಲಬುರಗಿ ಕೇಂದ್ರ ಕಾರಾಗೃಹದ ಮುಖ್ಯ ಅಧೀಕ್ಷಕಿ ಡಾ॥ ಅನಿತಾ ಆರ್. ಮಾತನಾಡಿ, ಕಾರಾಗೃಹದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ಅಧಿಕಾರಿ/ಸಿಬ್ಬಂದಿಗಳ ಸುರಕ್ಷತೆ-ಗಾಗಿ ಸಮಿತಿಯನ್ನು ರಚಿಸಲಾಗಿದೆ. ಈ ಸಮಿತಿಯಲ್ಲಿ ಇಲಾಖೆಯ ಅಧಿಕಾರಿಗಳ ಜೊತೆಗೆ ಸ್ಥಳೀಯ ಎನ್.ಜಿ.ಓ. ಸದಸ್ಯರನ್ನು ಕೂಡ ಈ ಸಮಿತಿಯ ಸದಸ್ಯರನ್ನಾಗಿ ಮಾಡಿಕೊಳ್ಳಲಾಗಿದೆ. ಮಹಿಳಾ ಅಧಿಕಾರಿ/ಸಿಬ್ಬಂದಿಗಳಿಗೆ ತಮ್ಮ ಮೇಲೆ ಏನಾದರೂ ಲೈಂಗಿಕ ದೌರ್ಜನ್ಯದ ಸನ್ನಿವೇಶಗಳು ಕಂಡು ಬಂದಲ್ಲಿ ಸಮಿತಿಯ ಮುಂದೆ ಲಿಖಿತವಾಗಿ ದೂರನ್ನು ನೀಡುವುದು. ತಮ್ಮ ದೂರನ್ನು ಸಮಿತಿಯು ಪರಿಶೀಲಿಸಿ ವರದಿಯನ್ನು ನೀಡಿದ್ದಲ್ಲಿ ಸೂಕ್ತ ಕ್ರಮವನ್ನು ಕೈಗೊಳ್ಳಲಾಗುವುದೆಂದು ಹೇಳಿದರು. ಕಾರಾಗೃಹದಲ್ಲಿ ದಾಖಲಾಗಿರುವ ಮಹಿಳಾ ಬಂದಿಗಳಿಗೆ ಕಡಗಂಚಿ ಕಾರ್ಮಲ್ ಜ್ಯೋತಿ ಪಬ್ಲಿಕ್ ಚಾರಿಟೇಬಲ್ ಟ್ರಸ್ಟ್(ರಿ) ಶಾಖೆಯ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಪ್ರಯುಕ್ತ ವಿವಿಧ ಸ್ಪರ್ಧೆಗಳನ್ನು ಏರ್ಪಡಿಸಿ ವಿಜೇತರಾದವರಿಗೆ ಬಹುಮಾನವನ್ನು ವಿತರಿಸಿದರು. ಈ ಕಾರ್ಯಕ್ರಮದಲ್ಲಿ ಫಾದರ್ ದೀಪಕ್ ತಮಾಸ್, ಫಾದರ್ ಮಾಯ್ಖಿನ್ ಎಸ್. ವಿರೋನಿಕಾ, ಸಹಾಯಕ ಅಧೀಕ್ಷಕ ಚನ್ನಪ್ಪ, ಕಾರಾಗೃಹದ ಲಿಪಿಕ/ಕಾರ್ಯನಿರ್ವಾಹಕ ಅಧಿಕಾರಿ/ಸಿಬ್ಬಂದಿಗಳು ಭಾಗವಹಿಸಿದ್ದರು. ಪ್ರಾರಂಭದಲ್ಲಿ ಅಶ್ವಿನಿ ಹಿರೇಮಠ ಅವರು ಸ್ವಾಗತಿಸಿದರು. ಸಂಸ್ಥೆಯ ಶಿಕ್ಷಕರಾದ ಶ್ರೀ ನಾಗರಾಜ ಮುಲಗೆ ಕಾರ್ಯಕ್ರಮ ನಿರೂಪಿಸಿದರು. ಕೊನೆಯಲ್ಲಿ ಈ ಸಂಸ್ಥೆಯ ಸಹಾಯಕ ಅಧೀಕ್ಷಕ ಬಿ. ಸುರೇಶ್ ವಂದಿಸಿದರು. ಸಂಸ್ಥೆಯ ಸಹಾಯಕ ಆಡಳಿತಾಧಿಕಾರಿಗಳಾದ ಭೀಮಾಶಂಕರ ಡಾಂಗೆ ಪ್ರಾರ್ಥನಾ ಗೀತೆ ಹಾಡಿದರು.

# ಮಹಿಳೆ ಅಬಲೆ ಅಲ್ಲ ಸಬಲೆ ನ್ಯಾ. ಸಿ. ಚಂದ್ರಶೇಖರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಇಂದಿನ ಮಹಿಳೆ ಅಬಲೆ ಅಲ್ಲ ಸಬಲೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಸಿ.ಚಂದ್ರಶೇಖರ್ ಹೇಳಿದರು.

ಅವರು ಸೋಮವಾರ ಕಿನ್ನಾಳ ಗ್ರಾಮದಲ್ಲಿ ಕಿನ್ನಾಳ ಗ್ರಾಮ ಪಂಚಾಯತ ವತಿಯಿಂದ ಆಯೋಜಿಸಿದ ಮಹಿಳಾ ಗ್ರಾಮ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಮನವಿಯ ಮೇರೆಗೆ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು ದತ್ತು ಗ್ರಾಮ ಕಿನ್ನಾಳಕ್ಕೆ ಮಹಾತ್ಮಾ ಗಾಂಧಿ ನರೇಗಾ ಯೋಜನೆಯಡಿ 1.56 ಕೊಟಿ ಸಾಮಗ್ರಿ ಆದಾರಿತ ಕಾಮಗಾರಿ ಮಂಜುರಾಗಿವೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಮಹಾತ್ಮ ಗಾಂಧಿ ನರೇಗಾ ಯೊಜನೆಯ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದರು.ನಂತರದಲ್ಲಿ ಡೆಲ್ ಸಹಯೋಗದಲ್ಲಿ ಪ್ರಾರಂಭವಾದ ಉಚಿತ ಕಂಪ್ಯೂಟರ್ ತರಭೇತಿ ಕೇಂದ್ರಕ್ಕೆ ಚಾಲನೆ ನೀಡಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ಎಸ್ ದರಗದ್, ಕಿನ್ನಾಳ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಶ್ವೇತಾ ರಾಘವೇಂದ್ರ ಡಂಬಳ, ಉಪಾಧ್ಯಕ್ಷರಾದ ದುರಗಪ್ಪ ಡಂಬರ, ಸದಸ್ಯರಾದ ಕಾಳಪ್ಪ ಬಿದರೂರ, ಹನುಮೇಶ ಕೋವಿ, ಪ್ರಶಾಂತ ಕುಲಕರ್ಣಿ, ಮಂಜುನಾಥ ಕುರಬರ, ಮೈಲಾರಪ್ಪ ಉದ್ದಾರ, ಧರ್ಮಣ್ಣ ಮೇಟಿ, ಮಂಜುನಾಥ ಉದ್ದಾರ, ಸಣ್ಣೆಪ್ಪ, ಮಾರುತಿ ಹಂಚಿನಾಳ, ಶಕುಂತಲಾ, ಮೇಗಾ ಹಿರೇಮಠ, ಕಮಲಮ್ಮ, ಪೂರ್ಣಿಮಾ, ಶಶಿರೇಕಾ, ದೀಪಾ, ಕಸ್ತೂರೆಮ್ಮ, ಶಿಲ್ಪಾ ಉಪ್ಪಾರ, ವೈದ್ಯಾಧಿಕಾರಿಗಳು ,ಸಿಡಿಪಿಓ, ಎಲ್ಲಾ ಪ್ರಾಥಮಿಕ & ಪ್ರೌಡ ಶಾಳಾ ಮುಖ್ಯೊಪಾದ್ಯಯರು, ಪಾಲ್ಗೊಂಡಿದ್ದರು. ಪಂಚಾಯತ ಅಭಿವೃದ್ಧಿ ಅಧಿಕಾರಿ ಪರಮೇಶ್ವರಯ್ಯ ಉಪಸ್ಥಿತರಿದ್ದರು,

ಗ್ರಾ.ಪಂ ಕಾರ್ಯದರ್ಶಿ ನೀಲಮ್ಮ ಪ್ರಾಸ್ತಾವಿಕವಾಗಿ ಮಾತನಾಡಿದರೆ, ದ್ವಿ.ದ.ಲೇ. ಸಹಾಯಕರಾದ ತಾಜುದ್ದಿನ್ ಕಾರ್ಯಕ್ರಮವನ್ನು ನಿರುಪಿಸಿದರು.

# ಪ್ರತಿಯೊಬ್ಬ ವಿದ್ಯಾರ್ಥಿಗಳು ಸಂವಿಧಾನ ತಿಳಿಯುವ ಕಾರ್ಯವಾಗಬೇಕು



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 26: ಭಾರತ ಸಂವಿಧಾನವು ಜಗತ್ತಿನಲ್ಲಿಯೇ ಅತೀ ಶ್ರೇಷ್ಠವಾದ ಸಂವಿಧಾನವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಗಳು ಸಂವಿಧಾನವನ್ನು ತಿಳಿಯುವ ಕಾರ್ಯವಾಗಬೇಕು ಎಂದು ಉಪನ್ಯಾಸಕರು ಹಾಗೂ ಹಿರಿಯ ಸಾಹಿತಿಗಳಾದ ಶ್ರೀ ಗುರುಪ್ರಸಾದ ವೈದ್ಯ ಅವರು ಹೇಳಿದರು.

ಹುಣಸಗಿ ಸರಕಾರಿ ಮಾದರಿಯ ಪ್ರಾಥಮಿಕ ಶಾಲೆ ಕ್ಯಾಂಪ್‌ನಲ್ಲಿ ಇತ್ತೀಚಿನ ನಡೆದ ಜಿಲ್ಲಾ ಕಾನೂನು ಸೇವೆಗಳ ಪಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕಾರ್ಮಿಕ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಹಾಗೂ ವಿವಿಧ ಇಲಾಖೆ ಮತ್ತು ಸ್ಥಳಿಯ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ 2024-25ನೇ ಸಾಲಿನ ಪರಿಶಿಷ್ಟ ಜಾತಿ ಉಪಯೋಜನೆ(ಎಸ್.ಸಿ.ಎಸ್.ಪಿ) ಹಾಗೂ ಗಿರಿಜನ ಉಪಯೋಜನೆ (ಟಿ.ಎಸ್.ಪಿ)ಯಡಿ "ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986, ತಿದ್ದುಪಡಿ ಕಾಯ್ದೆ 2016ರ" ಕುರಿತು, ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭಾರತ ಸಂವಿಧಾನವು ಜಗತ್ತಿನಲ್ಲಿಯೇ ಅತೀ ಶ್ರೇಷ್ಠವಾದ ಸಂವಿಧಾನವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಗಳು ಸಂವಿಧಾನವನ್ನು ತಿಳಿಯುವ ಕಾರ್ಯವಾಗಬೇಕು ಎಂದರು. ಹಾಗೂ ಭಾರತದ ಸಂವಿಧಾನವು 21 ಎ ವಿಧಿಯು 6 ರಿಂದ 14 ವರ್ಷದ ಮಕ್ಕಳಿಗೆ ಉಚಿತ ಹಾಗೂ ಕಡ್ಡಾಯ ಶಿಕ್ಷಣದ ಹಕ್ಕನ್ನು ನೀಡಿದೆ ಪ್ರತಿಯೋಬ್ಬ ವಿದ್ಯಾರ್ಥಿಯು ಈ ಹಕ್ಕನ್ನು ಬಳಸಿಕೊಳ್ಳಬೇಕೆಂದು ತಿಳಿಸಿದರು.

ಹುಣಸಗಿ ಸರಕಾರಿ ಮಾದರಿಯ ಪ್ರಾಥಮಿಕ ಶಾಲೆ (ಹುಣಸಗಿ ಕ್ಯಾಂಪ್‌ನ) ಮುಖ್ಯ ಗುರುಗಳಾದ ಬಸನಗೌಡ ಚೌದ್ರಿ ಅವರು ಮಾತನಾಡಿ, ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ಹಾಗೂ ತಿದ್ದುಪಡಿ 2016ರ ಕುರಿತು ಪ್ರತಿಯೊಬ್ಬರು ಕೂಡ ತಮ್ಮ ಪಾಲಕರಿಗೆ ತಿಳಿಸಬೇಕು ಹಾಗೂ ಪ್ರತಿಯೊಂದು ಮಗುವು ತನ್ನ ಹಕ್ಕುಗಳಿಂದ ವಂಚಿತನಾಗದಂತೆ ನೋಡಿಕೊಳ್ಳುವುದು ಪ್ರತಿಯೊಬ್ಬ ಪಾಲಕ, ಪೋಷಕರ ಜವಬ್ದಾರಿಯಾಗಿದೆ ಎಂದು ವಿದ್ಯಾರ್ಥಿಗಳಿಗೆ ಹೇಳಿದರು.

ಜಿಲ್ಲಾ ಬಾಲಕಾರ್ಮಿಕ ಯೋಜನಾ ನಿರ್ದೇಶಕರಾದ ಶ್ರೀ ರಿಯಾಜ್ ಪಟೇಲ್ ವರ್ಕನಳ್ಳಿ ಅವರು ಮಾತನಾಡಿ, ಓದುವ ಮಕ್ಕಳನ್ನು ಶಾಲೆ ಬಿಡಿಸಿ ಕೆಲಸಕ್ಕೆ ಕಳುಹಿಸುವುದು ಮತ್ತು ಅಂತಹ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳುವುದು ಕಾನೂನು ಬಾಹಿರ ಕ್ರಮವಾಗಿದ್ದು, ಇದನ್ನು ಮೀರಿಯೂ ಸಹ ಮಕ್ಕಳನ್ನು ಕೆಲಸಕ್ಕೆ ಸೇರಿಸಿಕೊಂಡಲ್ಲಿ ಅಂತಹ ಅಂಗಡಿ ಮಾಲೀಕರ ವಿರುದ್ಧ 20,000 ರಿಂದ 50,000 ರೂ.ಗಳವರೆಗೆ ದಂಡ ವಿದಿಸಲಾಗುವುದು ಮತ್ತು 6 ತಿಂಗಳಿಂದ 2 ವರ್ಷದವರೆಗೆ ಜೈಲು ಶಿಕ್ಷೆ ಗಳನ್ನು ಸಹ ವಿಧಿಸಲಾಗುವುದೆಂದು ಹಾಗೂ ಶಾಲೆಗೆ ಹೋಗುವ ಮಕ್ಕಳನ್ನು ಶಾಲೆ ಬಿಡಿಸಿ ಆಟೋ, ಟಂಟಂಗಳಲ್ಲಿ ಕೃಷಿ ಹಾಗೂ ಇನ್ನಿತರ ಕೃಷಿ ಚಟುವಟಿಕೆ ಕೆಲಸಕ್ಕೆ ಕರೆದುಕೊಂಡು ಹೋಗುವುದು ಕಂಡುಬಂದಲ್ಲಿ ಮಕ್ಕಳ ಸಹಾಯವಾಣಿ 1098 ಕ್ಕೆ ಪೋನ್ ಮಾಡಿ ತಿಳಿಸಿದರೆ ಅಂತಹ ಮಕ್ಕಳನ್ನು ರಕ್ಷಿಸಿ, ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು ಎಂದರು. ಸುರಪುರ ಕಾರ್ಮಿಕ ನಿರೀಕ್ಷಕರಾದ ಶಿವಪ್ಪ ಜಮದಾರ್ ಅವರು ಮಾತನಾಡಿದರು, "ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986, ತಿದ್ದುಪಡಿ ಕಾಯ್ದೆ 2016ರ" ಕುರಿತು ಮಾಹಿತಿ ನೀಡಿದರು. ಬಾಲ, ಕಿಶೋರ ಕಾರ್ಮಿಕ ಪದ್ಧತಿ ನಿಷೇಧದ ಕುರಿತು ಆಯೋಜಿಸಿದ್ದ ಚಿತ್ರಕಲೆ, ಪ್ರಬಂಧ ಭಾಷಣ ಸ್ಪರ್ಧೆಯಲ್ಲಿ ಪ್ರಥಮ, ದ್ವಿತೀಯ ಹಾಗೂ ತೃತೀಯ ಸ್ಥಾನ ಪಡೆದ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಬಹುಮಾನಗಳನ್ನು ಸಹ ಈ ಸಂದರ್ಭದಲ್ಲಿ ವಿತರಿಸಲಾಯಿತು. ಶ್ರೀಮತಿ ನಿಂಗಮ್ಮ ಪಾಟಿಲ್ ಕಾರ್ಯಕ್ರಮ ನಿರೂಪಣೆ ನೆರವೇರಿಸಿದರು. ಈ ಸಂದರ್ಭದಲ್ಲಿ ಕಾರ್ಮಿಕ ಸಂಘಟನೆಯ ನಾಗಯ್ಯ ಭೊವಿವಡ್ಡರ್, ಕಾರ್ಮಿಕ ಇಲಾಖೆಯ ಸಿಬ್ಬಂದಿಗಳು ಎಲ್. ಎನ್ ಚೌದ್ರಿ, ರಮೇಶ ಕೆಲ್ಲೂರು, ಬಾಲು ನಾಯಕ, ಉಪಸ್ಥಿತರಿದ್ದರು.

# ಸ್ಟಾಟ್ ಚೇಂಜ್ ಆಗಿರುವ ರೈತರ ಜಮೀನನ್ನು ಪೋಡಿ ಮಾಡಲು ರಾಜ್ಯ ಸರ್ಕಾರಕ್ಕೆ ರೈತ ಸಂಘದಿಂದ ಮನವಿ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆ ಸೇರಿದಂತೆ ರಾಜ್ಯಾದ್ಯಂತ ರೈತರ ಜಮೀನು ಸ್ಟಾಟ್ ಚೇಂಜ್ ಆಗಿರುವ ಸರ್ವೆ ನಂಬರಿನ ಪಾಹಣಿಯನ್ನು ಪೋಡಿ ಮಾಡಿ ಕೊಡುವುದನ್ನು ಬಿಟ್ಟು

ತಾಲೂಕ ಸರ್ವೆ ಅಧಿಕಾರಿಗಳು ಕೊಪ್ಪಳ ಜಿಲ್ಲೆಯ ಕುಕನೂರು ತಾಲೂಕಿನ ಯರೇಹಂಚಿನಾಳ ಸಿದ್ನೇಕೊಪ್ಪ ಬಿನ್ನಾಳ ಚಿಕ್ಕೇನಕೊಪ್ಪ ಸೋಂಪೂರ ದ್ಯಾಂಪೂರ ಗ್ರಾಮ ಸೇರಿದಂತೆ ಹಲವಾರು ಕಡೆಯಲ್ಲಿ ಸರ್ವೆ ಅಧಿಕಾರಿಗಳು ಫಾರ್ಮ್ ನಂಬರ್ ಟೆನ್ ಆಗಿರುವ ರೈತರ ಜಮೀನಿನಲ್ಲಿ ಪೋಡಿ ಮಾಡಿಕೊಡುವ ಕಾರ್ಯ ನಡಿಸಿದ್ದಾರೆ.

ಸಮಸ್ಯೆ ಇರುವ ರೈತರ ಜಮೀನನ್ನು ಪೋಡಿ ಯಾರು ಮಾಡಿಕೊಡಬೇಕು

ಯರೇಹಂಚಿನಾಳ ಗ್ರಾಮದ ಸಿಮೇಯಲ್ಲಿ 498.ನೇ ಸರ್ವೆ ನಂಬರಿನಲ್ಲಿ 7.ಜನ ರೈತರು ಸ್ವಂತ ಜಮೀನಿನ ಪಾಹಣಿಯಲ್ಲಿ ಉಳುಮೆ ಮಾಡುತಿರುವ ಸರ್ವೆ ನಂಬರ್ ಒಂದಾದರೆ ಆದರೆ

ಇನ್ನೊಂದುಕಡೆ 484.ನೇ ಸರ್ವೆ ನಂಬರಿನ ಪಾಹಣಿಯಲ್ಲಿ 10.ಜನ ರೈತರೊಂದಿಗೆ 7.ಜನ ರೈತರು ಜಂಟಿಯಾಗಿ ಬೆರೊಂದು ರೈತರ ಜಮೀನಿನ ಪಾಹಣಿಯಲ್ಲಿ ಡಮ್ಮಿ ಪಾಹಣಿ ಓಡುತ್ತಿದೆ

ಈ ಜಮೀನನ್ನು ಬೆಳೆ ಸಮೀಕ್ಷೆದಾರರು ಜಿಪಿಎಸ್ ಮಾಡುವಾಗಲೂ ಬೆಳೆ ಸಮೀಕ್ಷೆ ಜಿಪಿಎಸ್ 484.ನೇ ಸರ್ವೆ ನಂಬರಿನಲ್ಲಿಯೇ ಬೆಳೆ ಸಮೀಕ್ಷೆ ಜಿಪಿಎಸ್ ಓಡುತ್ತದೆ ಈ ಪಾಹಣಿಯಲ್ಲಿ ಬೆಳೆ ಸಮೀಕ್ಷೆದಾರರಿಗೂ ಸಮಸ್ಯೆ ರೈತರಿಗೂ ಸಮಸ್ಯೆ

ಹಿಗಾಗಿ ರೈತರು ಉಳುಮೆ ಮಾಡುವ ಸರ್ವೆ ನಂಬರಿನ ಪಾಹಣಿಗೆ ಹಾಗೂ ಡಮ್ಮಿ ಪಾಹಣಿ ಓಡುವಂತ ಸರ್ವೆ ನಂಬರಿನ ಪಾಹಣಿಗೆ ಒಂದ-ಕ್ಕೊಂದು ಸಂಬಂಧವಿಲ್ಲ

ಅದಕ್ಕಾಗಿ ಸರ್ಕಾರ ಅದಲು ಬದಲು ಆಗಿರು ರೈತರ ಜಮೀನಿನ ಪಾಹಣಿಯನ್ನು ಸರಿಪಡಿಸಿ ಕೊಡಬೇಕು

ರಾಜ್ಯಾದ್ಯಂತ ರೈತರ ಪಾಹಣಿಗೆ ಸರ್ವೆ ನಂಬರಿನ ಪಾಹಣಿಗೆ ಒಂದಕ್ಕೊಂದು ಸಂಬಂಧವಿಲ್ಲ ಇಲ್ಲದಂತಾ ಆದರೂ ಕೂಡ ಈ ಸರ್ಕಾರ ರೈತರ ಸಮಸ್ಯೆಯನ್ನು ಬಗೆಹರಿಸಲು ಮುಂದಾಗಿಲ್ಲ. ಅಂದರೆ ಸರ್ಕಾರ ಇಂತ ಅಧಿಕಾರಿಗಳ ಮೇಲೆ ಸೂಕ್ತ ಕ್ರಮಕೈಗೊಳ್ಳಬೇಕು

ಈ ವೇಳೆಯಲ್ಲಿ ರಾಜ್ಯಾದ್ಯಂತ ರೈತರ ಸಮಸ್ಯೆ ಅಂದರೆ

ಒಂದಲ್ಲ ಎರಡಲ್ಲ ರಾಜ್ಯದಲ್ಲಿ ಎಲ್ಲಾ ರೈತರಿಗೆ ಈ ಸಮಸ್ಯೆಯನ್ನು ಎದುರಿಸುವಂತ ಆಗಿದ್ದು ಶೀಘ್ರದಲ್ಲಿ ರಾಜ್ಯ ಸರ್ಕಾರ ವಿಧಾನ ಸೌಧದಲ್ಲಿ ಚರ್ಚಿಸಿ ಈ ಹೊಸ ಆದೇಶ ಮಾಡಿ

ರೈತರು ಉಳುಮೆ ಮಾಡುವುಂತ ರೈತರ ಜಮೀನನ್ನು ಸರಿಪಡಿಸಿ ಹೊಸ ನಕಾಶ ಸೃಷ್ಟಿ ಮಾಡಿ ರೈತರ ಜಮೀನನ್ನು

ರಿ ಸರ್ವೆ ಮಾಡಬೇಕು

ಜಿಲ್ಲೆಯ ರೈತರ ಜಮೀನನ್ನು ಪೋಡಿ ಮಾಡಬೇಕು ರೈತರಿಗೆ ತೊಂದರೆ ಆಗದಂತೆ ಜಮೀನನ್ನು ಫಾರ್ಮ್ ನಂಬರ್ ಟೆನ್ ಮಾಡಿಕೊಡುವಂತೆ

ರೈತರ ಹಕ್ಕು ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಅಂದಪ್ಪ ರುದ್ರಪ್ಪ ಕೋಳೂರ ಇವರ ನೇತೃತ್ವದಲ್ಲಿ ಆಗ್ರಹಿಸಿ ಕುಕನೂರು ತಹಶೀಲ್ದಾರರಾದ ಎಚ್ ಪ್ರಾಣೇಶ ಇವರ ಮೂಲಕ ಸಿಎಂ ಸಿದ್ದರಾಮಯ್ಯ ಹಾಗೂ ಕಂದಾಯ ಸಚಿವ ಕೃಷ್ಣ ಬೈ-ರೇಗೌಡ ರವರಿಗೆ ರೈತ ಸಂಘದ ಕಾರ್ಯಕರ್ತರು ತಹಶೀಲ್ದಾರ್ ಕಚೇರಿಗೆ ತೆರಳಿ ಈ ಮನವಿಯನ್ನು ಸಲ್ಲಿಸಿದರು.

ಈ ಮನವಿ ಪತ್ರ ಸ್ವೀಕರಿಸಿದ ತಹಶೀಲ್ದಾರರಾದ ಎಚ್ ಪ್ರಾಣೇಶ ರವರು ನಿಮ್ಮ ಮನವಿ ಪತ್ರವನ್ನು ಮಾನ್ಯ ಜಿಲ್ಲಾಧಿಕಾರಿಗಳಿಗೆ ಕಳಿಸಿ ಕೊಡುವುದಾಗಿ ಭರವಸೆ ನೀಡಿದರು. ಈ ಸಂದರ್ಭದಲ್ಲಿ ರೈತ ಸಂಘದ ಪದಾಧಿಕಾರಿಗಳಾದ ರಾಜಶೇಖರ್ ಕಟ್ಟಿ. ದೇವರಡ್ಡಿ ನಾಗರಡ್ಡಿ. ಯಲ್ಲಪ್ಪ ಎಚ್ ಬಾಬರಿ. ಮಾರುತಿ ಶರಣಪ್ಪ ಜೋಗಿನ್. ಇನ್ನಿತರರು ಉಪಸ್ಥಿತರಿದ್ದರು.

# ಜಿಲ್ಲಾಧಿಕಾರಿಗಳಿಂದ ಪೋಸ್ಟರ್ ಬಿಡುಗಡೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.26-ಕೌಶಲ್ಯಾಭಿವೃದ್ಧಿ ನಿಗಮದಿಂದ 2025ರ ಏಪ್ರಿಲ್ ತಿಂಗಳಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಆಯೋಜಿಸುತ್ತಿರುವ ಬೃಹತ್ ಉದ್ಯೋಗ ಮೇಳಕ್ಕೆ ಸಂಬಂಧಿಸಿದಂತೆ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳು ಹಾಗೂ ಇತರೆ ಜಿಲ್ಲೆಯ ಅಭ್ಯರ್ಥಿಗಳಿಗೆ ಉದ್ಯೋಗ ಮೇಳದ ಕುರಿತು ಅರಿವು ಮೂಡಿಸಲು ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪೋಸ್ಟರ್ ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ನಾಗೂಬಾಯಿ ಪಿ. ಸೂರ್ಯವಂಶಿ, ಕಲಬುರಗಿ ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಹಾಗೂ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಅವರು ಉಪಸ್ಥಿತರಿದ್ದರು.

ಈ ಬೃಹತ್ ಉದ್ಯೋಗ ಮೇಳದಲ್ಲಿ ಪ್ರತಿಷ್ಠಿತ ಸುಮಾರು 250 ಕಂಪನಿಗಳು ಮತ್ತು ಸ್ಥಳೀಯ ಉದ್ಯೋಗ ನೀಡುವ ಕಂಪನಿಗಳು ಭಾಗವಹಿಸಲಿವೆ. ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳ ಅಭ್ಯರ್ಥಿಗಳನ್ನು ಒಳಗೊಂಡಂತೆ ಇತರೆ ಜಿಲ್ಲೆಯ ಸುಮಾರು 20,000 ಕ್ಕೂ ಹೆಚ್ಚು ಅಭ್ಯರ್ಥಿಗಳು ಭಾಗವಹಿಸುವ ನಿರೀಕ್ಷೆ ಇದೆ. ಈ ಉದ್ಯೋಗ ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ಸ್ಕಿಲ್ ಕನೆಕ್ಟ್ ಪೋರ್ಟಲ್‌ಗ್ನೀಣಣಠಿ:// ಇುಟಟಛಿಂಟಟಿಜಛಿಣ.ಇಚಿಞಾ-ಚಿಟಇಚಿಡಿ.ಛಿಂಟ ಭೇಟಿ ನೀಡಿ ಆನ್‌ಲೈನ್ ಮೂಲಕ ರಜಿಸ್ಟರ್ ಮೇಲೆ ಕ್ಲಿಕ್ ಮಾಡಿ ತಮ್ಮ ಹೆಸರನ್ನು ನೋಂದಣಿ ಮಾಡಿಕೊಳ್ಳಬೇಕು.

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ಬೆಂಗಳೂರು, ಜಿಲ್ಲಾಡಳಿತ ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ ಕಲಬುರಗಿ ಇವುಗಳ ಸಹಯೋಗದಲ್ಲಿ ವೈದ್ಯಕೀಯ ಶಿಕ್ಷಣ ಸಚಿವರು ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರಾದ ಮಾನ್ಯ ಡಾ॥ ಶರಣ ಪ್ರಕಾಶ ಪಾಟೀಲ್ ಇವರ ಅಧ್ಯಕ್ಷತೆಯಲ್ಲಿ ಈ ಬೃಹತ್ ಉದ್ಯೋಗಮೇಳ-2025 ಮೇಳವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ಕೌಶಲ್ಯ ಮಿಷನ್‌ನ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಕ್ರಮ ಮರ ಕಡಿತಲೆ: ದಂಡ, ಶಿಕ್ಷೆ ಪ್ರಮಾಣ ಹೆಚ್ಚಳಕ್ಕೆ ಈಶ್ವರ ಖಂಡ್ರೆ ಸೂಚನೆ



ಬೆಂಗಳೂರು, ಮಾ.26: ಅಕ್ರಮ ಮರ ಕಡಿತಲೆಗೆ ಪ್ರಸಕ್ತ ವಿಧಿಸಲಾಗುತ್ತಿರುವ ದಂಡ ಮತ್ತು ಶಿಕ್ಷೆಯ ಪ್ರಮಾಣವನ್ನು ಹತ್ತುಪಟ್ಟು ಹೆಚ್ಚಿಸಲು ಅನುವಾಗುವಂತೆ ವೃಕ್ಷ ಸಂರಕ್ಷಣಾ ಕಾಯಿದೆ 1972ಕ್ಕೆ ತಿದ್ದುಪಡಿ ತರಲು ಕ್ರಮ ವಹಿಸುವಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಸೂಚನೆ ನೀಡಿದ್ದಾರೆ.ತತ್ಸಂಬಂಧ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅರಣ್ಯ ಪಡೆ ಮುಖ್ಯಸ್ಥರಿಗೆ ಸೂಚನೆ ನೀಡಿರುವ ಸಚಿವರು, "ದೊಡ್ಡ ಸಂಖ್ಯೆಯಲ್ಲಿ ಮರಗಳನ್ನು ಕಡಿಯುವುದು, ಮಾನವ ಹತ್ಯೆ ಮಾಡಿದಂತೆ ಅಥವಾ ಅದಕ್ಕಿಂತ" ಎಂದು ಘನ ಸುಪ್ರೀಂಕೋರ್ಟ್ ಅಭಿಪ್ರಾಯಪಟ್ಟಿರುವುದನ್ನು ಉಲ್ಲೇಖಿಸಿದ್ದಾರೆ.ಅಕ್ರಮವಾಗಿ ಕತ್ತರಿಸಿದ ಪ್ರತಿ ಮರಕ್ಕೆ 1 ಲಕ್ಷ ರೂ. ದಂಡ ವಿಧಿಸಿರುವ ವಿಚಾರದಲ್ಲಿ ಕರುಣೆ ತೋರುವ ಅಗತ್ಯವಿಲ್ಲ ಎಂದು ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳು ಅಭಿಪ್ರಾಯಪಟ್ಟಿರುವುದನ್ನೂ ತಮ್ಮ ಟಿಪ್ಪಣಿಯಲ್ಲಿ ಉಲ್ಲೇಖಿಸಿರುವ ಸಚಿವರು, ಅಕ್ರಮ ಮರಗಳ ಕಡಿತಲೆಗೆ ವಿಧಿಸುವ ದಂಡದ ಪ್ರಮಾಣ ಹೆಚ್ಚಳದ ಅಗತ್ಯ ಪ್ರತಿಪಾದಿಸಿದ್ದಾರೆ.ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯ ಸವಾಲುಗಳನ್ನು ಇಡೀ ವಿಶ್ವ ಎದುರಿಸುತ್ತಿರುವ ಪ್ರಸಕ್ತ ಸನ್ನಿವೇಶದಲ್ಲಿ, ಇರುವ ಒಂದೇ ಭೂಮಿಯನ್ನು ರಕ್ಷಿಸಿ, ಸುರಕ್ಷಿತವಾಗಿ ಮುಂದಿನ ಪೀಳಿಗೆಗೆ ಹಸ್ತಾಂತರಿಸಲು, ಪ್ರಕೃತಿ, ಪರಿಸರ ಉಳಿಸುವುದು ನಮ್ಮೆಲ್ಲರ ಹೊಣೆಯಾಗಿದೆ ಎಂದೂ ತಿಳಿಸಿದ್ದಾರೆ.ಸಂಸ್ಕೃತದಲ್ಲಿ "ಧರ್ಮೋ ರಕ್ಷತಿ ರಕ್ಷಿತಃ' ಎಂಬ ಮಾತಿದೆ. ಈಗ ಇದನ್ನು "ವೃಕ್ಷೋ ರಕ್ಷತಿ ರಕ್ಷಿತಃ' ಎಂದು ಬದಲಾಯಿಸಿಕೊಳ್ಳಬೇಕಾದ ಕಾಲಘಟ್ಟದಲ್ಲಿ ನಾವಿದ್ದೇವೆ. ಹತ್ತಾರು, ನೂರಾರು ವರ್ಷದಿಂದ ಬೆಳೆದ ಮರಗಳನ್ನು ಸಂರಕ್ಷಿಸದಿದ್ದರೆ ಮುಂದೆ ದೊಡ್ಡ ಅಪಾಯ ಎದುರಿಸಬೇಕಾಗುತ್ತದೆ. ಈ ನಿಟ್ಟಿನಲ್ಲಿ ವೃಕ್ಷ ಸಂರಕ್ಷಣಾ ಕಾಯಿದೆಗೆ ತಿದ್ದುಪಡಿ ತರಲು ಕ್ರಮ ವಹಿಸುವಂತೆ ಆದೇಶ ನೀಡಿದ್ದಾರೆ.

# ಜೀವನದಲ್ಲಿ ಒಳ್ಳೆ ಶಿಕ್ಷಣ ಪಡೆದು ಕಲಿತ ಶಾಲೆಯನ್ನು ಹೆಸರಿಸಬೇಕು:ಬಸವಲಿಂಗ ದೇವರು



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮಾ.26: ಮಕ್ಕಳಲ್ಲಿ ಶಿಕ್ಷಣ ಸಂಸ್ಕಾರ ಬಹಳ ಅಚ್ಚುಕಟ್ಟಾಗಿದೆ ತಮಗೆ ಬಿಳ್ಕೊಡುಗೆ ಸಮಾರಂಭ ಪೂಜ್ಯರ ಆಶೀರ್ವಾದವಿರುತ್ತದೆ ಹಾಗೂ ಮುಂದೆ ತಮ್ಮ ಜೀವನದಲ್ಲಿ ಒಳ್ಳೆ ಶಿಕ್ಷಣ ಪಡೆದು ನಿಮ್ಮ ಕಲಿತ ಶಾಲೆಯನ್ನು ಹೆಸರಿಸಬೇಕು ಎಂದು ಬಸವಲಿಂಗ ದೇವರು ನುಡಿದರು.

ತಾಲೂಕಿನ ಡಾ. ಚನ್ನಬಸವದೇವರ ಗುರುಕುಲ ಹಿರಿಯ ಪ್ರಾಥಮಿಕ ಶಾಲೆ ಖೇಡ್ ಸಂಗಮದಲ್ಲಿ 2024 25ನೇ ಸಾಲಿನ 8ನೇ ತರಗತಿಯ ವಿದ್ಯಾರ್ಥಿಗಳಿಗೆ ಬಿಳ್ಕೊಡುಗೆ ಸಮಾರಂಭ ಕಾರ್ಯಕ್ರಮದಲ್ಲಿ ದಿವ್ಯಸಾನಿಧ್ಯವಹಿಸಿ ಮಾತನಾಡಿದರು.

ಈ ಶಾಲೆಯ ಪರಿಸರ ವಾತಾವರಣದಲ್ಲಿ ಪೂಜ್ಯರ ನಡೆದಾಡುವ ಭೂಮಿಯಲ್ಲಿ ತಾವು ಕಲಿತ ಮಕ್ಕಳು ಮುಂದಿನ ಶಾಲೆಯಲ್ಲಿ ಹೋದರೂ ಕೂಡ ಈ ಶಾಲೆಯ ಗುರುಗಳು ಹಾಗೂ ಶಾಲೆಯ ಮೇಲೆ ಪ್ರೀತಿ ಇರಬೇಕೆಂದರು.

ಶಿಕ್ಷಣ ಪಡೆದು ತಾವುಗಳು ಆದರ್ಶ ವ್ಯಕ್ತಿತ್ವಮೈಗೂಡಿಸಿಕೊಳ್ಳಬೇಕು ಎಂದು ಮಾರ್ಮಿಕವಾಗಿ ಹೊಳೆ ಸಮುದ್ರ ವಲಯದ ಸಿ ಆರ್ ಸಿ ಮುಖ್ಯ ಅತಿಥಿಯ ಸ್ಥಾನ ವಹಿಸಿ ಕೊಂಡು ಮಾತನಾಡಿದರು.

ಕಾರ್ಯಕ್ರಮದ ಪ್ರಸ್ತಾವಿಕ ನುಡಿಗಳೊಂದಿಗೆ ಸಂಗೀತ ಮೇತ್ರೆ ವಚನ ಗಾಯನ ಮಾಡಿದರು. ಜ್ಯೋತಿ,ಬಸವರಾಜ್ ಸಿಂದೆ ಸುರೇಶ ನೀಲಮಠ,ಶಿವಕುಮಾರ ಸ್ವಾಮಿ ,ವೈಶಾಲಿ ಬಿರಾದಾರ,

ಸ್ವೇತಾ ಸೋಲಾಪುರೆ ಸುಮನ ಸೇರಿದಂತೆ ಸಿಬ್ಬಂದಿ ವರ್ಗದವರು ಮದ್ದು ಮಕ್ಕಳು ಇದ್ದರು.ಸಂಚಾಲನೆ ರೇಷ್ಮಾ ಮಾಡಿದರು, ಸ್ವಾಗತ ಭಾಷಣ ಶಾಲೆಯ ಮುಖ್ಯಗುರುಗಳು ಸಂಜು ಕುಮಾರ್ ಮೆಂಗ ನಡೆಸಿಕೊಟ್ಟರು.

# ಅಕ್ರಮವಾಗಿ ಪಡಿತರ ಅಕ್ಕಿ ಸಾಗಾಣಿಕೆ: ದಾಳಿ ನಡೆಸಿ 17.70 ಲಕ್ಷ ರೂ. ಮೌಲ್ಯದ ಒಟ್ಟು 515 ಕ್ವಿಂಟಾಲ್ ಪಡಿತರ ಅಕ್ಕಿ ಹಾಗೂ 6 ವಾಹನಗಳು ಜಪ್ತಿ

ಕಲಬುರಗಿ,ಮಾ.26:ಕಲಬುರಗಿ ಜಿಲ್ಲೆಯಲ್ಲಿ 2025 ರ ಮಾರ್ಚ್ ಮಾಹೆಯಲ್ಲಿ ಸರ್ಕಾರದ ವಿವಿಧ ಯೋಜನೆಯಡಿ ಹಾಗೂ ಸಾರ್ವಜನಿಕ ವಿತರಣಾ ವ್ಯವಸ್ಥೆಗೆ ಬಿಡುಗಡೆಯಾದ ಅಕ್ಕಿಯನ್ನು ಅಕ್ರಮವಾಗಿ ಸಂಗ್ರಹಣೆ ಮತ್ತು ಸಾಗಾಣಿಕೆ ಮಾಡುತ್ತಿರುವ ಕುರಿತು ದೂರು ಬಂದ ಆಧಾರದ ಮೇಲೆ ದಾಳಿ ಮಾಡಿ 17,70,275 ರೂ. ಮೌಲ್ಯದ ಒಟ್ಟು 515 ಕ್ವಿಂಟಾಲ್ ಪಡಿತರ ಅಕ್ಕಿ ಹಾಗೂ 6 ವಾಹನಗಳನ್ನು ಜಪ್ತಿ ಮಾಡಿ ಈ ಕೃತ್ಯಗಳಲ್ಲಿ ಭಾಗಿಯಾದ 18 ಜನ ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಕಲಬುರಗಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

ಆಳಂದ ತಾಲೂಕಿನ ನರೋಣಾ ಪೊಲೀಸ್ ಠಾಣೆಯಲ್ಲಿ–1, ಆಳಂದ ಪೊಲೀಸ್ ಠಾಣೆ–1, ಸೇಡಂ ಪೊಲೀಸ್ ಠಾಣೆಯಲ್ಲಿ–1, ಕಲಬುರಗಿ ನಗರದ ಸಬ್–ಅರ್ಬನ್ ಪೊಲೀಸ್ ಠಾಣೆಯಲ್ಲಿ–2, ರೋಜಾ ಪೊಲೀಸ್ ಠಾಣೆಯಲ್ಲಿ–1, ಚೌಕ್ ಪೊಲೀಸ್ ಠಾಣೆಯಲ್ಲಿ–1 ಸೇರಿದಂತೆ ಒಟ್ಟು 7 ಪ್ರಕರಣಗಳನ್ನು ಅಗತ್ಯ ವಸ್ತುಗಳ ಕಾಯ್ದೆ–1955 ರಡಿ ದಾಖಲಿಸಲಾಗಿದೆ.

ಕಲಬುರಗಿ ಜಿಲ್ಲೆಯಲ್ಲಿ ಸರ್ಕಾರದ ವಿವಿಧ ಯೋಜನೆಯಡಿ ಹಾಗೂ ಸಾರ್ವಜನಿಕ ವಿತರಣಾ ವ್ಯವಸ್ಥೆಯಡಿ ವಿತರಿಸಲಾಗುತ್ತಿರುವ ಪಡಿತರ ಅಕ್ಕಿಯನ್ನು ಅಕ್ರಮವಾಗಿ ಮಾರಾಟ ಮಾಡುವುದು, ಖರೀದಿ ಮಾಡುವುದು ಹಾಗೂ ಅಕ್ರಮ ದಾಸ್ತಾನು ಸಾಗಾಣಿಕೆ ಮಾಡುವುದು ಕಂಡುಬಂದಲ್ಲಿ ಸಾರ್ವಜನಿಕರು ಕೂಡಲೇ ಆಹಾರ ಇಲಾಖೆಗೆ ಅಥವಾ ಪೊಲೀಸ್ ಇಲಾಖೆಗೆ ನಿರ್ಭೀತಿಯಾಗಿ ಮಾಹಿತಿ ನೀಡಿಬೇಕು. ಇಂತಹ ಪ್ರಕರಣಗಳಲ್ಲಿ ಭಾಗಿಯಾದವರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುದೆ. ಮಾಹಿತಿ ನೀಡಿದವರ ವಿವರಗಳನ್ನು ಗೌಪ್ಯವಾಗಿ ಇಡಲಾಗುತ್ತದೆ.

ಸಾರ್ವಜನಿಕ ವಿತರಣಾ ವ್ಯವಸ್ಥೆಯಡಿ ಪಡಿತರ ಚೀಟಿದಾರರಿಗೆ ಹಂಚಿಕೆಯಾಗಿರುವ ಅಕ್ಕಿಯನ್ನು ಅಕ್ರಮವಾಗಿ ಖರೀದಿ ಮಾಡಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುವ ಉದ್ದೇಶದಿಂದ ಅನಧೀಕೃತವಾಗಿ ಸಂಗ್ರಹಿಸಿ ಮಾರಾಟ ಮಾಡುವುದು ಗಂಭೀರವಾದ ಅಪರಾಧವಾಗಿದ್ದು, ಇಂತಹ ಅಪರಾಧಗಳಲ್ಲಿ ಭಾಗಿಯಾದವರ ವಿರುದ್ಧ ಅತ್ಯಂತ ಕಠಿಣ ಕ್ರಮಕೈಗೊಳ್ಳಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

# ಕುರಿ ಕಳ್ಳತನ: ಇಬ್ಬರ ಬಂಧನ



ಕಲಬುರಗಿ:ಮಾ.26:ಜಿಲ್ಲೆಯ ಹಳೆ ಶಹಾಬಾದ ಮತ್ತು ಮಾಲಗತ್ತಿ ಗ್ರಾಮಗಳಲ್ಲಿ ನಡೆದ ಕುರಿ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಶಹಾಬಾದ ನಗರ ಠಾಣೆ ಪೊಲೀಸರು ಇಬ್ಬರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ಎಸ್‌ಪಿ ಅಡ್ಡೂರು ಶ್ರೀನಿವಾಸಲು ತಿಳಿಸಿದರು.

ನಗರದ ಪೊಲೀಸ್ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯಾದಗಿರಿ ತಾಲ್ಲೂಕಿನ ಕುರುಕಂಬ ತಾಂಡಾದ ಶಂಕರ ತಂದೆ ಮಲ್ಲು ಅಲಿಯಾಸ್ ಖೇಮ್ಯಾ ರಾಠೋಡ್, ಹೊರಂಚಿ ತಾಂಡಾದ ದೇವಪ್ಪ ತಂದೆ ಸಾಯಬಣ್ಣ ಗಾಲೆಪ್ಪ ಎಂಬುವವರನ್ನು ಬಂಧಿಸಿ 40 ಸಾವಿರ ರೂ.ಮೌಲ್ಯದ 8 ಕುರಿ ಮರಿ, 1.55 ಲಕ್ಷ ರೂ.ನಗದು ಸೇರಿ 1.95 ಲಕ್ಷ ರೂ.ಮೌಲ್ಯದ ವಸ್ತುವನ್ನು, ಇನ್ನೊಂದು ಪ್ರಕರಣದಲ್ಲಿ 81 ಸಾವಿರ ರೂ.ನಗದು, ಕುರಿ ಕಳ್ಳತನಕ್ಕೆ ಉಪಯೋಗಿಸಿದ ಟಾಟಾ ಗೂಡ್ಸ್ ವಾಹನ ಸೇರಿ 2.76 ಲಕ್ಷ ರೂ.ಮೊತ್ತದ ವಸ್ತುಗಳನ್ನು ಜಪ್ತಿ ಮಾಡಿದೆ ಎಂದು ತಿಳಿಸಿದರು.

ಇನ್ನೊಬ್ಬ ಆರೋಪಿ ಯಾದಗಿರಿ ತಾಲ್ಲೂಕಿನ ಮುಂಡರಗಿ ಸಣ್ಣ ತಾಂಡಾದ ದಶರಥ ತಂದೆ ಚನ್ನಪ್ಪ ಅಲಿಯಾಸ್ ಚಿನ್ನಾ ಅಲಿಯಾಸ್ ಚಿನ್ನಾ ಚವ್ಹಾಣ್ ಎಂಬಾತ ತಲೆ ಮರೆಸಿಕೊಂಡಿದ್ದು, ಆತನ ಪತ್ತೆ-ಕಾರ್ಯ ಜಾರಿಯಲ್ಲಿದೆ ಎಂದು ಅವರು ತಿಳಿಸಿದರು.

ಹಳೆ ಶಹಾಬಾದನ ಶಿವರಾಯ ಹಾಜಪ್ಪ ಹುಬ್ಬಳ್ಳಿ ಅವರ ಮನೆ ಮುಂದಿನ ಕುರಿ ದೊಡ್ಡಿಯಲ್ಲಿ ಕಟ್ಟಿದ್ದ 30 ಕುರಿ ಮತ್ತು 10 ಕುರಿ ಮರಿ ಮತ್ತು ಮಾಲಗತ್ತಿ ಗ್ರಾಮದ ನಾಗರಾಜ ಶಾಂತಪ್ಪ ಸಾಲೊಳ್ಳಿ ಅವರ ಹೊಲದಲ್ಲಿನ ಮನೆ ಮುಂದೆ ಕಟ್ಟಿದ್ದ 12 ಕುರಿ ಮತ್ತು 6 ಹೋತಗಳು ಕಳುವಾದ ಬಗ್ಗೆ ಶಹಾಬಾದ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಈ ಎರಡೂ ಪ್ರಕರಣದಲ್ಲಿನ ಆರೋಪಿಗಳ ಪತ್ತೆಗೆ ಹೆಚ್ಚುವರಿ ಎಸ್‌ಪಿ ಮಹೇಶ ಮೇಘಣ್ಣನವರ್, ಶಹಾಬಾದ ಡಿಎಸ್‌ಪಿ ಶಂಕರಗೌಡ ಪಾಟೀಲ ಮಾರ್ಗದರ್ಶನದಲ್ಲಿ ಶಹಾಬಾದ ಪಿಐ ನಟರಾಜ ಲಾಡೆ, ಪಿಎಸ್‌ಐ ಶಾಮರಾಯ, ಎಎಸ್‌ಐ ಮಲ್ಲಿಕಾರ್ಜುನ, ಸಿಬ್ಬಂದಿಗಳಾದ ದೊಡ್ಡಪ್ಪ, ನಾಗೇಂದ್ರ, ಬಸವರಾಜ, ಸಂತೋಷ, ಹುಸೇನ ಪಾಷ ಅವರನ್ನು ಒಳಗೊಂಡ ಎರಡು ಪ್ರತ್ಯೇಕ ತಂಡ ರಚಿಸಲಾಗಿತ್ತು. ಈ ತಂಡಗಳು ತನಿಖೆ ನಡೆಸಿ ಕುರಿ ಕಳರನ್ನು ಬಂಧಿಸುವಲ್ಲಿ ಯಶಸ್ವಿಯಾಗಿದೆ ಎಂದು ತಿಳಿಸಿದರು.

ಕುರಿ ಕಳ್ಳರು ಈ ಮೊದಲು ಯಾದಗಿರಿ, ತೆಲಂಗಾಣ, ಆಂಧ್ರಪ್ರದೇಶ ಸೇರಿದಂತೆ ಇತರ ಕಡೆಗಳಲ್ಲಿ ಕುರಿ ಕಳ್ಳತನ ಮಾಡಿದ ಬಗ್ಗೆ ಪ್ರಕರಣಗಳು ದಾಖಲಾಗಿವೆ ಎಂದು ಎಸ್‌ಪಿ ತಿಳಿಸಿದರು.

ಕುರಿ ಕಳ್ಳರನ್ನು ಪತ್ತೆ ಹಚ್ಚುವಲ್ಲಿ ಯಶಸ್ವಿಯಾದ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಕಾರ್ಯವನ್ನು ಅವರು ಶ್ಲಾಘಿಸಿದರು.

# ಏಪ್ರಿಲ್ ತಿಂಗಳಲ್ಲಿ ಜಿಲ್ಲೆಯಲ್ಲಿ ಬೃಹತ್ ಉದ್ಯೋಗ ಮೇಳ ಆಯೋಜನೆ: ಜಿಲ್ಲಾಧಿಕಾರಿಗಳಿಂದ ಪೋಸ್ಟರ್ ಬಿಡುಗಡೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.26:ಕೌಶಲ್ಯಾಭಿವೃದ್ಧಿ ನಿಗಮದಿಂದ 2025ರ ಏಪ್ರಿಲ್ ತಿಂಗಳಲ್ಲಿ ಕಲಬುರಗಿ ಜಿಲ್ಲೆಯಲ್ಲಿ ಆಯೋಜಿಸುತ್ತಿರುವ ಬೃಹತ್ ಉದ್ಯೋಗ ಮೇಳಕ್ಕೆ ಸಂಬಂಧಿಸಿದಂತೆ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳು ಹಾಗೂ ಇತರೆ ಜಿಲ್ಲೆಯ ಅಭ್ಯರ್ಥಿಗಳಿಗೆ ಉದ್ಯೋಗ ಮೇಳದ ಕುರಿತು ಅರಿವು ಮೂಡಿಸಲು ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪೋಸ್ಟರ್ ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ನಾಗೂಬಾಯಿ ಪಿ. ಸೂರ್ಯವಂಶಿ, ಕಲಬುರಗಿ ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಹಾಗೂ ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ ಅವರು ಉಪಸ್ಥಿತರಿದ್ದರು.

ಈ ಬೃಹತ್ ಉದ್ಯೋಗ ಮೇಳದಲ್ಲಿ ಪ್ರತಿಷ್ಠಿತ ಸುಮಾರು 250 ಕಂಪನಿಗಳು ಮತ್ತು ಸ್ಥಳೀಯ ಉದ್ಯೋಗ ನೀಡುವ ಕಂಪನಿಗಳು ಭಾಗವಹಿಸಲಿವೆ. ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳ ಅಭ್ಯರ್ಥಿಗಳನ್ನು ಒಳಗೊಂಡಂತೆ ಇತರೆ ಜಿಲ್ಲೆಯ ಸುಮಾರು 20,000 ಕ್ಕೂ ಹೆಚ್ಚು ಅಭ್ಯರ್ಥಿಗಳು ಭಾಗವಹಿಸುವ ನಿರೀಕ್ಷೆ ಇದೆ.

ಈ ಉದ್ಯೋಗ ಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ಸ್ಕಿಲ್ ಕನೆಕ್ಟ್ ಪೋರ್ಟಲ್‌ಗೆ <https://skillconnect.kaushalkar.com> ಭೇಟಿ ನೀಡಿ ಆನ್‌ಲೈನ್ ಮೂಲಕ ರಜಿಸ್ಟರ್ ಮೇಲೆ ಕ್ಲಿಕ್ ಮಾಡಿ ತಮ್ಮ ಹೆಸರನ್ನು ನೋಂದಣಿ ಮಾಡಿಕೊಳ್ಳಬೇಕು. ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ ಬೆಂಗಳೂರು, ಜಿಲ್ಲಾಡಳಿತ ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ ಕಲಬುರಗಿ ಇವುಗಳ ಸಹಯೋಗದಲ್ಲಿ ವೈದ್ಯಕೀಯ ಶಿಕ್ಷಣ ಸಚಿವರು ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರಾದ ಮಾನ್ಯ ಡಾ॥ ಶರಣಪ್ರಕಾಶ ಪಾಟೀಲ್ ಇವರ ಅಧ್ಯಕ್ಷತೆಯಲ್ಲಿ ಈ ಬೃಹತ್ ಉದ್ಯೋಗ ಮೇಳ–2025 ಮೇಳವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜಿಲ್ಲಾ ಕೌಶಲ್ಯ ಮಿಷನ್‌ನ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲೆಯ ಮಹಿಳಾ ಉದ್ಯಮಿಗಳನ್ನು ಉತ್ತೇಜಿಸಲು ವಿಶೇಷ ತರಬೇತಿ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮಾ:26:ವಿಶೇಷವಾಗಿ ಮಹಿಳೆ ಉದ್ಯಮಿಗಳನ್ನು ಉತ್ತೇಜಿಸಲು ಹಾಗೂ ಪ್ರೋತ್ಸಾಹಿಸಲು ಮುಂಬರುವ ದಿನಗಳಲ್ಲಿ ಕಲಬುರಗಿ ಕೆ.ಕೆ.ಸಿ.ಸಿ.ಐ. ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರದ ವತಿಯಿಂದ ಜಂಟಿಯಾಗಿ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರಿಗಾಗಿ ಜಾಗೃತಿ ಶಿಬಿರಗಳನ್ನು ಹಾಗೂ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕೆಂದು ಕಲಬುರಗಿ ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್ ಅವರು ಹೇಳಿದರು.

ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯ ಜಿಲ್ಲಾ ಮಟ್ಟದ ಏಕ ಗವಾಕ್ಷಿ ಒಪ್ಪಿಗೆ ಸಮಿತಿ (ಆಐಖಫಅಅ), ಕೈಗಾರಿಕಾ ಸ್ಪಂದನ ಸಮಿತಿ, ಪ್ರಧಾನಮಂತ್ರಿ ಉದ್ಯೋಗ ಸೃಜನ ಯೋಜನೆ (ಕಒಇಉಕ) ಸಮಿತಿ, ಪಿ.ಎಂ–ವಿಶ್ವಕರ್ಮ ಸಮಿತಿ ಮತ್ತು ಜಿಲ್ಲಾ ಮಟ್ಟದ ರಫ್ತು ಉತ್ತೇಜನ ಸಮಿತಿ (ಆಐಇಕಅ) ಸಮಿತಿಗಳ ಸಭೆಯಲ್ಲಿ ಮಾತನಾಡಿದರು.

ಪಿ.ಎಂ–ವಿಶ್ವಕರ್ಮ ಯೋಜನೆಗೆ ಸಂಬಂಧಿಸಿದಂತೆ ಸಭೆಯಲ್ಲಿ ಗ್ರಾಮ ಪಂಚಾಯತ್ ಹಾಗೂ ಕಲಬುರಗಿ ಮಹಾನಗರಪಾಲಿಕೆಯಲ್ಲಿ ಲಾಗಿನ್‌ನಲ್ಲಿ ಬಾಕಿಯಿರುವ ಅರ್ಜಿಗಳನ್ನು ತುರ್ತಾಗಿ ವಿಲೇವಾರಿ ಮಾಡಬೇಕು. ಜಿಲ್ಲೆಯಲ್ಲಿ ತರಬೇತಿ ಹಮ್ಮಿಕೊಳ್ಳುತ್ತಿರುವ ಕುರಿತು ಮಾಹಿತಿಯನ್ನು ಜಿಲ್ಲಾ ಕೈಗಾರಿಕಾ ಕೇಂದ್ರ ಕಚೇರಿಗೆ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳಿಗೆ ಒದಗಿಸಬೇಕು ಎಂದರು.

ಸದರಿ ಯೋಜನೆಯ ಫಲಾನುಭವಿಗಳಿಗೆ ಸಾಲ ಸೌಲಭ್ಯವನ್ನು ಒದಗಿಸಲು ಜಿಲ್ಲಾ ಅಗ್ರಗಣ್ಯ ಬ್ಯಾಂಕ್ ವ್ಯವಸ್ಥಾಪಕರಿಗೆ ತಮ್ಮ ಅಧೀನದಲ್ಲಿರುವ ಬ್ಯಾಂಕ್ ವ್ಯವಸ್ಥಾಪಕರುಗಳಿಗೆ ಸೂಚಿಸಲು ತಿಳಿಸಿದರು.

ಕೈಗಾರಿಕಾ ಸ್ಪಂದನದಡಿ ಈಗಾಗಲೇ ಸ್ವೀಕೃತವಾದ ಅರ್ಜಿಗಳನ್ನು ವಿಲೇ ಮಾಡಿ ಮುಂದಿನ ದಿನಗಳಲ್ಲಿ ಕೈಗಾರಿಕಾ ಸ್ಪಂದನ ಕುರಿತು ಹೆಚ್ಚಿನ ಪ್ರಚಾರ ನೀಡಿ ಸಮಸ್ಯೆಯಲ್ಲಿರುವ ಕೈಗಾರಿಕಾ ಘಟಕಗಳಿಂದ ಅಹವಾಲು ಸ್ವೀಕರಿಸಿ ಇತ್ಯರ್ಥಕ್ಕಾಗಿ ಮುಂದಿನ ಸಭೆಯಲ್ಲಿ ಮಂಡಿಸಲು ಸೂಚಿಸಿದರು.

ಪಿಎಂಇಜಿಪಿ ಯೋಜನೆಯಡಿ ನಿಗದಿತ ಗುರಿ 38ರ ಪೈಕಿ 36 ಈಗಾಗಲೇ ಗುರಿ ಸಾಧಿಸಿದ್ದು, ಜಿಲ್ಲಾ ಅಗ್ರಗಣ್ಯ ಬ್ಯಾಂಕ್ ವ್ಯವಸ್ಥಾಪಕರಿಗೆ ತಮ್ಮ ಅಧೀನದಲ್ಲಿರುವ ಬ್ಯಾಂಕ್ ವ್ಯವಸ್ಥಾಪಕರುಗಳಿಗೆ ಕನಿಷ್ಠ 10 ಪಿಎಂಇಜಿಪಿ ಅರ್ಜಿಗಳನ್ನು ಮಂಜೂರಾತಿ ನೀಡಿ ಸಾಲ ಬಿಡುಗಡೆ ಮಾಡುವ ನಿಟ್ಟಿನಲ್ಲಿ ಕ್ರಮ ವಹಿಸಲು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳುವಂತೆ ತಿಳಿಸಿದರು.

ಕಲಬುರಗಿ ಜಿಲ್ಲೆಯಿಂದ 2022–23 ಸಾಲಿನಲ್ಲಿ ರೂ.448.76 ಕೋಟಿ ಹಾಗೂ 2023–24 ಸಾಲಿನಲ್ಲಿ ರೂ.129.67 ಕೋಟಿ ಮೊತ್ತದ ರಫ್ತಾಗಿರುತ್ತದೆ ಎಂದು ಸಭೆಗೆ ಅಧಿಕಾರಿಗಳು ಮಾಹಿತಿ ನೀಡಿದರು.

ಜಿಲ್ಲೆಯಲ್ಲಿರುವ ರಫ್ತುದಾರರ ಸಮಗ್ರ ಮಾಹಿತಿಯನ್ನು ಸಂಗ್ರಹಿಸಬೇಕು ಹಾಗೂ ಜಿಲ್ಲೆಯಲ್ಲಿ ರಫ್ತು ವ್ಯವಸ್ಥಾಪನಾ ತರಬೇತಿ ಕಾರ್ಯಕ್ರಮವನ್ನು ಮುಂದಿನ ತಿಂಗಳಲ್ಲಿ ಹಮ್ಮಿಕೊಳ್ಳುವಂತೆ ಮತ್ತು ವಿವಿಧ ಇಲಾಖೆಗಳೊಂದಿಗೆ ಸಮನ್ವಯ ವಹಿಸಿ ಜಿಲ್ಲೆಯ ರಫ್ತು ಕಾರ್ಯಯೋಜನೆ ರೂಪಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಕೆ.ಎಸ್.ಎಸ್.ಐ.ಡಿ.ಸಿ, ಎಂಎಸ್‌ಕೆ ಮಿಲ್ಲ್ ರಸ್ತೆಯಲ್ಲಿರುವ ಕೈಗಾರಿಕಾ ಪ್ರದೇಶದಲ್ಲಿ ಬಾಕಿ ಉಳಿದ ರಸ್ತೆ, ಒಳಚರಂಡಿ, ಬೀದಿ ದೀಪ ಕಾಮಗಾರಿ ಹಾಗೂ ಇನ್ನಿತರ ಮೂಲಭೂತ ಸೌಕರ್ಯ ಕಾಮಗಾರಿಯನ್ನು ಕೈಗೊಳ್ಳಬೇಕೆಂದು ಸಭೆಯಲ್ಲಿ ಉಪಸ್ಥಿತರಿದ್ದ ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತರಿಗೆ ಸೂಚಿಸಿದರು.

ಕೆ.ಐ.ಎ.ಡಿ.ಬಿ. ಕಲಬುರಗಿರವರಿಗೆ ಕಪನೂರ 3ನೇ ಹಂತ (ದಾಲ್ ಪಾರ್ಕ) ನಲ್ಲಿರುವ ನಿವೇಶನಗಳ ಹಂಚಿಕೆ ಪತ್ರವನ್ನು ತ್ವರಿತಗತಿಯಲ್ಲಿ ಅರ್ಜಿದಾರರಿಗೆ ನೀಡಬೇಕು. ಕಪನೂರ 2ನೇ ಹಂತ, ಕೆ.ಐ.ಎ.ಡಿ.ಬಿ, ಕೈಗಾರಿಕಾ ಪ್ರದೇಶ, ಕಲಬುರಗಿಯಲ್ಲಿ ರಾಷ್ಟ್ರೀಯ ಹೆದ್ದಾರಿ ಹಾಗೂ ಕೈಗಾರಿಕಾ ಪ್ರದೇಶದ ಮಧ್ಯದ ಜಾಗದಲ್ಲಿ ನಿಯಮಬಾಹಿರವಾಗಿ ಒತ್ತುವರಿ ಮಾಡಿರುವ ಜಾಗವನ್ನು ತೆರವುಗೊಳಿಸಲು ಕೆ.ಐ.ಎ.ಡಿ.ಬಿ ಹಾಗೂ ಭಾರತೀಯ ರಾಷ್ಟ್ರೀಯ ಹೆದ್ದಾರಿಗಳ ಅಭಿವೃದ್ಧಿ ಪ್ರಾಧಿಕಾರದ ಅಧಿಕಾರಿಗಳಿಗೆ ಸೂಚಿಸಿದರು.

ಕಲಬುರಗಿ ಕಪನೂರ ಕೈಗಾರಿಕಾ ಪ್ರದೇಶದ 3ನೇ ಹಂತದಲ್ಲಿ ಆಟೋ ಆಂಡ್ ಜನರಲ್ ಇಂಜನಿಯರಿಂಗ್ ಕ್ಲಸ್ಟರ್ (Auto and General Engineering Cluster) ಗಾಗಿ ಗುರುತಿಸಿದ 20 ಎಕರೆ ಜಮೀನನ್ನು ಮೀಸಲು ಇಡಲು ಹಾಗೂ ಉದ್ದೇಶಿತ ಕ್ಲಸ್ಟರ್‌ದಲ್ಲಿ ಸಣ್ಣ ಸಣ್ಣ ನಿವೇಶನಗಳನ್ನು ಸೃಷ್ಟಿಸಿ ಅವುಗಳನ್ನು ಸಂಬಂಧಪಟ್ಟ ಉದ್ಯಮಿದಾರರಿಗೆ ಹಂಚಿಕೆ ಮಾಡಲು ಕಲಬುರಗಿ ಜಿಲ್ಲಾ ಮಟ್ಟದ ಏಕ ಗವಾಕ್ಷಿ ಒಪ್ಪಿಗೆ ಸಮಿತಿಗೆ ಅಧಿಕಾರ ನೀಡುವ ಪ್ರಸ್ತಾವನೆಯನ್ನು ಕೆಐಎಡಿಬಿ ಕೇಂದ್ರ ಕಛೇರಿಯಲ್ಲಿ ಅನುಮೋದನೆಗೆ ಬಾಕಿಯಿದ್ದು, ಅದನ್ನು ತ್ವರಿತಗತಿಯಲ್ಲಿ ಅನುಮೋದನೆ ಪಡೆದುಕೊಳ್ಳಲು ಕಾರ್ಯನಿರ್ವಾಹಕ ಅಭಿಯಂತರರು ಮತ್ತು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಿಗೆ ನಿರ್ದೇಶಿಸಿದರು.

ಇದೇ ಸಂದರ್ಭದಲ್ಲಿ ಡಾ॥ ಸರೋಜಿನಿ ಮಹಿಷಿ ವರದಿಯಂತೆ ಕೈಗಾರಿಕಾ ಘಟಕವಾರು ಸ್ಥಳೀಯರಿಗೆ ಉದ್ಯೋಗ ನೀಡುವಿಕೆ ಕುರಿತು ವಿವರವಾಗಿ ಚರ್ಚಿಸಲಾಯಿತು.

ಸಭೆಯಲ್ಲಿ ಕಲಬುರಗಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ ಸಿಂಗ್ ಮೀನಾ, ಕಲಬುರಗಿ ಮಹಾನಗರ ಪಾಲಿಕೆ ಆಯುಕ್ತ ಶಿಂಧೆ ಅವಿನಾಶ ಸಂಜೀವನ್, ಕಲಬುರಗಿ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕಿ ಸುರೇಖಾ ಮುನೋಳಿ, ಉಪನಿರ್ದೇಶಕ ಅಬ್ದುಲ್ ಅಜೀಮ್ ಸೇರಿದಂತೆ ಸಂಬಂಧಪಟ್ಟ ಅಧಿಕಾರಿ/ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಮೊದಲು ಸೊಸೆಯಾಗಿ ಬಂದವಳು ನಂತರ ಅತ್ತೆಯಾಗುತ್ತಾಳೆ : ಮಾನಪ್ಪ ವಜ್ಜಲ್



ಮಲ್ಲಮ್ಮ ನುಡಿ ವಾರ್ತೆ

ಲಿಂಗಸಗೂರು. ಮಾ. 26: ಯಾವುದೇ ಕುಟುಂಬದಿಂದ ಜನಿಸಿದ ಹೆಣ್ಣು ಮಗಳಿರಲಿ ತವರು ಮನೆಯಲ್ಲಿ ತಂದೆ ತಾಯಿ ಕಲಿಸಿದ ಸಂಸ್ಕಾರವನ್ನು ಅರಿತು ಗಂಡನ ಮನೆಯಲ್ಲಿ ಸಂಸಾರ ಮಾಡಿದರೆ ಅದು ಹೆತ್ತ ತಂದೆ ತಾಯಿಗಳಿಗೆ ಸಲ್ಲುವ ಗೌರವವಾಗುತ್ತದೆ. ಯಾವುದೇ ಹೆಣ್ಣು ಮಗಳಿರಲಿ ತಕ್ಷಣ ಅತ್ತೆಯಾಗಲು ಸಾಧ್ಯವಿಲ್ಲ. ಮೊದಲು ಸೊಸೆಯಾಗಿ ಬಂದವಳು ನಂತರ ಅತ್ತೆಯಾಗುತ್ತಾಳೆ, ತದನಂತರ ಅಜ್ಜಿಯಾಗುತ್ತಾಳೆ ಎಂದು ಶಾಸಕ ಮಾನಪ್ಪ ವಜ್ಜಲ್ ದಾಂಪತ್ಯ ಜೀವನಕ್ಕೆ ಕಾಲಿಟ್ಟ ನೂತನ ವಧು ವರರಿಗೆ ಕಿವಿಮಾತು ಹೇಳಿದರು.

ಅವರು ಕರಡಕಲ್ ಗ್ರಾಮದ ಶ್ರೀ ಸಿದ್ಧಾರೂಢರ ಮಠದಲ್ಲಿ ಆಯೋಜಿಸಲಾಗಿದ್ದ 23ನೇ ವೇದಾಂತ ಪರಿಷತ್, ಹಾಗೂ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡುತ್ತಾ ಶ್ರೀ ಸಿದ್ಧಾರೂಢರ ಮಠದಿಂದ ಪ್ರತಿ ವರ್ಷ ಹಮ್ಮಿಕೊಳ್ಳುತ್ತಿರುವ ಉಚಿತ ಸಾಮೂಹಿಕ ವಿವಾಹ ಕಾರ್ಯಕ್ರಮ ತುಂಬಾ ಯಶಸ್ವಿಯಾಗಿ ನಡೆಯುತ್ತಿದ್ದು ಮಠದ ಭಕ್ತರಿಗೆ ಅಭಿನಂದನೆಗಳನ್ನು ಸಲ್ಲಿಸುತ್ತಾ ಇಂತಹ ಕಾರ್ಯಕ್ರಮದ ಮೂಲಕ ಸರಳವಾಗಿ ದಾಂಪತ್ಯ ಜೀವನಕ್ಕೆ ಕಾಲಿಡುತ್ತಿರುವ ನವ ಜೋಡಿಗಳು ಪರಸ್ಪರ ಒಬ್ಬರನ್ನೊಬ್ಬರು ಅರಿತುಕೊಂಡು ತಂದೆ ತಾಯಿ ಅತ್ತೆ ಮಾವನವರಿಗೆ ಗೌರವ ಕೊಟ್ಟು ಸಂಸಾರ ನಡೆಸಿದರೆ ಮುಂದಿನ ದಿನಮಾನಗಳಲ್ಲಿ ಚೊಕ್ಕ ಸಂಸಾರವಾಗುವುದರಲ್ಲಿ ಯಾವುದೇ ಸಂದೇಹವಿಲ್ಲ ಎಂದು ಅವರು ಹೇಳಿದರು. ಮುಖಂಡ ಎಚ್ ಬಿ ಮುರಾರಿ ಮಾತನಾಡಿ ಸಾಲ ಶೂಲ ಮಾಡಿ ಆಡಂಬರದ ಮದುವೆ ಮಾಡಿ ಸಾಲದಲ್ಲಿ ನರಳುವುದಕ್ಕಿಂತ ಸರಳವಾಗಿ ಇಂತಹ ಸಾಮೂಹಿಕ ಕಾರ್ಯಕ್ರಮಗಳಲ್ಲಿ ನವದಾಂಪತ್ಯ ಜೀವನಕ್ಕೆ ಕಾಲಿಟ್ಟು ಹೆತ್ತ ತಂದೆ ತಾಯಿ ಹಾಗೂ ಅತ್ತೆ ಮಾವನವರನ್ನು ವೃದ್ಧಾಶ್ರಮಗಳಿಗೆ ಕಳುಹಿಸದೆ ಅವರನ್ನು ಪ್ರೀತಿ ಗೌರವ ವಿಶ್ವಾಸದಿಂದ ಅವರನ್ನು ದೇವರಂತೆ ಕಂಡರೆ ಅದೇ ನಮಗೆ ಸಿಗುವ ದೊಡ್ಡ ಸಂತಸ. ಇಂತಹ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ನವ ದಾಂಪತ್ಯಕ್ಕೆ ಕಾಲಿಟ್ಟ 10 ಜೋಡಿಗಳಿಗೆ ಶುಭ ಹಾರೈಸಿದ ಅವರು ಶ್ರೀ ಸಿದ್ಧಾರೂಢರ ಮಠದಲ್ಲಿ ಇಂತಹ ದೊಡ್ಡ ದೊಡ್ಡ ಕಾರ್ಯಕ್ರಮಗಳು ಹಮ್ಮಿಕೊಳ್ಳುತ್ತಿರುವುದು ಸಂತಸದ ವಿಷಯವಾಗಿದ್ದು ಇಂಥ ಕಾರ್ಯಕ್ರಮಗಳಿಗೆ ಗ್ರಾಮಸ್ಥರ ಸಹಾಯ ಸಹಕಾರ ಆತ್ಯವಶ್ಯವಾಗಿರುತ್ತದೆ. ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಂಡ ಮಠದ ಎಲ್ಲಾ ಸೇವಾ ಟ್ರಸ್ಟ್ ಕಮಿಟಿ ಸದಸ್ಯರಿಗೆ ಗ್ರಾಮಸ್ಥರಿಗೆ ಅಭಿನಂದನೆಗಳನ್ನು ಸಲ್ಲಿಸುವದಾಗಿ ಅವರು ತಿಳಿಸಿದರು.

ಶ್ರೀ ಜ್ಞಾನಾನಂದ ಸ್ವಾಮಿಗಳು ಶ್ರೀ ಶಿವಾನಂದ ಮಠ ಮಟಮಾರಿ, ಶ್ರೀ ಶಿವರಾಮಾನಂದ ಭಾರತಿ ಸ್ವಾಮಿಗಳು ಶ್ರೀ ಶಂಕರಾಚಾರ್ಯ ಮಠ ಕಲ್ಲೂರು ಸ್ವಾಮಿಗಳು ಸಾನಿಧ್ಯ ವಹಿಸಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.